# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ – 1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಗುರುವಾರ, ದಿನಾಂಕ:22.01.2026

**(01)**

ದಿನಾಂಕ:22.01.2026 ರಂದು ಬೆಳಗ್ಗೆ 11.50 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

'ವಂದೇ ಮಾತರಂ' ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿದ್ಯುಕ್ತವಾಗಿ ಆರಂಭಗೊಂಡಿತು.

### ಭಾರತದ ಸಂವಿಧಾನ

### ಪೀಠಿಕೆ

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ಮಾಡಿದ ಭಾಷಣದ ಪ್ರತಿಯನ್ನು ಕಾರ್ಯದರ್ಶಿಯವರು ಸದನದ ಮುಂದೆ ಮಂಡಿಸಿದರು.

ಮಾನ್ಯ ಸಭಾನಾಯಕರು ಘನತೆವೆತ್ತ ರಾಜ್ಯಪಾಲರು ಸಂವಿಧಾನದ ಅನುಚ್ಛೇದ 163 ಮತ್ತು 176ನ್ನು ಅಗೌರವಿಸಿರುತ್ತಾರೆಂದು ಪ್ರಸ್ತಾಪಿಸಿದರು.

ಕಾರ್ಯಕಲಾಪಗಳ ಸಲಹಾ ಸಮಿತಿಯ ಜಂಟಿ ಸಭೆಯಲ್ಲಿ ತೀರ್ಮಾನಿಸಿ ತದನಂತರ ಸದನಕ್ಕೆ ತಿಳಿಸಲಾಗುವುದೆಂದು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

# ಸಂತಾಪ ಸೂಚನೆ

ಕಳೆದ ಅಧಿವೇಶನದ ನಂತರ ನಿಧನ ಹೊಂದಿದ ಡಾ: ಭೀಮಣ್ಣ ಖಂಡ್ರೆ, ಮಾಜಿ ಸಚಿವರು, ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಮಾಜಿ ಶಾಸಕರು, ಇವರಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

ಮಾನ್ಯ ಸಭಾನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸಂತಾಪ ಸೂಚನಾ ನಿರ್ಣಯ ಅನುಮೋದಿಸಿ ಮಾತನಾಡಿದರು.

ಶ್ರೀಯುತರುಗಳಾದ:

1. ಶಶೀಲ್ ಜಿ. ನಮೋಶಿ
2. ಡಾ: ಎಂ.ಜಿ. ಮುಳೆ
3. ಅಡಗೂರ್ ಹೆಚ್. ವಿಶ್ವನಾಥ್
4. ಸಲೀಂ ಅಹಮದ್
5. ಬಿ.ಕೆ. ಹರಿಪ್ರಸಾದ್
6. ಡಾ: ಧನಂಜಯ ಸರ್ಜಿ
7. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
8. ಎಂ. ನಾಗರಾಜು
9. ತಿಪ್ಪಣ್ಣಪ್ಪ ಕಮಕನೂರ
10. ಜಗದೇವ್ ಗುತ್ತೇದಾರ್
11. ಭೀಮರಾವ್ ಬಸವರಾಜ ಪಾಟೀಲ್
12. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಮೃತ ಗಣ್ಯರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

ಮಧ್ಯಾಹ್ನ 12.52 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:23.01.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**

**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಶುಕ್ರವಾರ, ದಿನಾಂಕ:23.01.2026

**(02)**

ದಿನಾಂಕ:23.01.2026 ರಂದು ಬೆಳಗ್ಗೆ 11.35 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರಿಗೆ ಅಡ್ಡಿಯುಂಟು ಮಾಡಿದವರ ವಿರುದ್ದ ಕ್ರಮ ಕೈಗೊಳ್ಳುವಂತೆ ಮಾನ್ಯ ವಿರೋಧ ಪಕ್ಷದ ನಾಯಕರು ಪ್ರಸ್ತಾಪಿಸಿದರು.

**"ಗದ್ದಲ"**

ಮಾನ್ಯ ವಿರೋಧ ಪಕ್ಷದ ನಾಯಕರು ದಿನಾಂಕ:22.01.2026 ರಂದು ಘನತೆವೆತ್ತ ರಾಜ್ಯಪಾಲರು ಭಾಷಣ ಮುಗಿಸಿ ನಿರ್ಗಮಿಸುವ ಸಂದರ್ಭದಲ್ಲಿ ಅವರ ಮೇಲೆ ಹಲ್ಲೆ ಮಾಡಲು ಕೆಲ ಶಾಸಕರು ಪ್ರಯತ್ನಿಸಿದ್ದು ಅವರುಗಳ ಮೇಲೆ ಕ್ರಮವಹಿಸಬೇಕು ಎಂದು ಪ್ರಸ್ತಾಪಿಸಿದರು.

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ರಾಜ್ಯಪಾಲರ ಭಾಷಣದ ಸಂದರ್ಭದಲ್ಲಿ ಅನುಸರಿಸಬೇಕಾದ ವಿಧಾನ ಕುರಿತು ಪ್ರಸ್ತಾಪಿಸುತ್ತಾ ರಾಷ್ಟ್ರಗೀತೆಗೆ ಅಪಮಾನವಾಗಿದೆ ಎಂದು ಪ್ರಸ್ತಾಪಿಸಿದರು.

**"ಗದ್ದಲ"**

ಮಧ್ಯಾಹ್ನ 12.00 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 1.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಕಟಣೆ

ದಿನಾಂಕ: 23.01.2026 ರಂದು ನಡೆದ ಕಾರ್ಯಕಲಾಪಗಳ ಜಂಟಿ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ ಎಂದು ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

- ತಾತ್ಕಾಲಿಕ ಕಾರ್ಯಕ್ರಮದ ಪಟ್ಟಿಯ ರೀತ್ಯಾ ದಿನಾಂಕ:31.01.2026ರವರೆಗೆ ಪ್ರತಿ ದಿನ ಬೆಳಗ್ಗೆ 10.30 ಗಂಟೆಯಿಂದ ಕಾರ್ಯಕಲಾಪಗಳನ್ನು ನಡೆಸುವುದು.

- ದಿನಾಂಕ:27.01.2026 ಮತ್ತು 28.01.2026 ರಾಜ್ಯಪಾಲರ ಭಾಷಣದ ಮೇಲಿನ ವಂದನಾರ್ಪಣ ಪ್ರಸ್ತಾವದ ಮೇಲೆ ಚರ್ಚೆ ಹಾಗೂ ಇತರೆ ಸರ್ಕಾರಿ ಕಾರ್ಯಕಲಾಪಗಳು.

- ದಿನಾಂಕ:29.01.2026 ರಂದು ರಾಜ್ಯಪಾಲರ ಭಾಷಣದ ಮೇಲಿನ ವಂದನಾರ್ಪಣ ಪ್ರಸ್ತಾವದ ಮೇಲೆ ಚರ್ಚೆಗೆ ಸರ್ಕಾರದಿಂದ ಉತ್ತರ.

- ದಿನಾಂಕ:30.01.2026 ಮತ್ತು 31.01.2026 ರಂದು ಅಧಿಕೃತ ನಿರ್ಣಯದ ಮೇಲೆ ಚರ್ಚೆ, ಅಂಗೀಕಾರ ಹಾಗೂ ಇತರೆ ಸರ್ಕಾರಿ ಕಾರ್ಯಕಲಾಪಗಳು.

ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರಿಗೆ ಬರೆದಿರುವ ಪತ್ರದಲ್ಲಿನ ಅಂಶಗಳನ್ನು ಹಾಗೂ ಕಾಂಗ್ರೆಸ್ ಪಕ್ಷದ ವತಿಯಿಂದ ನೀಡಿರುವ ಪತ್ರದಲ್ಲಿನ ಅಂಶಗಳನ್ನು ಓದಿದರು. ಎರಡೂ ಪತ್ರಗಳಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ ತದನಂತರ ನಿರ್ಣಯವನ್ನು ಪ್ರಕಟಿಸುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ತಿಳಿಸಿದರು.

## "ಗದ್ದಲ"

ಮಧ್ಯಾಹ್ನ 1.20 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 4.20 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 2. ಸಭಾಪತಿಯವರ ತೀರ್ಪುಗಳು

ಅ) ದಿನಾಂಕ:22.01.2026ರಂದು ಬೆಳಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಮೊದಲನೆ ಮಹಡಿಯಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಭಾಷಣ ಮಾಡಿ ಜೈಹಿಂದ್, ಜೈ ಕರ್ನಾಟಕ ಎಂದು ಮುಕ್ತಾಯಗೊಳಿಸಿ ಸದನದಿಂದ ನಿರ್ಗಮಿಸುವಾಗ ಅವರನ್ನು ಅಡ್ಡಗಟ್ಟಿ ದಿಕ್ಕಾರ ಕೂಗಿ ಅಪಮಾನ ಎಸಗಿರುವ ಮಾನ್ಯ ಶಾಸಕರಾದ ಶ್ರೀ ಎಸ್. ರವಿ ಹಾಗೂ ಶ್ರೀ ಬಿ.ಕೆ. ಹರಿಪ್ರಸಾದ್ ಅವರನ್ನು ಅಮಾನತ್ತಿನಲ್ಲಿಡಬೇಕೆಂದು ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಸದಸ್ಯರುಗಳು ದಿನಾಂಕ:23.01.2026ರಂದು ನೀಡಿರುವ ಪತ್ರದಲ್ಲಿ ವಿನಂತಿಸಿರುತ್ತಾರೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 26ರ ರೀತ್ಯಾ ಅವಲೋಕಿಸಬೇಕಾಗಿರುತ್ತದೆ.

ಸದರಿ ಘಟನೆಯು ವಿಧಾನಸಭೆಯ ಸಭಾಂಗಣದಲ್ಲಿ ಘನತೆವೆತ್ತ ರಾಜ್ಯಪಾಲರು ನಿರ್ಗಮಿಸುವ ವೇಳೆಯಲ್ಲಿ ಜರುಗಿದ್ದು ಆ ಸಂದರ್ಭದಲ್ಲಿ ಜರುಗಿರುವ ಅನುಚಿತ ವರ್ತನೆಯ ಸಂಬಂಧದಲ್ಲಿ ಭಾಗವಹಿಸಿರುವ ಶಾಸಕರುಗಳ ವಿರುದ್ಧ ನೀಡಿರುವ ದೂರನ್ನು ಪರಿಶೀಲಿಸಲು ವಿಧಾನ ಪರಿಷತ್ತಿನ ನೀತಿ ನಿರೂಪಣಾ ಸಮಿತಿಗೆ ವಹಿಸಲು ತೀರ್ಮಾನಿಸಲಾಗಿದೆ.

ಆ) ದಿನಾಂಕ:22.01.2026ರಂದು ಬೆಳಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಮೊದಲನೆ ಮಹಡಿಯಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಭಾಷಣ ಮಾಡಿ ಜೈಹಿಂದ್, ಜೈ ಕರ್ನಾಟಕ ಎಂದು ಮುಕ್ತಾಯಗೊಳಿಸಿ ರಾಜ್ಯಪಾಲರು ಭಾಷಣ ಮುಗಿದ ನಂತರ ರಾಷ್ಟ್ರಗೀತೆ ನುಡಿಸಲು ಅವಕಾಶ ನೀಡದೆ ನಿರ್ಗಮಿಸಿರುವ ನಡೆಯನ್ನು ಖಂಡಿಸಿ ಚರ್ಚಿಸಲು ಅನುಮತಿಸಬೇಕೆಂದು ಮಾನ್ಯ ಸರ್ಕಾರಿ ಮುಖ್ಯ ಸಚೇತಕರು, ಸದಸ್ಯರುಗಳಾದ ಶ್ರೀ ನಸೀರ್ ಅಹ್ಮದ್, ಶ್ರೀ ಬಿ.ಕೆ. ಹರಿಪ್ರಸಾದ್, ಡಾ: ಚಂದ್ರಶೇಖರ ಬಸವರಾಜ ಪಾಟೀಲ್ ಹಾಗೂ ಇತರ ಮಾನ್ಯ ಸದಸ್ಯರುಗಳು ಮನವಿಯನ್ನು ಸಲ್ಲಿಸಿರುತ್ತಾರೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಾವಳಿಗಳ ನಿಯಮ 306 (10)ರೀತ್ಯಾ ರಾಜ್ಯಪಾಲರು ಅಥವಾ ಯಾವುದೇ ನಡವಳಿಯನ್ನು ಕುರಿತು ಆರೋಪಿಸತಕ್ಕದ್ದಲ್ಲ ಎಂಬುದಾಗಿರುತ್ತದೆ. ಅದರಂತೆ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಇತರ ಸದಸ್ಯರುಗಳು ನೀಡಿರುವ ಮನವಿಯನ್ನು ತಿರಸ್ಕರಿಸಲಾಗಿದೆ.

**"ಗದ್ದಲ"**

ಮಧ್ಯಾಹ್ನ 4.40 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಸಂಜೆ 5.35 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಶಾಸಕರಾದ ಶ್ರೀ ಪುಟ್ಟಣ್ಣ ಅವರು ಮಾನ್ಯ ಸಭಾಪತಿಯವರು ನೀಡಿರುವ ತೀರ್ಪನ್ನು ಪುನರ್ ಪರಿಶೀಲಿಸಬೇಕೆಂದು ಕೋರಿದರು. ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಮತ್ತು ಮಾನ್ಯ ಶಾಸಕರು ದಿನಾಂಕ:23.01.2026ರ ಸಂಜೆ 5.30 ಗಂಟೆಯಲ್ಲಿ ನೀಡಿರುವ ಮನವಿಯನ್ನು ಪರಿಶೀಲಿಸಲಾಗುವುದು ಎಂದು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

## 3. ನಿಲುವಳಿ ಸೂಚನೆ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಅಬಕಾರಿ ಇಲಾಖೆಯಲ್ಲಿ ಸಿಎಲ್–2, ಸಿಎಲ್–7, ಸಿಎಲ್–9 ಗಳಿಗೆ ಪರವಾನಗಿ ನೀಡದೆ ದರಪಟ್ಟಿ ನಿಗದಿಪಡಿಸಿ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ನಿಯಮ 330ರಡಿ ಚರ್ಚಿಸಲು ಅವಕಾಶ ನೀಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸಂಜೆ 5.47 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:27.01.2026ರಂದು ಬೆಳಗ್ಗೆ 11.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಮಂಗಳವಾರ, ದಿನಾಂಕ:27.01.2026

**(03)**

ದಿನಾಂಕ:27.01.2026 ರಂದು ಮಧ್ಯಾಹ್ನ 12.08 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಶಾಸಕರಾದ ಶ್ರೀ ಎಸ್.ಎಲ್. ಭೋಜೇಗೌಡ ಅವರು ಬೆಳಗ್ಗೆ 11.30 ಗಂಟೆಗೆ ಅಜೆಂಡಾ ನಿಗದಿಯಾಗಿದ್ದು, ಮಧ್ಯಾಹ್ನ 12.10 ಗಂಟೆಗೆ ಸಭೆ ವಿಳಂಬವಾಗಿ ಆರಂಭವಾಗಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಶಾಸಕರುಗಳ ವಿನಂತಿಯ ಮೇರೆಗೆ ತಡವಾಗಿ ಆರಂಭಿಸಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ದಿನಾಂಕ:23.01.2026ರಂದು ಪ್ರಸ್ತಾಪಿಸಿದ ನಿಲುವಳಿ ಸೂಚನೆಯನ್ನು ನಿಯಮ 330ಕ್ಕೆ ಪರಿವರ್ತಿಸಲಾಗಿದ್ದು, ಸದರಿ ಸೂಚನೆಯನ್ನು ಚರ್ಚಿಸಲು ಅವಕಾಶ ನೀಡಬೇಕೆಂದು ಕೋರಿದರು.

ಪ್ರಶ್ನೋತ್ತರದ ನಂತರ ಮೊದಲಿಗೆ ಚರ್ಚೆಗೆ ಅವಕಾಶ ಕಲ್ಪಿಸಬೇಕೆಂದು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಒತ್ತಾಯಿಸಿದರು.

## 1. ಕ್ರಿಯಾಲೋಪ

ಶ್ರೀ ಡಿ.ಎಸ್. ಅರುಣ್ ಅವರು ದಿನಾಂಕ:22.01.2026ರಂದು ರಾಜ್ಯಪಾಲರು ಭಾಷಣ ಮಾಡಿರುವುದಿಲ್ಲವೆಂದು ಮಾನ್ಯ ಸಭಾನಾಯಕರು ಪ್ರಸ್ತಾಪಿಸಿದ್ದು, ಇಂದಿನ ಅಜೆಂಡಾದಲ್ಲಿ ಸದರಿ ಭಾಷಣಕ್ಕೆ ವಂದನಾರ್ಪಣಾ ಪ್ರಸ್ತಾವ ಮಂಡನೆಗೆ ಸೇರಿಸಲಾಗಿದೆ ಎಂದು ಕ್ರಿಯಾಲೋಪವನ್ನೆತ್ತಿದರು.

ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಸದರಿ ವಿಷಯವು ಕ್ರಿಯಾಲೋಪ ವ್ಯಾಪ್ತಿಗೆ ಬರುವುದಿಲ್ಲವೆಂದು ತಿಳಿಸಿದರು.

## 2. ಪ್ರಶ್ನೋತ್ತರ

ದಿನಾಂಕ:27.01.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 1ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 1(47) | |
| 2. | 2(28) | |
| 3. | 3(26) | |
| 4. | 4(64) | |
| 5. | 5(53) | ಗೈರು ಹಾಜರಿ |
| 6. | 6(96) | |
| 7. | 7(33) | |
| 8. | 8(27) | |
| 9. | 9(59) | ಗೈರು ಹಾಜರಿ |
| 10. | 10(11) | ಗೈರು ಹಾಜರಿ |
| 11. | 11(07) | ವರ್ಗಾವಣೆ |
| 12. | 12(91+86) | |
| 13. | 13(70) | |
| 14. | 14(77) | |
| 15. | 15(118) | |

ದಿನಾಂಕ:27.01.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 1ನೇ ಪಟ್ಟಿಯ ಒಟ್ಟು 108 ಪ್ರಶ್ನೆಗಳ ಪೈಕಿ 26 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರ ಪರವಾಗಿ ಮಾನ್ಯ ಕೃಷಿ ಸಚಿವರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಮತ್ತು ಶ್ರೀ ಎಂ. ನಾಗರಾಜು** ಅವರುಗಳು ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ರಸ್ತೆಗಳನ್ನು ಅಗಲೀಕರಿಸಿ, ಟ್ರಾಫಿಕ್ ಮುಕ್ತಗೊಳಿಸಲು ಯೋಜನೆ ರೂಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ಉತ್ತರ ಕನ್ನಡ ಜಿಲ್ಲೆ ಕಾರವಾರ ತಾಲ್ಲೂಕಿನ ಕದ್ರಾ ಗ್ರಾಮದ ನಿವಾಸಿ ಶ್ರೀಮತಿ ರಿಶೇಲ್ ಡಿ'ಸೋಜರ ಆತ್ಮಹತ್ಯೆ ಪ್ರಕರಣವನ್ನು ನ್ಯಾಯಯುತವಾಗಿ ತನಿಖೆ ನಡೆಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ಬೆಳಗಾವಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಅಮಟೂರು ಬಾಳಪ್ಪ ಅವರ ಪ್ರತಿಮೆ ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀಮತಿ ಬಲ್ಕೀಸ್ ಬಾನು** ಅವರು ಶಿವಮೊಗ್ಗ ಜಿಲ್ಲೆಯ ಅರೆಬಿಳಚಿ ಸರ್ಕಾರಿ ಆಸ್ಪತ್ರೆಯ ಕಟ್ಟಡದ ಸಿಮೆಂಟ್ ಪ್ಲಾಸ್ಟರಿಂಗ್ ಹಾಗೂ ಅಳವಡಿಸಿರುವ ಕಿಟಕಿ ಮತ್ತು ಬಾಗಿಲುಗಳು ಕಳಪೆಯಾಗಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕು ಕಸಬಾ ಹೋಬಳಿಯ ಮಹಜೇನಹಳ್ಳಿ ಗ್ರಾಮದಲ್ಲಿ ಮುಗುಲಾ ಬೇಗಾರ ಜನಾಂಗದವರಿಗೆ ಹಂಚಿಕೆಯಾಗಿದ್ದ 10 ಎಕರೆ 2 ಗುಂಟೆ ಇನಾಂ ಜಮೀನಿನಲ್ಲಿ 1 ಎಕರೆ 30 ಗುಂಟೆ ಜಮೀನನ್ನು ಸರ್ಕಾರಿ ಎಂದು ನಮೂದಿಸಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಸಿ.ಟಿ. ರವಿ** ಅವರು ಕರ್ನಾಟಕ ಲೋಕಸೇವಾ ಆಯೋಗದಿಂದ 384 ಕೆಎಎಸ್ ಹುದ್ದೆಗಳ ಭರ್ತಿಗೆ 2025ರ ಮೇ ತಿಂಗಳಿನಲ್ಲಿ ಮುಖ್ಯ ಪರೀಕ್ಷೆ ನಡೆಸಲಾಗಿದ್ದು ಫಲಿತಾಂಶ ಪ್ರಕಟಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ರಮೇಶ್ ಬಾಬು** ಅವರು ವಿಶ್ವವಿದ್ಯಾಲಯಗಳು ಗೌರವ ಡಾಕ್ಟರೇಟ್ ನೀಡಲು ಮಾರ್ಗಸೂಚಿ, ಅರ್ಹತಾ ಮಾನದಂಡ, ಪಾರದರ್ಶಕ ಆಯ್ಕೆ ಪ್ರಕ್ರಿಯೆ ಹಾಗೂ ತಜ್ಞ ಸಮಿತಿಯ ಶಿಫಾರಸ್ಸು ಕಡ್ಡಾಯ ಮಾಡುವುದರ ಜೊತೆಗೆ ಯಾವುದೇ ಪ್ರಭಾವಕ್ಕೆ ಒಳಗಾಗಿ ಪದವಿ ನೀಡಿದರೆ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಾಯಿದೆಯನ್ನು ರೂಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಡಿ.ಎಸ್. ಅರುಣ್** ಅವರು ರಾಜ್ಯದ ನದಿಗಳು, ಪ್ರವಾಸಿ ತಾಣಗಳು ಮತ್ತು ಗ್ರಾಮೀಣ ಪರಿಸರದಲ್ಲಿ ಹೆಚ್ಚುತ್ತಿರುವ ತ್ಯಾಜ್ಯದ ಹಾವಳಿ ಹಾಗೂ ನಿರ್ವಹಣೆ ಮಾಡುವುದರಲ್ಲಿ ಆಗುತ್ತಿರುವ ವೈಫಲ್ಯಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಭೂ ಕುಸಿತದ ಪ್ರಕರಣಗಳು ಮರುಕಳಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಜಗದೇವ್ ಗುತ್ತೇದಾರ್** ಅವರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ದುಡಿಯುತ್ತಿರುವ ಅಧಿಕಾರಿ ನೌಕರರಿಗೆ ವೇತನ ಪರಿಷ್ಕರಣೆಯಾಗದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

11. **ಶ್ರೀ ಎಸ್.ವ್ಹಿ. ಸಂಕನೂರ ಮತ್ತು ಶ್ರೀ ಶಶೀಲ್ ಜಿ. ನಮೋಶಿ** ಅವರುಗಳು ರಾಜ್ಯದ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಬಜೆಟ್‌ನಲ್ಲಿ ಅವಕಾಶ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

12. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆಯ ಪ್ರವಾಸಿ ತಾಣಗಳ ಮೂಲ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

13. **ಶ್ರೀಮತಿ ಹೇಮಲತಾ ನಾಯಕ** ಅವರು ಕನಕಗಿರಿ ತಾಲ್ಲೂಕಿನ ಕಲಕೇರಿ ಗ್ರಾಮದ 2ನೇ ವಾರ್ಡ್ ವ್ಯಾಪ್ತಿಯ ದಲಿತರ ಕಾಲೋನಿಯಲ್ಲಿ ಕಲುಷಿತ ನೀರು ಪೂರೈಕೆಯಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

14. **ಶ್ರೀಮತಿ ಭಾರತಿ ಶೆಟ್ಟಿ** ಅವರು ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಹಳೇ ಸೊರಬ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ಶೌಚಾಲಯ ವ್ಯವಸ್ಥೆ ಇಲ್ಲದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

15. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಗ್ರಾಮೀಣ ಭಾಗದಲ್ಲಿ ಆಸ್ತಿ ಮತ್ತು ದಾಖಲೆಗಳನ್ನು ಇ–ಸ್ವತ್ತು 2.0 ತಂತ್ರಾಂಶದಲ್ಲಿ ಅಳವಡಿಸುವಲ್ಲಿ ಆಗುತ್ತಿರುವ ಲೋಪದೋಷಗಳನ್ನು ಸರಿಪಡಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

16. **ಶ್ರೀ ಎನ್. ರವಿಕುಮಾರ್** ಅವರು ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ಪೋಲೀಸ್ ನಿರೀಕ್ಷಕರು ದ್ವೇಷ ಭಾಷಣ ಕಾಯಿದೆ ಜಾರಿಯಾಗದಿದ್ದರೂ ಅದರಡಿ ಕ್ರಮವಹಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

17. **ಡಾ: ಧನಂಜಯ ಸರ್ಜಿ** ಅವರು ಅರಣ್ಯ ಪ್ರದೇಶಗಳಲ್ಲಿ ಕಾಡ್ಗಿಚ್ಚು ನಿಯಂತ್ರಣಕ್ಕೆ ಆಧುನಿಕ ಉಪಕ್ರಮಗಳನ್ನು ಹಾಗೂ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| ಕ್ರ ಸ | **ವಿಧೇಯಕಗಳ ಪಟ್ಟಿ** | **ಒಪ್ಪಿಗೆಯನ್ನು ಪಡೆದ ದಿನಾಂಕ** | **ಒಪ್ಪಿಗೆಯನ್ನು ನೀಡಿದವರು** |
|---|---|---|---|
| 1 | **ಕರ್ನಾಟಕ ಧನವಿನಿಯೋಗ (ಸಂ.4) ವಿಧೇಯಕ, 2025 (ವಿಧೇಯಕ ಸಂ.80)**<br>**THE KARNATAKA APROPRIATION (No.4) BILL, 2025 (Bill No.80)** | 22.12.2025 | ರಾಜ್ಯಪಾಲರು |
| 2 | **ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.86)**<br>**THE KARNATAKA STATE ROAD SAFETY AUTHORITY (AMENDMENT) BILL, 2025 (Bill No. 86)** | 07.01.2026 | ರಾಜ್ಯಪಾಲರು |
| 3 | **ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.83)**<br>**THE BENGALURU METROPOLITAN LAND TRANSPORT AUTHORITY (AMENDMENT) BILL, 2025 (Bill No.83)** | 07.01.2026 | ರಾಜ್ಯಪಾಲರು |

| | | | |
|---|---|---|---|
| 4 | ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.88)<br>**THE KARNATAKA STATE COMMISSION FOR THE SCHEDULED CASTES AND THE SCHEDULED TRIBES (AMENDMENT) BILL, 2025 (Bill No. 88)** | 07.01.2026 | ರಾಜ್ಯಪಾಲರು |
| 5 | ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.72)<br>**THE KARNATAKA CINE AND CULTURAL ACTIVISTS (WELFARE) (AMENDMENT) BILL, 2025 (Bill No.72)** | 07.01.2026 | ರಾಜ್ಯಪಾಲರು |
| 6 | ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.81)<br>**THE GREATER BENGALURU GOVERNANCE (SECOND AMENDMENT) BILL, 2025 (Bill No. 81)** | 06.01.2026 | ರಾಜ್ಯಪಾಲರು |
| 7 | ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.68)<br>**THE KARNATAKA LABOUR WELFARE FUND (AMENDMENT) BILL, 2025 (Bill No. 68)** | 06.01.2026 | ರಾಜ್ಯಪಾಲರು |
| 8 | ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ವಿಧೇಯಕ, 2025 (ವಿಧೇಯಕ ಸಂಖ್ಯೆ.82)<br>**THE KARNATAKA SOCIAL BOYCOTT (PREVENTION, PROHIBITION AND REDRESSAL) BILL, 2025 (Bill No. 82)** | 09.01.2026 | ರಾಜ್ಯಪಾಲರು |
| 9 | ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ 2025(ವಿಧೇಯಕ ಸಂಖ್ಯೆ.85)<br>**THE KARNATAKA PRIVATE MEDICAL ESTABLISHMENTS (AMENDMENT) BILL, 2025 (Bill No.85)** | 06.01.2026 | ರಾಜ್ಯಪಾಲರು |
| 10 | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.77)<br>**THE KARNATAKA HINDU RELIGIOUS INSTITUTIONS AND CHARITABLE ENDOWMENTS(AMENDMENT) BILL, 2025 (Bill No.77)** | 06.01.2026 | ರಾಜ್ಯಪಾಲರು |

| | | | |
|---|---|---|---|
| 11 | ಬಾಂಬೆ ಸಾರ್ವಜನಿಕ ನ್ಯಾಸ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.84)<br>**THE BOMBAY PUBLIC TRUST (KARNATAKA AMENDMENT) BILL, 2025 (Bill No.84)** | 06.01.2026 | ರಾಜ್ಯಪಾಲರು |
| 12 | ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.85)<br>**THE NADAPRABHU KEMPEGOWDA HERITAGE AREA DEVELOPMENT AUTHORITY (SECOND AMENDMENT) BILL, 2025 (Bill No.85)** | 06.01.2026 | ರಾಜ್ಯಪಾಲರು |
| 13 | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.74)<br>**BAYALUSEEME DEVELOPMENT BOARD(AMENDMENT) BILL, 2025 (Bill No.74)** | 07.01.2026 | ರಾಜ್ಯಪಾಲರು |
| 14 | ಮಲೆನಾಡು ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ. 75)<br>**THE MALNAD AREA DEVELOPMENT BOARD (AMENDMENT) BILL, 2025 (Bill No.75)** | 07.01.2026 | ರಾಜ್ಯಪಾಲರು |
| 15 | ಕರ್ನಾಟಕ ಭೂ ಕಂದಾಯ (ಎರಡನೇತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.61)<br>**THE KARNATAKA LAND REVENUE (SECOND AMENDMENT) BILL, 2025 (Bill No.61)** | 07.01.2026 | ರಾಜ್ಯಪಾಲರು |
| 16 | ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.69)<br>**SRI MALAI MAHADESWARASWAMY KSHETHRA DEVELOPMENT AUTHORITY (AMENDMENT) BILL, 2025 (Bill No.69)** | 07.01.2026 | ರಾಜ್ಯಪಾಲರು |
| 17 | ಚಂದ್ರಗುತ್ತಿ ಶ್ರೀ ರೇಣುಕಾಂಬ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2025 (ವಿಧೇಯಕ ಸಂಖ್ಯೆ.70)<br>**THE CHANDRAGUTHI SHREE RENUKAMBA KSHETRA DEVELOPMENT AUTHORITY BILL, 2025 (Bill No.70)** | 07.01.2026 | ರಾಜ್ಯಪಾಲರು |

| | | | |
|---|---|---|---|
| 18 | **ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ಎರಡನೇ ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖೆ.73)**<br>**THE KARNATAKA STATE UNIVERSITIES (SECOND AMENDMENT) BILL, 2025 (Bill No.73)** | 07.01.2026 | ರಾಜ್ಯಪಾಲರು |
| 19 | **ಕರ್ನಾಟಕ ಬಾಡಿಗೆ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.67 )**<br>**THE KARNATAKA RENT (AMENDMENT) BILL, 2025 (Bill No. 67 )** | 07.01.2026 | ರಾಜ್ಯಪಾಲರು |

## 4. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಶ್ರೀ ಶರವಣ ಟಿ.ಎ, ಶ್ರೀ ಶಶೀಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಇತರರುಗಳು** ಅವರು ಅಬಕಾರಿ ಇಲಾಖೆಯಲ್ಲಿ ಸಿಎಲ್–2, ಸಿಎಲ್–7 ಮತ್ತು ಸಿಎಲ್–9ಗಳಿಗೆ ನಿಯಮಾನುಸಾರ ಪರವಾನಗಿ ನೀಡುವ ಬದಲು ದರಪಟ್ಟಿಯನ್ನು ನಿಗದಿಪಡಿಸುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಕುರಿತು ಹಾಗೂ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
2. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

ಮಧ್ಯಾಹ್ನ 3.05 ಗಂಟೆಗೆ ಸದನವನ್ನು ಮುಂದೂಡಿ, ಮಧ್ಯಾಹ್ನ 4.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 4.30 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2026ನೇ ಜನವರಿ, 22ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ ಎಂದು ಶ್ರೀ ಐವನ್ ಡಿ'ಸೋಜಾ ಅವರು ಸೂಚಿಸಿ, ಶ್ರೀ ರಮೇಶ್ ಬಾಬು ಅವರು ಅನುಮೋದಿಸಿದರು.

ಮಾನ್ಯ ಶಾಸಕರಾದ ಶ್ರೀ ಐವನ್ ಡಿ'ಸೋಜಾ ಅವರು ರಾಜ್ಯಪಾಲರ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆಯನ್ನು ಪ್ರಾರಂಭಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ಮಾನ್ಯ ಅಬಕಾರಿ ಸಚಿವರು ರಾಜೀನಾಮೆಯನ್ನು ನೀಡಬೇಕೆಂದು ಒತ್ತಾಯಿಸಿದರು.

**"ಗದ್ದಲ"**

ಮಧ್ಯಾಹ್ನ 4.45 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

**"ಗದ್ದಲ"**

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

**"ಗದ್ದಲ"**

ಸಂಜೆ 6.05 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ಸಂಜೆ 6.50 ಗಂಟೆಗೆ ಮಾನ್ಯ ಉಪ ಸಭಾಪತಿಯವರ (**ಶ್ರೀ ಎಂ.ಕೆ. ಪ್ರಾಣೇಶ್**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ರಾಜ್ಯಪಾಲರ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆಯನ್ನು ಮಾನ್ಯ ಶಾಸಕರಾದ ಶ್ರೀ ಐವನ್ ಡಿ'ಸೋಜಾ ಅವರು ಮುಂದುವರೆಸಿದರು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಯನ್ನು ವಿರೋಧಿಸಿ ಸದನದ ಬಾವಿಯೊಳಗೆ ಧರಣಿ ನಡೆಸಿದರು.

ಸಂಜೆ 7.05 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ: 28.01.2026ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಬುಧವಾರ, ದಿನಾಂಕ:28.01.2026

**(04)**

ದಿನಾಂಕ:28.01.2026 ರಂದು ಬೆಳಗ್ಗೆ 10.54 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಧರಣಿ"**

**ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಶ್ರೀ ಶರವಣ ಟಿ.ಎ, ಶ್ರೀ ಶಶೀಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಇತರರು** ಅಬಕಾರಿ ಇಲಾಖೆಯಲ್ಲಿ ಸಿಎಲ್–2, ಸಿಎಲ್–7 ಮತ್ತು ಸಿಎಲ್–9ಗಳಿಗೆ ನಿಯಮಾನುಸಾರ ಪರವಾನಗಿ ನೀಡುವ ಬದಲು ದರಪಟ್ಟಿಯನ್ನು ನಿಗದಿಪಡಿಸುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಕುರಿತು ಹಾಗೂ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಕುರಿತು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾದರು. ಮಾನ್ಯ ಅಬಕಾರಿ ಸಚಿವರು ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ ಸರ್ಕಾರದ ನಿಲುವನ್ನು ಸ್ಪಷ್ಟಪಡಿಸಬೇಕೆಂದು ಒತ್ತಾಯಿಸಿದರು.

## 1. ಸಭಾಪತಿಯವರ ತೀರ್ಪು

ದಿನಾಂಕ:22.01.2026ರಂದು ಬೆಳಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಮೊದಲನೆ ಮಹಡಿಯಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ **"ವಿಧಾನ ಮಂಡಲದ ಜಂಟಿ ಅಧಿವೇಶನ"**ವನ್ನು ಉದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಭಾಷಣ ಮಾಡಿ **"ಜೈ ಹಿಂದ್, ಜೈ ಕರ್ನಾಟಕ"** ಎಂದು ಭಾಷಣ ಮುಗಿದ ನಂತರ ರಾಷ್ಟ್ರಗೀತೆ ನುಡಿಸಲು ಅವಕಾಶ ನೀಡದೆ ನಿರ್ಗಮಿಸಿರುವ ನಡೆಯ ಬಗ್ಗೆ ಚರ್ಚಿಸಲು ಅನುಮತಿಸಬೇಕೆಂದು ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಇತರ ಸದಸ್ಯರುಗಳು ಮನವಿ ಸಲ್ಲಿಸಿರುತ್ತಾರೆ.

ಮುಂದುವರೆದು, ಸದರಿ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಭಾಷಣ ಮಾಡಿ ಜೈ ಹಿಂದ್, ಜೈ ಕರ್ನಾಟಕ ಎಂದು ಸದನದಿಂದ ನಿರ್ಗಮಿಸುವಾಗ ಘಟಿಸಿದ ಘಟನೆಗೆ ಸಂಬಂಧಿಸಿದಂತೆ ಸೂಕ್ತ ಕ್ರಮವಹಿಸಲು ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರ ಸದಸ್ಯರುಗಳು ಮನವಿ ಸಲ್ಲಿಸಿರುತ್ತಾರೆ.

ಮೇಲಿನ ಎರಡೂ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಮತ್ತು ಭಾರತ ಸಂವಿಧಾನದ ಅನುಚ್ಛೇದ 208 (1)ರ ಮೇರೆಗೆ ರಚಿಸಲಾಗಿರುವ **"ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳು"** ಪರಿಮಿತಿಗಳಲ್ಲಿ ಗಮನಿಸಿರುವ ಅಂಶಗಳ ಬಗ್ಗೆ ಈ ಸದನದಲ್ಲಿ ಬೆಳಕು ಚೆಲ್ಲಲು ಬಯಸುತ್ತೇನೆ;

ಮೊದಲನೆಯದಾಗಿ, ದೇಶದಲ್ಲಿಯೇ ಶತಮಾನದ ಇತಿಹಾಸ ಹೊಂದಿ **"ಚಿಂತಕರ ಚಾವಡಿ"** ಎಂದು ಹೆಸರುವಾಸಿಯಾಗಿರುವ ನಮ್ಮ ರಾಜ್ಯದ ವಿಧಾನ ಪರಿಷತ್ತು ತನ್ನದೇ ಆದಂತಹ ಹಿರಿಮೆ ಗರಿಮೆ ಹೊಂದಿರುವುದು ಇಲ್ಲಿ ಹಾಜರಿರುವ ನನ್ನೆಲ್ಲಾ ಮಾನ್ಯ ಶಾಸಕ ಮಿತ್ರರುಗಳಿಗೆ ತಿಳಿದಿರುವ ವಿಷಯವಾಗಿದ್ದು ಅಂತಹ ಇತಿಹಾಸವಿರುವ ಈ ಮೆಲ್ಮನೆಯಲ್ಲಿ ನಾವುಗಳು ಸಾರ್ವಜನಿಕರ ಪರವಾಗಿ ಅವರ ಧ್ವನಿಯಾಗಿ ಸದನಕ್ಕೆ ಬೆಳಕು ಚೆಲ್ಲುವಂತಹ ಗುರುತರ ಜವಾಬ್ದಾರಿ ಹೊಂದಿರುತ್ತೇವೆಂದು ಪುನರುಚ್ಚರಿಸುತ್ತಾ, ಈ ಸದನದ ಸದಸ್ಯರುಗಳು ಸದನದಲ್ಲಿ ಪ್ರಸ್ತಾಪಿಸುವ ವಿಚಾರಗಳ ಪ್ರತಿಯೊಂದು ಅಂಶಗಳನ್ನು ನಾಡಿನ ಜನರು ಸೂಕ್ಷ್ಮವಾಗಿ ಗಮನಿಸುತ್ತಿರುವುದರಿಂದ ನಮ್ಮಗಳ ವಿಚಾರ ವಿನಿಮಯಗಳ ಬಗ್ಗೆ ಸಂವೇಧನಶೀಲರಾಗಿ ಆತ್ಮಾವಲೋಕನ ಮಾಡಿಕೊಳ್ಳುವುದರ ಮೂಲಕ ಈ ಸದನದ ಗೌರವವನ್ನು ಪ್ರತೀ ಹಂತದಲ್ಲಿಯೂ ಸಹಾ ನಾವೆಲ್ಲರೂ ಸಹ ಎತ್ತಿಹಿಡಿಯಬೇಕಾಗಿರುವುದು ನಮ್ಮನಿಮ್ಮೆಲ್ಲರ ಆದ್ಯಕರ್ತವ್ಯವಾಗಿರುತ್ತದೆ ಎಂದು ನನ್ನ ಅಂತರಾಳದ ಭಾವನೆಯಾಗಿದೆ.

ಮುಂದುವರೆದು, ನಾವುಗಳೆಲ್ಲರೂ ಸಹಾ ಸದನದಲ್ಲಿ ಯಾವುದೆ ವಿಚಾರ ವಿನಿಮಯ ಮಾಡಿಕೊಳ್ಳುವಂತಹ ಸಂದರ್ಭಗಳಲ್ಲಿ ಸಂವಿಧಾನದ ಚೌಕಟ್ಟಿನಡಿಯಲ್ಲಿ ಬರುತ್ತದೆಯೆ? ಅಥವಾ ಇಲ್ಲವೇ? ಎನ್ನುವ ಅಂಶಗಳನ್ನು ಗಮನದಲ್ಲಿರಿಸಿಕೊಳ್ಳುವುದು ಅತಿ ಮುಖ್ಯವಾಗಿರುತ್ತದೆ.

ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಎರಡು ಸದನಗಳ ರಕ್ಷಕರಾಗಿದ್ದು, ಮಾನ್ಯರ ಸೂಚನೆಯಂತೆ ಉಭಯ ಸದನಗಳ ಉಪವೇಶನಗಳು ಜರುಗುವುದು ತಮಗೆಲ್ಲರಿಗೂ ಸಹ ತಿಳಿದ ವಿಷಯವಾಗಿರುತ್ತದೆ.

**"ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳು"** ನಿಯಮ 151ರಲ್ಲಿ ಚರ್ಚೆಯ ವ್ಯಾಪ್ತಿಯನ್ನು ಈ ಮುಂದಿನಂತೆ ನಿಗಧಿಪಡಿಸಿರುತ್ತದೆ;

**ಒಂದು ನಿರ್ಣಯದ ಮೇಲಿನ ಚರ್ಚೆಯು ನಿರ್ಣಯಕ್ಕೆ ಸಂಬಂಧಿಸಿರಬೇಕು ಹಾಗೂ ಅದರ ವ್ಯಾಪ್ತಿಗೆ ಒಳಪಟ್ಟಿರಬೇಕು ಎಂಬುದಾಗಿರುತ್ತದೆ.**

ಅತೀ ಮುಖ್ಯವಾಗಿ **"ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳು"** ನಿಯಮ 306ರಲ್ಲಿ ಮಾತನಾಡುವಾಗ ಪಾಲಿಸಬೇಕಾದ ನಿಯಮಗಳ ಬಗ್ಗೆ ಉಲ್ಲೇಖಿಸಲಾಗಿದೆ, ಅದರಲ್ಲೂ ಸದರಿ ನಿಯಮದ ಉಪ ನಿಯಮ (6), (10) ರಲ್ಲಿ ಈ ಕೆಳಕಂಡಂತೆ ನಿಯಮವಿರುತ್ತದೆ;

**ರಾಷ್ಟ್ರಾಧ್ಯಕ್ಷರು ಅಥವಾ ರಾಜ್ಯಪಾಲರ ಅಥವಾ ಯಾವುದೇ ನ್ಯಾಯಾಲಯದ ನಡವಳಿಯನ್ನು ಕುರಿತು ಆರೋಪಿಸತಕ್ಕದ್ದಲ್ಲ ಅಥವಾ ಚರ್ಚೆಯನ್ನು ಪರಿಣಾಮಕಾರಿಯಾಗಿ ಮಾಡುವ ಉದ್ದೇಶಕ್ಕಾಗಿ ರಾಜ್ಯಪಾಲರ ಅಥವಾ ರಾಷ್ಟ್ರಾಧ್ಯಕ್ಷರ ಹೆಸರನ್ನು ಬಳಸತಕ್ಕದ್ದಲ್ಲ.**

ಈ ಹಿನ್ನಲೆಯಲ್ಲಿ, ಸದನದ ಒಟ್ಟಾರೆ ಗೌರವ ಹಾಗೂ ಶಾಸಕಾಂಗ ಪ್ರಕ್ರಿಯೆ ಕಾಪಾಡಿಕೊಳ್ಳುವ ದೃಷ್ಠಿಯಿಂದ ಯಾವುದೇ ನಿರ್ದಿಷ್ಟ ನಿಯಮಗಳನ್ನು ಉಲ್ಲೇಖಿಸದೆ ನೀಡಿರುವ ಮೇಲಿನ ಎರಡೂ ಮನವಿಗಳನ್ನು ಮತ್ತು ದಿನಾಂಕ:23.01.2026 ರಂದು ಸದರಿ ವಿಷಯದ ಬಗ್ಗೆ ನಾನು ನೀಡಿರುವ ತೀರ್ಪನ್ನು ಮರು ಪರಿಶೀಲಿಸಿ ಮುಕ್ತಾಯಗೊಳಿಸಿದೆ.

ಜನತಾದಳ(ಎಸ್) ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಎಸ್.ಎಲ್. ಭೋಜೇಗೌಡರು ಮಾತನಾಡಿ ಸರ್ಕಾರವು ಈ ಕುರಿತು ಸ್ಪಷ್ಟನೆ ನೀಡಬೇಕೆಂದು ಒತ್ತಾಯಿಸಿದರು.

## "ಗದ್ದಲ"

ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಘನತೆವೆತ್ತ ರಾಜ್ಯಪಾಲರು ಭಾಷಣದ ಕೆಲವು ಸಾಲುಗಳನ್ನು ಓದಿದ್ದಾರೆ. It's deemed as read ಎಂಬುದಾಗಿರುತ್ತದೆ ಎಂದು ತಿಳಿಸಿದರು.

ಬೆಳಗ್ಗೆ 11.20 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 12.15 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ಮಾನ್ಯ ವಿರೋಧ ಪಕ್ಷದ ನಾಯಕರು ಸಂವಿಧಾನದ ರೀತ್ಯಾ ಮಾಡಿರುವ ಭಾಷಣದ ಮೇಲೆ ವಂದನಾ ನಿರ್ಣಯದ ಕುರಿತು ಪ್ರಸ್ತಾಪಿಸಿ ಆಡಳಿತ ಪಕ್ಷದ ಮಾನ್ಯ ಶಾಸಕರು ವಿಷಾದ ವ್ಯಕ್ತಪಡಿಸಬೇಕೆಂದು ಒತ್ತಾಯಿಸಿದರು.

ಮಾನ್ಯ ಶಾಸಕರಾದ ಶ್ರೀ ಎಸ್.ಎಲ್. ಭೋಜೇಗೌಡ ಅವರು ಘನತೆವೆತ್ತ ರಾಜ್ಯಪಾಲರು ಮಾಡಿರುವ ಭಾಷಣದ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಘನತೆವೆತ್ತ ರಾಜ್ಯಪಾಲರು ರಾಷ್ಟ್ರಗೀತೆಗೆ ಅಪಮಾನ ಮಾಡಿರುವ ಕುರಿತು ಸದನದಲ್ಲಿ ಚರ್ಚಿಸಲು ಅವಕಾಶ ನೀಡಬೇಕಾಗುತ್ತದೆ ಎಂದು ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಘನತೆವೆತ್ತ ರಾಜ್ಯಪಾಲರ ಭಾಷಣದ ಸಂದರ್ಭದಲ್ಲಿ ಅಥವಾ ಹೊರಗಡೆ ಹೋಗುವಾಗ ಅನುಸರಿಸಬೇಕಾದ ವಿಧಾನವನ್ನು ಪ್ರಸ್ತಾಪಿಸಿ ಕೂಡಲೇ ಸಂಬಂಧಪಟ್ಟವರ ಮೇಲೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ದಿನಾಂಕ:22.01.2026ರಂದು ನಡೆದ ಅಹಿತಕರ ಘಟನೆಯು ಮುಂದಿನ ದಿನಗಳಲ್ಲಿ ನಡೆಯದಂತೆ ಕ್ರಮವಹಿಸುವುದು ಹಾಗೂ ಘನತೆವೆತ್ತ ರಾಜ್ಯಪಾಲರ ಭಾಷಣದ ಮೇಲೆ ವಂದನಾ ನಿರ್ಣಯ ಅಥವಾ ಖಂಡನಾ ನಿರ್ಣಯ ಸ್ಪಷ್ಟನೆ ನೀಡುವಂತೆ ಮಾನ್ಯ ವಿರೋಧ ಪಕ್ಷದ ನಾಯಕರು ಕೋರಿದ್ದು, ಸದರಿ ವಿಷಯದ ಕುರಿತು ಸ್ಪಷ್ಟನೆ ನೀಡುತ್ತಾ, ವಂದನಾ ನಿರ್ಣಯವೆಂದು ಪರಿಗಣಿಸಿ, ಮಾನ್ಯ ಸಭಾಪತಿ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಿಂದ ನೀಡಲಾಗಿರುವ ತೀರ್ಪನ್ನು ಗೌರವಿಸುತ್ತಾ, ಸದನದ ಕಾರ್ಯಕಲಾಪಗಳನ್ನು ಸುಸೂತ್ರವಾಗಿ ನಡೆಸಲು ಉಭಯ ಪಕ್ಷಗಳ ಮಾನ್ಯ ಶಾಸಕರು ಸಹಕರಿಸಬೇಕೆಂದು ತಿಳಿಸಿದರು.

**“ಗದ್ದಲ”**

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 333ರ ರೀತ್ಯಾ ಸದನದ ನಡವಳಿಯಲ್ಲಿ **'ಖಂಡನೀಯ'** ಪದವನ್ನು ತೆಗೆದು ಹಾಕಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 1.00 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.25 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ತಮ್ಮ ಸ್ಥಾನಗಳಿಗೆ ತೆರಳುವಂತೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

## ಪ್ರಶ್ನೋತ್ತರ

ದಿನಾಂಕ:28.01.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 2ನೇ ಪಟ್ಟಿಯ ಪ್ರಶ್ನೆ ಸಂಖ್ಯೆ 21(175)ನ್ನು ಮಾನ್ಯ ಶಾಸಕರು ಮಂಡಿಸಿದರು.

ಆಡಳಿತ ಹಾಗೂ ವಿರೋಧ ಪಕ್ಷಗಳ ಮಾನ್ಯ ಶಾಸಕರುಗಳು ಧಿಕ್ಕಾರ ಘೋಷಣೆ ಕೂಗುತ್ತಿದ್ದರು.

## "ಗದ್ದಲ"

ಮಧ್ಯಾಹ್ನ 3.55 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಸಂಜೆ 4.55 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ವಿರೋಧ ಪಕ್ಷ ಹಾಗೂ ಆಡಳಿತ ಪಕ್ಷದ ಮಾನ್ಯ ಶಾಸಕರುಗಳ ನಡುವೆ ವಾಗ್ವಾದ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 303(11) ಮತ್ತು (21)ನ್ನು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಓದಿ ತಿಳಿಸಿದರು.

ಸಂಜೆ 5.10 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:29.01.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಗುರುವಾರ, ದಿನಾಂಕ:29.01.2026

**(05)**

ದಿನಾಂಕ:29.01.2026 ರಂದು ಬೆಳಗ್ಗೆ 11.15 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ಮಾನ್ಯ ಸಭಾನಾಯಕರು ಘನತೆವೆತ್ತ ರಾಜ್ಯಪಾಲರ ಭಾಷಣದ ಸಂಬಂಧದಲ್ಲಿ ವಿಷಾದ ವ್ಯಕ್ತಪಡಿಸಬೇಕೆಂದು ಮಾನ್ಯ ವಿರೋಧ ಪಕ್ಷದ ನಾಯಕರು ಪ್ರಸ್ತಾಪಿಸಿದರು.

ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಕಚೇರಿಯಲ್ಲಿ ಈ ವಿಷಯದ ಕುರಿತು ಚರ್ಚಿಸಿದ ರೀತ್ಯಾ, ಘನತೆವೆತ್ತ ರಾಜ್ಯಪಾಲರ ಭಾಷಣಕ್ಕೆ ವಂದನೆ ಸಲ್ಲಿಸುವುದಾಗಿ ತಿಳಿಸಿರುತ್ತೇನೆ ಹಾಗೂ ಸದರಿ ನಡವಳಿಯನ್ನು ಕಡತದಿಂದ ತೆಗೆದುಹಾಕಲಾಗಿರುತ್ತದೆ.

ಆಡಳಿತ ಹಾಗೂ ವಿರೋಧ ಪಕ್ಷಗಳ ಮಾನ್ಯ ಶಾಸಕರುಗಳ ನಡುವೆ ವಾಗ್ವಾದ.

ಬೆಳಗ್ಗೆ 11.35 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 2.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು Unparliamentary (ಅಸಂಸದೀಯ ಪದಗಳನ್ನು) ಬಳಸಿ ಮಾತನಾಡಿರುವ ಬಗ್ಗೆ ಮಾನ್ಯ ವಿರೋಧ ಪಕ್ಷದವರು ಪತ್ರ ನೀಡಿರುವುದನ್ನು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಮಾತನಾಡಿ ಅಸಂಸದೀಯ ಪದಗಳನ್ನು ಬಳಸಿ ಮಾತನಾಡಿರುವುದನ್ನು ಹಿಂಪಡೆಯುವುದಾಗಿ ತಿಳಿಸಿದರು ಹಾಗೂ ವಿಷಾಧ ವ್ಯಕ್ತ ಪಡಿಸಿದರು.

ಅಸಂಸದೀಯ ಪದಗಳನ್ನು ಕಡತದಿಂದ ತೆಗೆದು ಹಾಕಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

**"ಗದ್ದಲ"**

ಮಧ್ಯಾಹ್ನ 2.25 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:30.01.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಶುಕ್ರವಾರ, ದಿನಾಂಕ:30.01.2026

**(06)**

ದಿನಾಂಕ:30.01.2026 ರಂದು ಬೆಳಗ್ಗೆ 11.25 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ನಾಯಕರು ಆಡಳಿತ ಪಕ್ಷದ ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಸದನದಲ್ಲಿ ಆಡಿರುವ ಅಸಂವಿಧಾನಿಕ ಪದಗಳಿಗೆ ಕ್ಷಮೆಯಾಚಿಸಬೇಕೆಂದು ಪ್ರಸ್ತಾಪಿಸಿದರು ಹಾಗೂ ಅವರನ್ನು ಅಮಾನತ್ತು ಮಾಡಬೇಕೆಂದು ಕೋರಿದರು.

ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಈಗಾಗಲೇ ನಡೆದಿರುವ ಘಟನೆಗಳಿಗೆ ತೀರ್ಪು ನೀಡಿ ಮುಕ್ತಾಯಗೊಳಿಸಲಾಗಿದೆ. ಘನತೆವೆತ್ತ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ತಿಳಿಸಿದರು.

ವಿರೋಧ ಪಕ್ಷದ ಮಾನ್ಯ ಶಾಸಕರು ಧರಣಿ ಕೈಬಿಟ್ಟು ತಮ್ಮ ತಮ್ಮ ಆಸನಗಳಿಗೆ ತೆರಳಿದರು.

## 1.ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಈ ಕೆಳಕಂಡ ವರದಿಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಅ) ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ – ವಾಣಿಜ್ಯ) ವರದಿ (2025ರ ವರದಿ ಸಂಖ್ಯೆ–10)

ಆ) ಸ್ಮಾರ್ಟ್ ಸಿಟಿ ಮಿಷನ್ ಅನುಷ್ಠಾನದ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–11)

## 2. ಪ್ರಕಟಣೆ

ದಿನಾಂಕ:30.01.2026ರಂದು ನಡೆದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ ಎಂದು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

- ದಿನಾಂಕ:22.01.2026ರಿಂದ ಪ್ರಾರಂಭವಾಗಿರುವ 158ನೇ ಅಧಿವೇಶನದ ಉಪವೇಶನಗಳನ್ನು ದಿನಾಂಕ:04.02.2026 ರವರೆಗೆ ವಿಸ್ತರಿಸಲಾಗಿದೆ.
- ದಿನಾಂಕ:02.02.2026ರಂದು ರಾಜ್ಯಪಾಲರ ಭಾಷಣದ ಮೇಲಿನ ವಂದನಾರ್ಪಣ ಪ್ರಸ್ತಾವದ ಮೇಲೆ ಚರ್ಚೆಗೆ ಸರ್ಕಾರದಿಂದ ಉತ್ತರ.
- ದಿನಾಂಕ:03.02.2026 ಮತ್ತು 04.02.2026ರಂದು ಅಧಿಕೃತ ನಿರ್ಣಯದ ಮೇಲೆ ಚರ್ಚೆ, ಅಂಗೀಕಾರ ಹಾಗೂ ಇತರೆ ಸರ್ಕಾರಿ ಕಾರ್ಯಕಲಾಪಗಳು.
- ದಿನಾಂಕ:31.01.2026ರಂದು ಸದನದ ಕಾರ್ಯಕಲಾಪಗಳು ಇರುವುದಿಲ್ಲ.

## 3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

ಶ್ರೀ ಐವನ್ ಡಿ'ಸೋಜಾ ಅವರು ಚರ್ಚೆಯನ್ನು ಮುಂದುವರೆಸಿದರು.

2. ಶ್ರೀ ರಮೇಶ್ ಬಾಬು
3. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
4. ಶ್ರೀ ವೈ.ಎಂ. ಸತೀಶ್
5. ಶ್ರೀ ಶಿವಕುಮಾರ್ ಕೆ.

ಮಧ್ಯಾಹ್ನ 1.40 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

ಶ್ರೀಯುತರುಗಳಾದ:–

6. ಎಂ. ನಾಗರಾಜು
7. ಪ್ರತಾಪ್ ಸಿಂಹ ನಾಯಕ್ ಕೆ.
8. ಎಸ್.ವ್ಹಿ. ಸಂಕನೂರ
9. ಬಲ್ಕೀಸ್ ಬಾನು

ಮಧ್ಯಾಹ್ನ 4.30 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 4.51 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

## 4. ಪ್ರಶ್ನೋತ್ತರ

ದಿನಾಂಕ:30.01.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–Vರ 4ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 46(428) | |
| 2. | 47(552) | |
| 3. | 48(504) | |
| 4. | 49(517) | ಕಾಲಾವಕಾಶ |
| 5. | 50(522) | |
| 6. | 51(471) | |
| 7. | 52(436) | |
| 8. | 53(551) | ಕಾಲಾವಕಾಶ |
| 9. | 54(446+526) | |
| 10. | 55(553) | ಗೈರು ಹಾಜರಿ |
| 11. | 56(510) | |
| 12. | 57(461) | |
| 13. | 58(486) | ಕಾಲಾವಕಾಶ |
| 14. | 59(479) | |
| 15. | 60(438) | ಕಾಲಾವಕಾಶ |

**ದಿನಾಂಕ:28.01.2026ರ ಸಮೂಹ–IIIರ 2ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 23(170)

ದಿನಾಂಕ:30.01.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Vರ 4ನೇ ಪಟ್ಟಿಯ ಒಟ್ಟು 126 ಪ್ರಶ್ನೆಗಳ ಪೈಕಿ 33 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 5. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಜ್ಯದ ವಿಶ್ವವಿದ್ಯಾನಿಲಯ ಹಾಗೂ ಸರ್ಕಾರಿ, ಖಾಸಗಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:01.07.2022ರ ನಂತರ ನಿವೃತ್ತರಾದ ನೌಕರರಿಗೆ ಪಿಂಚಣಿಯಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ಒಳಚರಂಡಿ ಜಾಲವನ್ನು ಅಭಿವೃದ್ಧಿಪಡಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಮಹಿಷವಾಡಗಿ ಸೇತುವೆ ಕಾಮಗಾರಿ ಸ್ಥಗಿತಗೊಂಡಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ಬೆಳಗಾವಿ ನಗರದ ಐತಿಹಾಸಿಕ ಕೋಟೆಕೆರೆಯ ಮಧ್ಯದಲ್ಲಿ 100 ಅಡಿ ಎತ್ತರದ ಬುದ್ಧ ಮೂರ್ತಿಯನ್ನು ಸ್ಥಾಪಿಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀಮತಿ ಬಲ್ಕೀಸ್ ಬಾನು** ಅವರು ಸಾರಿಗೆ ಇಲಾಖೆಯವರು ಎಫ್‌ಸಿ ತಪಾಸಣೆ ಮಾಡುವ ಸಮಯದಲ್ಲಿ ಹಳೆಯದಾದ ಮತ್ತು ರಸ್ತೆಯಲ್ಲಿ ಓಡಿಸಲು ಯೋಗ್ಯವಲ್ಲದ ಬಸ್‌ಗಳ ಪರವಾನಗಿಯನ್ನು ರದ್ದುಗೊಳಿಸಿ, ಖಾಸಗಿ ಬಸ್‌ಗಳಲ್ಲಿ ಸ್ಪೀಡ್ ಗವರ್ನರ್ ಅಳವಡಿಸಿರುವುದನ್ನು ಖಚಿತಪಡಿಸಿಕೊಂಡು ವೇಗದ ಮಿತಿ ಮೀರಿದವರ ಮೇಲೆ ದಂಡ ವಿಧಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕಲಬುರಗಿ ಜಿಲ್ಲೆಯ ಐತಿಹಾಸಿಕ ಬಹಮನಿ ಕೋಟೆಯಲ್ಲಿರುವ ಬಾರಾಗಾಜಿ ತೋಪು ರಕ್ಷಿಸುವ ಹಾಗೂ ಪ್ರವಾಸಿ ತಾಣವಾಗಿ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಉತ್ತರಿಸಿದರು.

7. **ಶ್ರೀ ಡಿ.ಎಸ್. ಅರುಣ್** ಅವರು ಚಿಕ್ಕಮಗಳೂರು ಜಿಲ್ಲೆಯ ಚಂದ್ರದ್ರೋಣ ಪರ್ವತ ಶ್ರೇಣಿಯ ತಪ್ಪಲಿನಲ್ಲಿ ಅಕ್ರಮವಾಗಿ ರೆಸಾರ್ಟ್ ನಿರ್ಮಾಣ ಮಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ರಮೇಶ್ ಬಾಬು** ಅವರು ಬೆಂಗಳೂರು ಜಿಲ್ಲೆಯ ಮಂಡೂರು ಮತ್ತು ಹೊಸಕೋಟೆ ಯೋಜನಾ ಪ್ರಾಧಿಕಾರ ತಡೆಗೋಡೆಯನ್ನು ತೆರವುಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಡಾ: ಚಂದ್ರಶೇಖರ ಬಸವರಾಜ ಪಾಟೀಲ** ಅವರು ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನರಿಗೆ ಸೂರು ಒದಗಿಸುವ ಸಂಬಂಧ ಧರಣಿ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

10. **ಶ್ರೀಮತಿ ಹೇಮಲತಾ ನಾಯಕ** ಅವರು ತುಂಗಭದ್ರಾ ಆಣೆಕಟ್ಟು ಕ್ರಸ್ಟ್ ಗೇಟ್ ಬದಲಾವಣೆಗೆ ನಿಯೋಜಿಸಿದ ಸಿಬ್ಬಂದಿಗಳಿಗೆ ಬಿಡುಗಡೆಯಾಗಿರುವ ಅನುದಾನವನ್ನು ತಡೆಹಿಡಿದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 6. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀಮತಿ ಬಲ್ಕೀಸ್ ಬಾನು** ಅವರು ಶಿವಮೊಗ್ಗ ಜಿಲ್ಲೆಯ ಅರೆಬಿಳಚಿ ಸರ್ಕಾರಿ ಆಸ್ಪತ್ರೆಯ ಕಟ್ಟಡದ ಸಿಮೆಂಟ್ ಪ್ಲಾಸ್ಟರಿಂಗ್ ಹಾಗೂ ಅಳವಡಿಸಿರುವ ಕಿಟಕಿ ಮತ್ತು ಬಾಗಿಲುಗಳು ಕಳಪೆಯಾಗಿರುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಎನ್. ರವಿಕುಮಾರ್** ಅವರು ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ಪೊಲೀಸ್ ನಿರೀಕ್ಷಕರು ದ್ವೇಷ ಭಾಷಣ ಕಾಯಿದೆ ಜಾರಿಯಾಗದಿದ್ದರೂ ಅದರಡಿ ಕ್ರಮವಹಿಸಿರುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ರಮೇಶ್ ಬಾಬು** ಅವರು ವಿಶ್ವವಿದ್ಯಾಲಯಗಳು ಗೌರವ ಡಾಕ್ಟರೇಟ್ ನೀಡಲು ಮಾರ್ಗಸೂಚಿ, ಅರ್ಹತಾ ಮಾನದಂಡ, ಪಾರದರ್ಶಕ ಆಯ್ಕೆ ಪ್ರಕ್ರಿಯೆ ಹಾಗೂ ತಜ್ಞ ಸಮಿತಿಯ ಶಿಫಾರಸ್ಸು ಕಡ್ಡಾಯ ಮಾಡುವುದರ ಜೊತೆಗೆ ಯಾವುದೇ ಪ್ರಭಾವಕ್ಕೆ ಒಳಗಾಗಿ ಪದವಿ ನೀಡಿದರೆ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಾಯಿದೆಯನ್ನು ರೂಪಿಸುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಜಗದೇವ್ ಗುತ್ತೇದಾರ್** ಅವರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ದುಡಿಯುತ್ತಿರುವ ಅಧಿಕಾರಿ ನೌಕರರಿಗೆ ವೇತನ ಪರಿಷ್ಕರಣೆಯಾಗದಿರುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆಯ ಪ್ರವಾಸಿ ತಾಣಗಳ ಮೂಲ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ಬೆಳಗಾವಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಅಮಟೂರು ಬಾಳಪ್ಪ ಅವರ ಪ್ರತಿಮೆ ಸ್ಥಾಪಿಸುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಗ್ರಾಮೀಣ ಭಾಗದಲ್ಲಿ ಆಸ್ತಿ ಮತ್ತು ದಾಖಲೆಗಳನ್ನು ಇ–ಸ್ವತ್ತು 2.0 ತಂತ್ರಾಂಶದಲ್ಲಿ ಅಳವಡಿಸುವಲ್ಲಿ ಆಗುತ್ತಿರುವ ಲೋಪದೋಷಗಳನ್ನು ಸರಿಪಡಿಸುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಡಾ: ಧನಂಜಯ ಸರ್ಜಿ** ಅವರು ಅರಣ್ಯ ಪ್ರದೇಶಗಳಲ್ಲಿ ಕಾಡ್ಗಿಚ್ಚು ನಿಯಂತ್ರಣಕ್ಕೆ ಆಧುನಿಕ ಉಪಕ್ರಮಗಳನ್ನು ಹಾಗೂ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಕುರಿತು ದಿನಾಂಕ:27.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 7. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಶಿವಕುಮಾರ್ ಕೆ.** ಅವರು ಬೆಂಗಳೂರು ಕೊಳಚೆ ನೀರನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಮೂಲಕ ಸಂಸ್ಕರಿಸಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳನ್ನು ತುಂಬಿಸುವ ಕೆ.ಸಿ.ವ್ಯಾಲಿ ಯೋಜನೆ ಕುರಿತು ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆದರು.

   ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರಿಸಿದರು.

   ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

   ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಿ, ಉದ್ಯೋಗವನ್ನು ಒದಗಿಸುವ ನಿಟ್ಟಿನಲ್ಲಿ ಪ್ರತ್ಯೇಕವಾದ ಪ್ರವಾಸೋದ್ಯಮ ನೀತಿಯನ್ನು ಸ್ಥಾಪಿಸುವುದು ಮತ್ತು ಸಿ ಆರ್ ಜೆಡ್ ತೊಂದರೆಗಳನ್ನು ಸರಳೀಕರಿಸುವ ಕುರಿತು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆದರು.

   ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಉತ್ತರಿಸಿದರು.

## 8. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಶ್ರೀ ಶರವಣ ಟಿ.ಎ, ಶ್ರೀ ಶಶೀಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಇತರರು** ಅಬಕಾರಿ ಇಲಾಖೆಯಲ್ಲಿ ಸಿಎಲ್–2, ಸಿಎಲ್–7 ಮತ್ತು ಸಿಎಲ್–9ಗಳಿಗೆ ನಿಯಮಾನುಸಾರ ಪರವಾನಗಿ ನೀಡುವ ಬದಲು ದರಪಟ್ಟಿಯನ್ನು ನಿಗದಿಪಡಿಸುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಕುರಿತು ಹಾಗೂ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಠಾಚಾರದ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೆ.ಎಸ್. ನವೀನ್
2. ಡಾ: ಧನಂಜಯ ಸರ್ಜಿ

ಮಾನ್ಯ ಅಬಕಾರಿ ಸಚಿವರು ಉತ್ತರಿಸಿದರು.

**"ಗದ್ದಲ"**

3. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

**"ಗದ್ದಲ"**

4. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ರಾತ್ರಿ 8.30 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:02.02.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಸೋಮವಾರ, ದಿನಾಂಕ:02.02.2026

**(07)**

ದಿನಾಂಕ:02.02.2026 ರಂದು ಬೆಳಗ್ಗೆ 11.10 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಇತರ ಸದಸ್ಯರು ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಇತರ ಅಧಿಕಾರಿಗಳ ಕುರಿತು ಸದನದಲ್ಲಿ ಮಾತನಾಡಿರುವ ಸಂಬಂಧ ಕೈಗೊಂಡಿರುವ ಕ್ರಮದ ಕುರಿತು ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಪ್ರಸ್ತಾಪಿಸಿದರು ಹಾಗೂ ನಡವಳಿಯಲ್ಲಿ ದಾಖಲಾಗಿರುವ ಅಸಂವಿಧಾನಿಕ ಪದಗಳನ್ನು ಕಡತದಿಂದ ತೆಗೆದು ಹಾಕಬೇಕೆಂದು ಮನವಿ ಮಾಡಿದರು.

ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ನಡವಳಿಯಲ್ಲಿ ದಾಖಲಾಗಿರುವ ಅಸಂವಿಧಾನಿಕ ಪದಗಳನ್ನು ಕಡತದಿಂದ ತೆಗೆಸುವುದಾಗಿ ತಿಳಿಸಿದರು.

## 1. ನಿಯಮ 330ಎರ ಮೇರೆಗೆ

1. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ಗ್ರಾಮೀಣ ಪ್ರದೇಶದಲ್ಲಿ ಇ–ಖಾತಾ ಸರ್ವರ್ ಸಮಸ್ಯೆಯಿಂದಾಗಿ ಜನ ಸಾಮಾನ್ಯರು ತೊಂದರೆ ಅನುಭವಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಡಾ: ನಂಜುಂಡಪ್ಪ ವರದಿ ಅನುಷ್ಠಾನದ ಪರಾಮರ್ಶೆ ಹಾಗೂ ಪ್ರೊ. ಎಂ. ಗೋವಿಂದರಾವ್ ಸಮಿತಿಯ ಶಿಫಾರಸ್ಸುಗಳನ್ನು 2026–27ರ ಆಯವ್ಯಯದಿಂದಲೇ ಜಾರಿಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ರಮೇಶ್ ಬಾಬು** ಅವರು ಸಾರ್ವಜನಿಕರು ಮತ್ತು ಸಾಮಾಜಿಕ ಹೋರಾಟಗಾರರು ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ಕರ್ತವ್ಯಕ್ಕೆ ಅಡ್ಡಿಪಡಿಸುತ್ತಿರುವ ಕುರಿತು ಪ್ರಸ್ತಾಪಿಸಿ ರಾಜ್ಯದ ಎಲ್ಲಾ ಪೊಲೀಸ್ ಆಯುಕ್ತರುಗಳಿಗೆ ಪತ್ರ ಬರೆದಿದ್ದು, ಸಾರ್ವಜನಿಕರು ಮಾಹಿತಿ ಬಯಸಿದಾಗ ಅದನ್ನು ಹತ್ತಿಕ್ಕುವ ಕೆಲಸ ಮಾಡದಂತೆ ಪೊಲೀಸ್ ಇಲಾಖೆಯವರಿಗೆ ನಿರ್ದೇಶನ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ಉತ್ತರ ಕರ್ನಾಟಕ ಭಾಗದಲ್ಲಿ ಐಟಿ ಬಿಟಿ ಉದ್ಯಮಗಳ ಸ್ಥಾಪನೆ, ಆರ್ಯಭಟ ಪಾರ್ಕ್ ಹಾಗೂ ಬಿಯಾಂಡ್ ಬೆಂಗಳೂರು ಯೋಜನೆಯ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಮತಿ ಬಲ್ಕೀಸ್ ಬಾನು** ಅವರು ಸರ್ಕಾರ ಘೋಷಿಸಿರುವ ಸ್ಮಾರ್ಟ್ ಸಿಟಿ ಯೋಜನೆಯು ಪೂರ್ಣ ಪ್ರಮಾಣದಲ್ಲಿ ಜಾರಿಯಾಗದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀಮತಿ ಹೇಮಲತಾ ನಾಯಕ** ಅವರು ನವಲಿ ಗ್ರಾಮದ ಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಮುಂಭಾಗದಲ್ಲಿ ಘನ ತ್ಯಾಜ್ಯ ಹಾಗೂ ಕೋಳಿ ತ್ಯಾಜ್ಯ ವಿಲೇವಾರಿಗೆ ಕ್ರಮವಹಿಸುವ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಸಂಬಂಧಪಟ್ಟ ಅಧಿಕಾರಿಗಳಿಂದ ವರದಿ ಪಡೆದು ಉತ್ತರ ಒದಗಿಸುವುದಾಗಿ ತಿಳಿಸಿದರು.

## 2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆಗೆ ಸರ್ಕಾರದಿಂದ ಉತ್ತರ

ಶ್ರೀಯುತರುಗಳಾದ:–

10. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)
11. ಪಿ.ಹೆಚ್. ಪೂಜಾರ್
12. ಭಾರತಿ ಶೆಟ್ಟಿ
13. ತಿಪ್ಪಣ್ಣಪ್ಪ ಕಮಕನೂರ

ಮಧ್ಯಾಹ್ನ 12.35 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

14. ಬಸನಗೌಡ ಬಾದರ್ಲಿ
15. ಕೆ.ಎಸ್. ನವೀನ್
16. ಡಿ.ಎಸ್. ಅರುಣ್
17. ಡಾ: ಎಂ.ಆರ್. ಸೀತಾರಾಂ
18. ಎ. ವಸಂತ ಕುಮಾರ್
19. ಹೇಮಲತಾ ನಾಯಕ

ಮಧ್ಯಾಹ್ನ 2.15 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀಮತಿ ಭಾರತಿ ಶೆಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.24 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆಗೆ ಸರ್ಕಾರದಿಂದ ಉತ್ತರ

ಶ್ರೀಯುತರುಗಳಾದ:–

20. ಡಾ: ಉಮಾಶ್ರೀ
21. ಜಗದೇವ್ ಗುತ್ತೇದಾರ್
22. ಕೇಶವ ಪ್ರಸಾದ್ ಎಸ್
23. ಡಾ: ಧನಂಜಯ ಸರ್ಜಿ
24. ಎಫ್.ಹೆಚ್. ಜಕ್ಕಪ್ಪನವರ್
25. ಹೆಚ್.ಪಿ. ಸುಧಾಮ್ ದಾಸ್
26. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

## 3. ಅಭಿನಂದನಾ ನಿರ್ಣಯ

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು "ಭಾರತದಲ್ಲಿ ಸಮ್ಮಿಶ್ರ ಸರ್ಕಾರಗಳು, ಸಮಸ್ಯೆಗಳು ಮತ್ತು ಸವಾಲುಗಳು–ಒಂದು ಅಧ್ಯಯನ" ಎಂಬ ವಿಷಯದ ಬಗ್ಗೆ ಮಂಡಿಸಿದ ಪ್ರಬಂಧಕ್ಕೆ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯವು ದಿನಾಂಕ:31.01.2026ರಂದು ಡಾಕ್ಟರೇಟ್ ಪದವಿಯನ್ನು (ಪಿಹೆಚ್‌ಡಿ) ಪ್ರದಾನ ಮಾಡಿದೆ ಹಾಗೂ ಚಿಕ್ಕಮಗಳೂರಿನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಅಧ್ಯಕ್ಷರ ಸ್ಥಾನಕ್ಕೆ ದಿನಾಂಕ:01.02.2026ರಂದು ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿರುವುದಕ್ಕೆ ಮಾನ್ಯ ಶಾಸಕರಾದ ಶ್ರೀ ಡಿ.ಎಸ್. ಅರುಣ್ ಅವರು ಅಭಿನಂದನಾ ನಿರ್ಣಯವನ್ನು ಮಂಡಿಸಿದರು.

ಸದನವು ಸರ್ವಾನುಮತದಿಂದ ಅಂಗೀಕರಿಸಿತು.

## ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ

27. ಶ್ರೀ ಸಿ.ಟಿ. ರವಿ

ಸಂಜೆ 5.20 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಸಂಜೆ 5.25 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

28. ಡಾ: ತಳವಾರ್ ಸಾಬಣ್ಣ

ಸಂಜೆ 5.58 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಶ್ರೀಯುತರುಗಳಾದ:–

29. ನಿರಾಣಿ ಹಣಮಂತ್ ರುದ್ರಪ್ಪ
30. ಕಿಶೋರ್ ಕುಮಾರ್ ಪುತ್ತೂರ್

ಮಾನ್ಯ ಮುಖ್ಯಮಂತ್ರಿಯವರು ಉತ್ತರಿಸಿದರು.

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ರಾತ್ರಿ 8.30 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:03.02.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಮಂಗಳವಾರ, ದಿನಾಂಕ:03.02.2026

**(08)**

ದಿನಾಂಕ:03.02.2026 ರಂದು ಬೆಳಗ್ಗೆ 11.30 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **"ಧರಣಿ"**

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದು, ಶ್ರೀ ನಸೀರ್ ಅಹ್ಮದ್ ಅವರನ್ನು ಸದನದಿಂದ ಹೊರಹಾಕಬೇಕೆಂದು ಒತ್ತಾಯಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ದಿನಾಂಕ:02.02.2026ರಂದು ರಾತ್ರಿ 8.25ರ ಸಮಯದಲ್ಲಿ ಮಾನ್ಯ ಶಾಸಕರು ಪ್ರಧಾನ ಮಂತ್ರಿ ದೇಶದ್ರೋಹಿ ಎಂದು ಸಂಬೋಧಿಸಿದ್ದು, ಅವರನ್ನು ಹೊರಹಾಕಬೇಕೆಂದು ಪತ್ರವನ್ನು ನೀಡಿರುತ್ತಾರೆಂದು ಮಾನ್ಯ ಸಭಾಪತಿಯವರು ಸದನದ ಗಮನಕ್ಕೆ ತಂದು, ಸದನದ ನಡವಳಿಯನ್ನು ಓದಿ ತಿಳಿಸಿದರು ಹಾಗೂ ಶ್ರೀ ನಸೀರ್ ಅಹ್ಮದ್ ಅವರು ಬೇಷರತ್ ಕ್ಷಮೆಯಾಚಿಸಬೇಕೆಂದು ಮಾನ್ಯ ಶಾಸಕರಿಗೆ ತಿಳಿಸಿದರು.

## **"ಗದ್ದಲ"**

ಜಾತ್ಯಾತೀತ ಜನತಾದಳ ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಎಸ್.ಎಲ್. ಭೋಜೇಗೌಡ ಅವರು ಪ್ರಕರಣದ ಕುರಿತು ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದರು.

ಬೆಳಗ್ಗೆ 11.55 ಗಂಟೆಯಲ್ಲಿ 5 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 1.00 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಶ್ರೀ ಸಲೀಂ ಅಹಮದ್, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು **"ಪಾಕಿಸ್ತಾನ"** ಎಂಬ ಪದ ಬಳಸಿರುವ ಕುರಿತು ಆಕ್ಷೇಪಣೆ ವ್ಯಕ್ತಪಡಿಸಿ ಕಾಂಗ್ರೆಸ್ ಪಕ್ಷದವರು ನೀಡಿರುವ ಪತ್ರದಲ್ಲಿನ ಅಂಶಗಳನ್ನು ಮಾನ್ಯ ಸಭಾಪತಿಯವರು ಓದಿ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಇಂದಿನ ದಿನದ ನಡವಳಿಯನ್ನು ಓದಿ ತಿಳಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಯಾರೊಬ್ಬರ ಹೆಸರನ್ನು ಶ್ರೀ ಸಿ.ಟಿ. ರವಿ ಅವರು ಪ್ರಸ್ತಾಪಿಸಿರುವುದಿಲ್ಲವೆಂದು ತಿಳಿಸಿದರು.

ಆಡಳಿತ ಹಾಗೂ ವಿರೋಧ ಪಕ್ಷದ ಮಾನ್ಯ ಶಾಸಕರುಗಳ ನಡುವೆ ವಾಗ್ವಾದ.

ಶ್ರೀ ನಸೀರ್ ಅಹ್ಮದ್ ಅವರು ವಿಷಾದ ವ್ಯಕ್ತಪಡಿಸಿದರು.

ಮಾನ್ಯ ಶಾಸಕರು ವಿಷಾದ ವ್ಯಕ್ತಪಡಿಸಿರುವುದನ್ನು ಒಪ್ಪದೆ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಪ್ರಧಾನ ಮಂತ್ರಿಯವರ ಕುರಿತು ಮಾತನಾಡಿದವರನ್ನು ಪತ್ತೆ ಹಚ್ಚುವಂತೆ ಕೋರಿ ಮನವಿ ಪತ್ರ ನೀಡಿದ್ದು, ಅವರನ್ನು ಪತ್ತೆ ಹಚ್ಚಲಾಗಿದ್ದು, ಸದರಿಯವರು ವಿಷಾದ ವ್ಯಕ್ತಪಡಿಸಿರುವುದರಿಂದ ಪ್ರಕರಣ ಮುಕ್ತಾಯವಾಗಿದೆ ಎಂದು ತಿಳಿಸುತ್ತಾ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಧರಣಿ ಕೈಬಿಟ್ಟು ತಮ್ಮ ಆಸನಗಳಿಗೆ ತೆರಳಿದರು.

ಆಡಳಿತ ಪಕ್ಷದ ಮಾನ್ಯ ಶಾಸಕರು ಶ್ರೀ ಸಿ.ಟಿ. ರವಿ ಅವರು ಕ್ಷಮೆಯಾಚಿಸಬೇಕೆಂದು ಕೋರಿದರು.

ಶ್ರೀ ಸಿ.ಟಿ. ರವಿ ಅವರಿಗೆ ವಿಷಾದ ವ್ಯಕ್ತಪಡಿಸುವಂತೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಸೂಚಿಸಿದರು.

ಮಧ್ಯಾಹ್ನ 2.10 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.10 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಶ್ರೀ ಸಿ.ಟಿ. ರವಿ ಅವರು ವಿಷಾದ ವ್ಯಕ್ತಪಡಿಸಬೇಕೆಂದು ಪೀಠದಿಂದ ವಿನಂತಿಸಲಾಗಿದ್ದು, ಅವರು ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಸಿ.ಟಿ. ರವಿ ಅವರು ಮಾಡದ ತಪ್ಪಿಗೆ ಕ್ಷಮೆ ಕೇಳಲು ತಮ್ಮ ಮನಸಾಕ್ಷಿ ಒಪ್ಪುವುದಿಲ್ಲವೆಂದು ತಿಳಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಗೌರವಾನ್ವಿತ ಶಾಸಕರು ಪೀಠದ ಆದೇಶ ಗೌರವಿಸುವುದು ಸೂಕ್ತ ಎಂದು ಸಲಹೆ ನೀಡಿದರು.

ಆಡಳಿತ ಹಾಗೂ ವಿರೋಧ ಪಕ್ಷದ ಮಾನ್ಯ ಶಾಸಕರುಗಳ ನಡುವೆ ವಾಗ್ವಾದ.

ದಿನಾಂಕ:13.07.2023ರಂದು ಮಾನ್ಯ ಶಾಸಕರಾದ ಶ್ರೀ ನಸೀರ್ ಅಹ್ಮದ್ ಅವರು ಆಡಿದ ಮಾತುಗಳಿಗೆ ತೀರ್ಪು ನೀಡಲಾಗಿದ್ದು, ಇಲ್ಲಿಯವರೆಗೆ ನಡೆದ ನಡವಳಿಗಳಲ್ಲಿ ಪದಗಳನ್ನು ಕಡತದಿಂದ ತೆಗೆದುಹಾಕಲಾಗಿದೆ. ಅದರಂತೆ ಈ ದಿನದ ನಡವಳಿಯಲ್ಲಿನ ಪದಗಳನ್ನು ಕಡತದಿಂದ ತೆಗೆದು ಹಾಕಲು ಸೂಚಿಸಿದರು.

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಸಂವಿಧಾನದ ಅಧ್ಯಾಯ Vನ್ನು ಓದಿ ತಿಳಿಸಿದರು.

## "ಗದ್ದಲ"

ಈ ಕೆಳಕಂಡ ಮಾನ್ಯ ಶಾಸಕರುಗಳು ಮಾತನಾಡಿದರು.

ಶ್ರೀಯುತರುಗಳಾದ:–

1. ನಸೀರ್ ಅಹ್ಮದ್
2. ಕೆ. ಅಬ್ದುಲ್ ಜಬ್ಬರ್
3. ಎಂ. ನಾಗರಾಜು
4. ಶಿವಕುಮಾರ್ ಕೆ.
5. ಕೆ.ಎಸ್. ನವೀನ್

6. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
7. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)
8. ಡಾ: ಉಮಾಶ್ರೀ
9. ಎ. ವಸಂತ ಕುಮಾರ್
10. ಪಿ.ಹೆಚ್. ಪೂಜಾರ್

ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಶ್ರೀ ಸಿ.ಟಿ. ರವಿ ಅವರಿಗೆ ವಿಷಾದ ವ್ಯಕ್ತಪಡಿಸಿ ಸದನವನ್ನು ಸುಸೂತ್ರವಾಗಿ ನಡೆಸಲು ಅವಕಾಶ ಮಾಡಿಕೊಡುವಂತೆ ತಿಳಿಸಿದರು.

ಶ್ರೀ ಸಿ.ಟಿ. ರವಿ ಅವರು ಯಾವೊಬ್ಬ ಶಾಸಕರನ್ನು ಉದ್ದೇಶಿಸಿ ನಾನು ಮಾತನಾಡಿರುವುದಿಲ್ಲ, ದೇಶದ ಪ್ರಧಾನಿಯವರ ಬಗ್ಗೆ ಮಾತನಾಡಿರುವವರು ಯಾರು ಎಂದು ಪರಾಮರ್ಶಿಸಲು ಕೋರಿದ್ದು, ಆತ್ಮ ವಂಚನೆ ಮಾಡಿಕೊಂಡು ಕ್ಷಮೆ ಕೋರುವುದಿಲ್ಲವೆಂದು ತಿಳಿಸಿದರು.

ಮಾನ್ಯ ಕಾರ್ಮಿಕ ಸಚಿವರು ಈ ಬಗ್ಗೆ ಮಾತನಾಡಿದರು. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸದನದ ಎಲ್ಲಾ ಶಾಸಕರುಗಳಿಗೆ ಪೀಠದ ಆದೇಶಕ್ಕೆ ಗೌರವಿಸಬೇಕೆಂದು ಸಲಹೆ ನೀಡಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಈ ಚರ್ಚೆಯನ್ನು ಇಲ್ಲಿಗೆ ಮುಕ್ತಾಯಗೊಳಿಸಿ ಸದನದ ಕಾರ್ಯಕಲಾಪಗಳನ್ನು ನಡೆಸುವಂತೆ ಕೋರಿದರು.

ಮಾನ್ಯ ಸಭಾನಾಯಕರು ಶ್ರೀ ಸಿ.ಟಿ. ರವಿ ಅವರು ಕ್ಷಮೆಯಾಚಿಸಲೇಬೇಕೆಂದು ಒತ್ತಾಯಿಸಿದರು.

ಸಂಜೆ 5.30 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:04.02.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಬುಧವಾರ, ದಿನಾಂಕ:04.02.2026

**(09)**

ದಿನಾಂಕ:04.02.2026 ರಂದು ಬೆಳಗ್ಗೆ 11.20 ಗಂಟೆಗೆ ಸದನವು ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ನಿಯಮ 330ಎರ ಮೇರೆಗೆ

1. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿಯ ಹೈನುಗಾರರಿಗೆ ಅನುಗ್ರಹ ಯೋಜನೆಯಡಿ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ರಾಜ್ಯದಲ್ಲಿ ಪೊಲೀಸ್ ಅಧಿಕಾರಿಗಳು ಲಂಚ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳು ಹಿಡಿದಿದ್ದು, ಅವರ ಮೇಲೆ ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ನೈರುತ್ಯ ರೈಲ್ವೆ ಇಲಾಖೆಯ ಮುಂಬಡ್ತಿ ಪರೀಕ್ಷೆಗಳಲ್ಲಿ ಕನ್ನಡ ಭಾಷೆ ನಿರ್ಲಕ್ಷಿಸಿ ಕನ್ನಡಿಗ ನೌಕರರಿಗೆ ಆಗುತ್ತಿರುವ ಅನ್ಯಾಯದ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ರಾಮೋಜಿಗೌಡ** ಅವರು ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಖಾಲಿ ಹುದ್ದೆಗಳಿಗೆ ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ರಮೇಶ್ ಬಾಬು** ಅವರು ರಾಜ್ಯದಲ್ಲಿ ಇ–ಆಡಳಿತ ಮೂಲಕ ಡಿಬಿಟಿ ಯೋಜನೆಯಲ್ಲಿ ಕೆಲವು ನಿವೃತ್ತ ಅಧಿಕಾರಿಗಳು ಟೆಂಡರ್ ಅಥವಾ ಹಣಕಾಸು ವಿಚಾರದಲ್ಲಿ ತಮಗೆ ಬೇಕಾದವರಿಗೆ ಅವಕಾಶ ಮಾಡಿಕೊಡುತ್ತಿದ್ದು, ಸದರಿ ಇಲಾಖೆಯಲ್ಲಿ ಆಗುತ್ತಿರುವ ಭ್ರಷ್ಟಾಚಾರ ತಡೆಯಲು ವಿಶೇಷ ಉನ್ನತ ಮಟ್ಟದ ಸಮಿತಿ ರಚಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಜಗದೇವ್ ಗುತ್ತೇದಾರ್** ಅವರು ಮಂಗಳೂರು ಸಹಕಾರ ಸಂಘಗಳ ಮೂಲಕ ನೀರಾ ಮಾರಾಟಕ್ಕೆ ಅನುಮತಿ ನೀಡುವ ಮೂಲಕ ಸೇಂದಿ ತಯಾರಿಕೆಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿರುವುದರಿಂದ ಈಡಿಗ ಸಮುದಾಯದ ಅಲೆಮಾರಿ ಜನಾಂಗದವರು ತೊಂದರೆಗೀಡಾಗಿದ್ದು, ಸೇಂದಿ ತಯಾರಿಕೆಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅಬಕಾರಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀಮತಿ ಹೇಮಲತಾ ನಾಯಕ** ಅವರು 7 ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಪಠ್ಯಪುಸ್ತಕ ಒದಗಿಸುವಲ್ಲಿ ವಿಳಂಬವಾಗಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ನವೀನ್ ಹೋಟೆಲ್ ಗಾಲ್ಫ್ ಕ್ಲಬ್‌ಗೆ ಮಂಜೂರಾದ ಜಮೀನನ್ನು ಸರ್ಕಾರಿ ಮೌಲ್ಯಗಳ ಪ್ರಕಾರ ಖರೀದಿ ಮಾಡದೆ ಕಡಿಮೆ ಮೊತ್ತಕ್ಕೆ ಖರೀದಿಸಿ ನೋಂದಣಿ ಮಾಡಿರುವುದರಿಂದ ಸರ್ಕಾರಕ್ಕೆ ಬರಬೇಕಾದ ನೋಂದಣಿ ಶುಲ್ಕದಿಂದ ವಂಚನೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ತಾಲ್ಲೂಕಿನ ಬಡಾಲ ಅಂಕಲಗಿ ಗ್ರಾಮದಲ್ಲಿ ದೊಡ್ಡ ಪ್ರಮಾಣದಲ್ಲಿ ಅರಣ್ಯ ನಾಶ ಮಾಡಿ ಸೋಲಾರ್ ಪ್ಲಾಂಟ್ ನಿರ್ಮಿಸಲು ಯೋಜನೆ ರೂಪಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 2. ಪ್ರಶ್ನೆಗಳಿಗೆ ಉತ್ತರ ಮಂಡನೆ

ದಿನಾಂಕ:28.01.2026ರಂದು ಮಂಡಿಸಿದ 15 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಹಾಗೂ 95 ಚುಕ್ಕೆ ರಹಿತ ಪ್ರಶ್ನೆಗಳಿಗೆ ಮತ್ತು ದಿನಾಂಕ:29.01.2026ರಂದು ಮಂಡಿಸಿದ 13 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಹಾಗೂ 83 ಚುಕ್ಕೆ ರಹಿತ ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

## 3. ಹಕ್ಕುಚ್ಯುತಿ ಮಂಡನೆ

**ಶ್ರೀ ರಮೇಶ್ ಬಾಬು** ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ನಡೆಯುವ ಸಭೆ ಸಮಾರಂಭಗಳಿಗೆ ಆಹ್ವಾನಿಸುತ್ತಿಲ್ಲವೆಂದು ತಹಶೀಲ್ದಾರರ ವಿರುದ್ಧ ಮಂಡಿಸಿದ ಹಕ್ಕುಚ್ಯುತಿಯನ್ನು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಹಕ್ಕುಬಾಧ್ಯತಾ ಸಮಿತಿಯ ಪರಿಶೀಲನೆಗೆ ವಹಿಸಲಾಗುವುದೆಂದು ತಿಳಿಸಿದರು.

ಮಾನ್ಯ ಸಭಾನಾಯಕರು, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಶ್ರೀ ಐವನ್ ಡಿ'ಸೋಜಾ ಅವರು ಶ್ರೀ ಸಿ.ಟಿ. ರವಿ ಅವರು ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದರು. ಶ್ರೀ ರಮೇಶ್ ಬಾಬು ಅವರು ದಿನಾಂಕ:01.04.1991ರಂದು ನಡೆದ ಅಧಿವೇಶನದಲ್ಲಿ ಮಾನ್ಯ ಸಭಾಪತಿಯವರು Expunge ಆದ ಪದಗಳನ್ನು ಮತ್ತೆ ಪ್ರಸ್ತಾಪಿಸಬಾರದು ಎಂದು ತೀರ್ಪು ನೀಡಲಾಗಿದೆ ಎಂದು ಸದನಕ್ಕೆ ಓದಿ ತಿಳಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಈ ಪ್ರಕರಣವು ಮುಕ್ತಾಯವಾಗಿ, ನಿಯಮ 330ರ ಮೇರೆಗೆ ಕಲಾಪಗಳು ಆರಂಭವಾಗಿವೆ. ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ತಮ್ಮ** ಆದೇಶದಲ್ಲಿ ಮಾನ್ಯ ಶಾಸಕರ ಆತ್ಮಾವಲೋಕನಕ್ಕೆ ಬಿಟ್ಟಿದೆ ಎಂದು ತಿಳಿಸಿದ್ದು, ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ಕ್ಷಮೆಯಾಚಿಸುವುದಿಲ್ಲವೆಂದು ತಿಳಿಸಿರುತ್ತಾರೆ.

ಈ ಸಂಬಂಧದಲ್ಲಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮಾತನಾಡಿದರು.

ಶ್ರೀ ಡಿ.ಎಸ್. ಅರುಣ್ ಅವರು ಈ ವಿಷಯ ಕೈಬಿಟ್ಟು ನಿರ್ಣಯದ ಮೇಲೆ ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ಕೋರಿದರು.

ಶ್ರೀ ಎ. ವಸಂತ ಕುಮಾರ್ ಅವರು ಶ್ರೀ ಸಿ.ಟಿ. ರವಿ ಅವರು ವಿಷಾದವನ್ನು ವ್ಯಕ್ತಪಡಿಸಬೇಕೆಂದು ಪೀಠವನ್ನು ಮನವಿ ಮಾಡಿಕೊಂಡರು.

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಮಾನ್ಯ ಸಭಾನಾಯಕರು, ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಹೇಳಿದ್ದರಿಂದ ವಿಷಾದ ವ್ಯಕ್ತಪಡಿಸಿರುವುದು ಎಂದು ತಿಳಿಸಿರುತ್ತಾರೆ. ಇದು ಸರಿಯಾದ ಕ್ರಮವಲ್ಲ ಎಂದು ಶ್ರೀಮತಿ ಭಾರತಿ ಶೆಟ್ಟಿ ಅವರು ತಿಳಿಸಿದರು ಹಾಗೂ ಅದನ್ನು ಕಡತದಿಂದ ತೆಗೆದುಹಾಕಬೇಕೆಂದು ಕೋರಿದರು.

ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಅವರು ಈ ವಿಷಯದ ಚರ್ಚೆಯನ್ನು ಮುಂದಕ್ಕೆ ತೆಗೆದುಕೊಂಡು ಹೋಗದೆ ಸದನದಲ್ಲಿ ಬೇರೆ ವಿಷಯಗಳನ್ನು ಚರ್ಚಿಸಲು ಅವಕಾಶ ಮಾಡಿಕೊಡಬೇಕೆಂದು ಕೋರಿದರು.

ಮಧ್ಯಾಹ್ನ 12.28 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

ಶ್ರೀ ಎನ್. ರವಿಕುಮಾರ್ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಸಿ.ಟಿ. ರವಿ ಇವರ ವಿಷಯವನ್ನು ಕೈಬಿಡುವಂತೆ ಕೋರಿದರು.

ಶ್ರೀಮತಿ ಹೇಮಲತಾ ನಾಯಕ ಅವರು ಶ್ರೀ ಸಿ.ಟಿ. ರವಿ ಅವರು ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ ಆದುದರಿಂದ ವಿಷಯವನ್ನು ಕೈಬಿಡುವಂತೆ ಕೋರಿದರು.

ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಕೆ.ಎಸ್. ನವೀನ್ ಅವರುಗಳು ಶ್ರೀ ಸಿ.ಟಿ. ರವಿ ಅವರ ವಿಷಯವನ್ನು ಕೈಬಿಡುವಂತೆ ಕೋರಿದರು.

ಮಧ್ಯಾಹ್ನ 12.40 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಶ್ರೀ ಎ. ವಸಂತ ಕುಮಾರ್, ಶ್ರೀ ಶಿವಕುಮಾರ್ ಕೆ. ಹಾಗೂ ಡಾ: ಉಮಾಶ್ರೀ ಅವರುಗಳು ಶ್ರೀ ಸಿ.ಟಿ. ರವಿ ಅವರು ಕ್ಷಮೆಯಾಚಿಸಲೇಬೇಕೆಂದು ಒತ್ತಾಯಿಸಿದರು.

ಮಧ್ಯಾಹ್ನ 12.55 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

## "ಗದ್ದಲ"

ಮಧ್ಯಾಹ್ನ 1.30 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.25 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## "ಗದ್ದಲ"

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಸದನದಲ್ಲಿ ಆಡಿರುವ ಮಾತುಗಳಿಗೆ ಕ್ಷಮೆ ಕೋರಿದ್ದು, ಪಕ್ಷದ ಹಿರಿಯ ಮುಖಂಡರ ಆದೇಶದ ಮೇರೆಗೆ ಕೋರಿದ್ದೇನೆ ಎಂದು ತಿಳಿಸಿದ್ದಾರೆ. ಅದಕ್ಕೆ ನಾನು ವಿರೋಧ ವ್ಯಕ್ತಪಡಿಸುತ್ತೇನೆ ಎಂದು ಶ್ರೀಮತಿ ಭಾರತಿ ಶೆಟ್ಟಿ ಅವರು **ಸಭಾತ್ಯಾಗ** ಮಾಡಿದರು.

ಮಾನ್ಯ ಸಭಾನಾಯಕರು ಶ್ರೀ ಸಿ.ಟಿ. ರವಿ ಅವರನ್ನು ಸದನದಿಂದ ಹೊರಹಾಕಬೇಕೆಂಬ ಪ್ರಸ್ತಾವ ಮಂಡಿಸಿದರು.

ಮಾನ್ಯ ಶಾಸಕರು ಸದನದಲ್ಲಿ ಉಪಸ್ಥಿತರಿಲ್ಲದ ಕಾರಣ 15 ನಿಮಿಷಗಳಲ್ಲಿ ಹಾಜರಾಗುವಂತೆ ಸೂಚಿಸಲಾಯಿತು.

## 4. ಅಧಿಕೃತ ನಿರ್ಣಯ

ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಕೇಂದ್ರ ಸರ್ಕಾರದ ವಿಕಸಿತ ಭಾರತ ಗ್ಯಾರೆಂಟಿ ಫಾರ್ ರೋಜ಼್‌ಗಾರ್ ಮತ್ತು ಅಜೀವಿಕ ಮಿಷನ್ (ಗ್ರಾಮೀಣ) (VB-G RAM G) ಕಾಯ್ದೆಯನ್ನು ರದ್ದುಪಡಿಸುವ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (MGNREGA) ಕಾಯ್ದೆಯನ್ನು ಮರುಸ್ಥಾಪಿಸಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ಈ ಕೆಳಗಿನ ನಿರ್ಣಯವನ್ನು ಮಂಡಿಸಿದರು.

**"**ಕರ್ನಾಟಕ ರಾಜ್ಯದ ಗ್ರಾಮೀಣ ಜನರ ಬದುಕಿನ ಹಕ್ಕನ್ನು ಕಾಪಾಡುವ ದೃಷ್ಟಿಯಿಂದ ಒಕ್ಕೂಟ ತತ್ವಕ್ಕೆ ವಿರೋಧವಾಗಿರುವ ಮತ್ತು ರಾಜ್ಯದ ಬೊಕ್ಕಸಕ್ಕೆ ತೀವ್ರ ಹೊರೆ ಉಂಟುಮಾಡುವ ವಿಕಸಿತ ಭಾರತ್ ಗ್ಯಾರೆಂಟಿ ಫಾರ್ ರೋಜ಼್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) (VB-G RAM G) ಕಾಯ್ದೆಯನ್ನು ಕೇಂದ್ರ ಸರ್ಕಾರವು ತಕ್ಷಣವೇ ರದ್ದುಗೊಳಿಸಬೇಕು.

ವಿಕೇಂದ್ರೀಕರಣ ತತ್ವಕ್ಕೆ ವಿರುದ್ಧವಾಗಿರುವ ಗ್ರಾಮ ಪಂಚಾಯತಿಗಳ ಅಧಿಕಾರ ಮತ್ತು ಹಕ್ಕುಗಳನ್ನು ಕಸಿದುಕೊಂಡಿರುವ ಈ ಕಾಯ್ದೆಯನ್ನು ತಕ್ಷಣವೇ ರದ್ದುಗೊಳಿಸಬೇಕು.

ಗ್ರಾಮೀಣ ಆಸ್ತಿ ಸೃಜನೆಗೆ ಮತ್ತು ಬಡವರ ಸ್ವಾವಲಂಬನೆಗೆ ಕಾರಣವಾಗಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಕಾಯ್ದೆ (MGNREGA)ಯನ್ನು ಈ ಹಿಂದಿನಂತೆ ಅದರ ಮೂಲ ಸ್ವರೂಪದಲ್ಲಿಯೆ ಮರುಸ್ಥಾಪಿಸಬೇಕು ಎಂದು ಈ ಸದನವು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ.**"**

ಮಾನ್ಯ ಸಭಾನಾಯಕರು ಮಂಡಿಸಿರುವ ಪ್ರಸ್ತಾವಕ್ಕೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** 15 ನಿಮಿಷ ಕಾಲಾವಕಾಶ ನೀಡಿದ್ದು, ಶ್ರೀ ಸಿ.ಟಿ. ರವಿ ಅವರು ಹಾಜರಾಗದ ಪ್ರಯುಕ್ತ ಕ್ರಮವಹಿಸಬೇಕೆಂದು ಆಡಳಿತ ಪಕ್ಷದ ಶಾಸಕರುಗಳು ಕೋರಿದರು. ರಾತ್ರಿ 8 ಗಂಟೆಗೆಯವರೆಗೆ ಸಮಯಾವಕಾಶ ನೀಡಿರುವುದಾಗಿ ಪೀಠದಿಂದ ಆದೇಶಿಸಲಾಯಿತು.

## ಅಧಿಕೃತ ನಿರ್ಣಯದ ಮೇಲೆ ಮುಂದುವರೆದ ಚರ್ಚೆ

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೆ.ಎಸ್. ನವೀನ್
2. ಶ್ರೀ ಶಿವಕುಮಾರ್ ಕೆ.

ಸಂಜೆ 5.12 ಗಂಟೆಯಲ್ಲಿ **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

3. ಶ್ರೀ ಪಿ.ಹೆಚ್. ಪೂಜಾರ್
4. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
5. ಶ್ರೀ ರಮೇಶ್ ಬಾಬು
6. ಶ್ರೀ ಹೇಮಲತಾ ನಾಯಕ

## 5. ಸೂಚನೆಗಳಿಗೆ ಉತ್ತರಗಳ ಮಂಡನೆ

ನಿಯಮ 72 ರಡಿಯಲ್ಲಿ ಮಾನ್ಯ ಶಾಸಕರುಗಳಿಂದ ಒಟ್ಟು 75 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 2 ಸೂಚನೆಗಳನ್ನು ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು ಹಾಗೂ 32 ಸೂಚನೆಗಳಿಗೆ ಉತ್ತರಗಳನ್ನು ಹಾಗೂ ನಿಯಮ 330 ರಡಿಯಲ್ಲಿ ಮಾನ್ಯ ಶಾಸಕರುಗಳಿಂದ ಒಟ್ಟು 37 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ಸೂಚನೆಯನ್ನು ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು ಹಾಗೂ 16 ಸೂಚನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 6. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

**1.** **ಶ್ರೀಮತಿ ಬಲ್ಕೀಸ್ ಬಾನು** ಅವರು ಸಾರಿಗೆ ಇಲಾಖೆಯವರು ಎಫ್‌ಸಿ ತಪಾಸಣೆ ಮಾಡುವ ಸಮಯದಲ್ಲಿ ಹಳೆಯದಾದ ಮತ್ತು ರಸ್ತೆಯಲ್ಲಿ ಓಡಿಸಲು ಯೋಗ್ಯವಲ್ಲದ ಬಸ್‌ಗಳ ಪರವಾನಗಿಯನ್ನು ರದ್ದುಗೊಳಿಸಿ, ಖಾಸಗಿ ಬಸ್‌ಗಳಲ್ಲಿ ಸ್ಪೀಡ್ ಗವರ್ನರ್ ಅಳವಡಿಸಿರುವುದನ್ನು ಖಚಿತಪಡಿಸಿಕೊಂಡು ವೇಗದ ಮಿತಿ ಮೀರಿದವರ ಮೇಲೆ ದಂಡ ವಿಧಿಸುವ ಕುರಿತು ದಿನಾಂಕ:30.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

**2.** **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ಒಳಚರಂಡಿ ಜಾಲವನ್ನು ಅಭಿವೃದ್ಧಿಪಡಿಸುವ ಕುರಿತು ದಿನಾಂಕ:30.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಜ್ಯದ ವಿಶ್ವವಿದ್ಯಾನಿಲಯ ಹಾಗೂ ಸರ್ಕಾರಿ, ಖಾಸಗಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:01.07.2022ರ ನಂತರ ನಿವೃತ್ತರಾದ ನೌಕರರಿಗೆ ಪಿಂಚಣಿಯಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ದಿನಾಂಕ:30.01.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## ಅಧಿಕೃತ ನಿರ್ಣಯದ ಮೇಲೆ ಮುಂದುವರೆದ ಚರ್ಚೆ

ಶ್ರೀಯುತರುಗಳಾದ

7. ಎಸ್. ರವಿ
8. ಪ್ರತಾಪ್ ಸಿಂಹ ನಾಯಕ್ ಕೆ.
9. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ರಾತ್ರಿ 7.55 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ನಿರ್ಣಯವನ್ನು ವಿರೋಧಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

10. ಎಂ. ನಾಗರಾಜು

ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಶ್ರೀ ಸಿ.ಟಿ. ರವಿ ಅವರನ್ನು ಈ ದಿನದ ಉಪವೇಶನದ ಉಳಿದ ಅವಧಿಗೆ ಅಮಾನತ್ತು ಮಾಡಲಾಗಿದೆ ಎಂದು ತಿಳಿಸಿದರು.

11. ಡಾ: ಉಮಾಶ್ರೀ

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಅಧಿಕೃತ ನಿರ್ಣಯದ ಮೇಲೆ ವಿವರಣೆ ನೀಡಿದರು.

ನಿರ್ಣಯವನ್ನು ಅಂಗೀಕರಿಸಬೇಕೆಂಬ ಪ್ರಸ್ತಾವವನ್ನು ಮಂಡಿಸಿ ಅಂಗೀಕರಿಸಲಾಯಿತು.

## ಸಾರಾಂಶ

**ಮಾನ್ಯ ಸಭಾಪತಿಯವರು:–**

ವಿಧಾನ ಪರಿಷತ್ತಿನ 158ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:22.01.2026 ರಿಂದ 04.02.2026ರವರೆಗೆ ಒಟ್ಟು 09 ದಿನಗಳು ಅಂದರೆ, 36 ಗಂಟೆ 07 ನಿಮಿಷಗಳ ಕಾಲ ನಡೆಸಲಾಗಿರುತ್ತದೆ.

ದಿನಾಂಕ:22.01.2026ರಂದು ಬೆಳಿಗ್ಗೆ 11.00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳನ್ನುದ್ದೇಶಿಸಿ ಮಾಡಿದ ಭಾಷಣದ ಪ್ರತಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಮಾಜಿ ಶಾಸಕರಾಗಿದ್ದ ಶ್ರೀ ಭೀಮಣ್ಣ ಖಂಡ್ರೆ ಅವರು ನಿಧನರಾದುದಕ್ಕೆ ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಲಾಯಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ – ವಾಣಿಜ್ಯ) ವರದಿ (2025ರ ವರದಿ ಸಂಖ್ಯೆ–10) ಹಾಗೂ ಸ್ಮಾರ್ಟ್ ಸಿಟಿ ಮಿಷನ್ ಅನುಷ್ಠಾನದ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–11)ಗಳನ್ನು ಮಂಡಿಸಲಾಯಿತು.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು "ಭಾರತದಲ್ಲಿ ಸಮ್ಮಿಶ್ರ ಸರ್ಕಾರಗಳು, ಸಮಸ್ಯೆಗಳು ಮತ್ತು ಸವಾಲುಗಳು ಒಂದು ಅಧ್ಯಯನ" ಎಂಬ ವಿಷಯದ ಬಗ್ಗೆ ಮಂಡಿಸಿದ ಪ್ರಬಂಧಕ್ಕೆ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯವು ಡಾಕ್ಟರೇಟ್ ಪದವಿಯನ್ನು (ಪಿಹೆಚ್‌ಡಿ) ಪ್ರದಾನ ಮಾಡಿರುವುದಕ್ಕೆ ಹಾಗೂ ಚಿಕ್ಕಮಗಳೂರಿನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಅಧ್ಯಕ್ಷರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿರುವುದಕ್ಕೆ ಸದನವು ಅಭಿನಂದನಾ ಪ್ರಸ್ತಾವವನ್ನು ಮಂಡಿಸಿ ಅಂಗೀಕರಿಸಲಾಯಿತು.

ಕೇಂದ್ರ ಸರ್ಕಾರದ ವಿಕಸಿತ ಭಾರತ ಗ್ಯಾರೆಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕ ಮಿಷನ್ (ಗ್ರಾಮೀಣ) (VB-G RAM G) ಕಾಯ್ದೆಯನ್ನು ರದ್ದುಪಡಿಸುವ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (MGNREGA) ಕಾಯ್ದೆಯನ್ನು ಮರುಸ್ಥಾಪಿಸಬೇಕೆಂದು ಕೇಂದ್ರ ಸರ್ಕಾರವನ್ನು ಈ ಸದನವು ಸರ್ವಾನುಮತದಿಂದ ಒತ್ತಾಯಿಸುತ್ತದೆ ಎಂಬ ನಿರ್ಣಯವನ್ನು ಸದನದಲ್ಲಿ ಮಂಡಿಸಿ ಅಂಗೀಕರಿಸಲಾಗಿರುತ್ತದೆ.

ನಿಯಮ 59 ರಡಿಯಲ್ಲಿ ಸ್ವೀಕರಿಸಲಾಗಿದ್ದ ಒಂದು ಸೂಚನೆಯನ್ನು ನಿಯಮ 330ಕ್ಕೆ ಪರಿವರ್ತಿಸಿ ಚರ್ಚಿಸಿ ಉತ್ತರಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 553 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 60 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಹಾಗೂ 490 ಪ್ರಶ್ನೆಗಳನ್ನು ಚುಕ್ಕೆ ರಹಿತ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 25 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಗಿದ್ದು, 27 ಚುಕ್ಕೆ ಗುರುತಿನ ಪ್ರಶ್ನೆಗಳನ್ನು ಸದನದಲ್ಲಿ ಮಂಡಿಸಲಾಗಿರುತ್ತದೆ. ಲಿಖಿತ ಮೂಲಕ ಉತ್ತರಿಸುವ ಒಟ್ಟು 490 ಪ್ರಶ್ನೆಗಳ ಪೈಕಿ 311 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 72ರಡಿಯಲ್ಲಿ 75 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 02 ಸೂಚನೆಗಳಿಗೆ ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು ಹಾಗೂ 32 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 37 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 01 ಸೂಚನೆಗೆ ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು ಹಾಗೂ 16 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ಎರಡಿಯಲ್ಲಿ 16 ಸೂಚನೆಗಳನ್ನು ಸದನದಲ್ಲಿ ಪ್ರಸ್ತಾಪಿಸಲಾಗಿರುತ್ತದೆ.

ಶೂನ್ಯವೇಳೆ ಪ್ರಸ್ತಾವನೆಯ ಒಟ್ಟು 27 ಸೂಚನೆಗಳ ಪೈಕಿ 03 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 11 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:-**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಉಪ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ ಹಾಗೂ ಎಲ್ಲಾ ಶಾಸಕರುಗಳಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ರಾತ್ರಿ 9.30 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) **ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು.**

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಶುಕ್ರವಾರ, ದಿನಾಂಕ:06.03.2026

**(10)**

ದಿನಾಂಕ:06.03.2026 ರಂದು ಬೆಳಗ್ಗೆ 10.20 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**'ವಂದೇ ಮಾತರಂ'** ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿದ್ಯುಕ್ತವಾಗಿ ಆರಂಭಗೊಂಡಿತು.

## ಭಾರತದ ಸಂವಿಧಾನ

### ಪೀಠಿಕೆ

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

## ಆಯವ್ಯಯ ಮಂಡನೆ

2026–27ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಮಂಡಿಸಿದರು.

ಬೆಳಗ್ಗೆ 10.32 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:09.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಸೋಮವಾರ, ದಿನಾಂಕ:09.03.2026

**(11)**

ದಿನಾಂಕ:09.03.2026 ರಂದು ಬೆಳಗ್ಗೆ 11.10 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಂತಾಪ ಸೂಚನೆಗಳು

ಕಳೆದ ಅಧಿವೇಶನದಿಂದೀಚೆಗೆ ನಿಧನ ಹೊಂದಿದ ಈ ಕೆಳಕಂಡ ಗಣ್ಯರುಗಳಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

01. ಶ್ರೀ ಪಿ. ರಾಮಯ್ಯ, ಹಿರಿಯ ಪತ್ರಕರ್ತರು ಹಾಗೂ ವಿಧಾನ ಪರಿಷತ್ತಿನ ಮಾಜಿ ಶಾಸಕರು.
02. ಶ್ರೀ ಬಸ್ರೂರು ಅಪ್ಪಣ್ಣ ಹೆಗ್ಡೆ, ವಿಧಾನ ಪರಿಷತ್ತಿನ ಹಾಗೂ ವಿಧಾನ ಸಭೆಯ ಮಾಜಿ ಶಾಸಕರು.

ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಾಲ್ಯಾಭಿವೃದ್ಧಿ ಸಚಿವರು ಹಾಗೂ ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರುಗಳು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀ ಶಿವಕುಮಾರ್ ಕೆ. ಅವರು ಸಂತಾಪ ಸೂಚನಾ ನಿರ್ಣಯ ಅನುಮೋದಿಸಿ ಮಾತನಾಡಿದರು.

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಮೃತ ಗಣ್ಯರುಗಳ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

## 3. ಪ್ರಶ್ನೋತ್ತರ

ದಿನಾಂಕ:09.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 61(575)
2. 62(557)
3. 63(624)
4. 64(605)
5. 65(648)

ಮಧ್ಯಾಹ್ನ 12.05 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

6. 66(581)
7. 67(687)
8. 68(598)
9. 69(710)
10. 70(639)
11. 71(562)

ಮಧ್ಯಾಹ್ನ 12.55 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

12. 72(567)
13. 73(591) ಡಾ: ಉಮಾಶ್ರೀ ಪರವಾಗಿ ಶ್ರೀ ಐವನ್ ಡಿ’ಸೋಜಾ
14. 74(578+629)
15. 75(579)

ದಿನಾಂಕ:09.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಒಟ್ಟು 142 ಪ್ರಶ್ನೆಗಳ ಪೈಕಿ 43 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 3. ಹಕ್ಕುಚ್ಯುತಿ ಮಂಡನೆ

**ಶ್ರೀ ರಮೇಶ್ ಬಾಬು** ಅವರು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ಸೌಮ್ಯ ರವರಿಗೆ ಮಾಹಿತಿ ಬಯಸಿ ದೂರವಾಣಿ ಕರೆ ಮಾಡಿದ್ದು, ಕರೆಗೆ ಸ್ಪಂದಿಸದೆ ಶಿಷ್ಠಾಚಾರ ಉಲ್ಲಂಘಿಸಿ ಹಕ್ಕುಚ್ಯುತಿ ಎಸಗಿರುವ ಬಗ್ಗೆ ಸೂಚನೆ ಮಂಡಿಸಿದರು.

ಪ್ರಕರಣವನ್ನು ಪರಿಶೀಲಿಸಲು ಹಕ್ಕುಬಾಧ್ಯತಾ ಸಮಿತಿಗೆ ವಹಿಸಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

## 4. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಟಿ.ಎನ್. ಜವರಾಯಿಗೌಡ** ಅವರು ಕೆಂಗೇರಿ ಬಳಿ ಇರುವ ವಿಶ್ವೇಶ್ವರಯ್ಯ ಬಡಾವಣೆಯಲ್ಲಿರುವ ನಿವೇಶನ, ರಾಜಕಾಲುವೆ ಮತ್ತು ಉದ್ಯಾನವನದ ಜಾಗದಲ್ಲಿ ಕೆಲ ಖಾಸಗಿ ವ್ಯಕ್ತಿಗಳು ಅನಧಿಕೃತ ರಸ್ತೆ ನಿರ್ಮಾಣ ಮಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಸ್ಥಗಿತಗೊಳಿಸಲು ಹೊರಡಿಸಿರುವ ಆದೇಶ ಹಿಂಪಡೆದು, ಸಖಿ ಯೋಜನೆಯೊಂದಿಗೆ ವಿಲೀನಗೊಳಿಸದೆ ಪ್ರತ್ಯೇಕವಾಗಿ ಮುಂದುವರೆಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಸಿ.ಟಿ. ರವಿ** ಅವರು ಅಬಕಾರಿ ಇಲಾಖೆಯಲ್ಲಿನ ಲಂಚದ ಹಾವಳಿ ಖಂಡಿಸಿ ಮದ್ಯ ಮಾರಾಟಗಾರರು ಪ್ರತಿಭಟಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅಬಕಾರಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ಅಂಗನವಾಡಿ ಮಕ್ಕಳಿಗೆ ಅವಧಿ ಮೀರಿದ ಆಹಾರ ಪದಾರ್ಥ ವಿತರಿಸಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀಮತಿ ಬಲ್ಕೀಸ್ ಬಾನು** ಅವರು ಕೇರಳದ ಏಕೈಕ ಅಧಿಕೃತ ಭಾಷೆಯೆಂದು ಮಲಯಾಳಂ ಭಾಷೆಗೆ ಸ್ಥಾನಮಾನ ನೀಡಿ ಮಲಯಾಳ ಭಾಷಾ ಮಸೂದೆ ಮಂಡಿಸಿ ಅಂಗೀಕರಿಸಲಾಗಿದ್ದು ಮಲಯಾಳಂ ಭಾಷೆಯನ್ನು ಕಡ್ಡಾಯವಾಗಿ ಕಲಿಯಬೇಕಾಗಿರುವುದರಿಂದ ಗಡಿನಾಡ ಕನ್ನಡಿಗರಲ್ಲಿ ಆತಂಕ ಮೂಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಜಗದೇವ್ ಗುತ್ತೇದಾರ್** ಅವರು ರಾಜ್ಯ ಹಾಗೂ ರಾಜಧಾನಿಯಲ್ಲಿ ಟೈಫೈಡ್ ಹಾಗೂ ಅತಿಸಾರ ಸೋಂಕಿನ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ಜಿಲ್ಲೆಯ ಹಿರೇಸಿಂದೋಗಿ ಸರ್ಕಾರಿ ಪಿ.ಯು ಕಾಲೇಜಿನ ವಿದ್ಯಾರ್ಥಿನಿಯನ್ನು ಉರ್ದು ಭಾಷೆ ಪರೀಕ್ಷೆಗೆ ಹಾಜರಾಗದಂತೆ ತಡೆಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

8. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಜಿಲ್ಲೆಯಲ್ಲಿನ ಮುಧೋಳ ಗ್ರಾಮದ ಜನರಿಗೆ (ದೋಷಪೂರಿತ) ಕಲುಷಿತ ನೀರು ಪೂರೈಕೆಯಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

9. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕಿನ ಖರೀದಿ ಕೇಂದ್ರಗಳಲ್ಲಿ ಜೋಳ ಬೆಳೆ ನೋಂದಣಿ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ರಮೇಶ್ ಬಾಬು** ಅವರು ಐ.ಎ.ಎಸ್. ಪದೋನ್ನತಿ ಪಡೆದ ಹಿರಿಯ ಕೆ.ಎ.ಎಸ್. ಅಧಿಕಾರಿಗಳಿಗೆ ಇಂಡಕ್ಷನ್ ತರಬೇತಿಗೆ ನಿಯೋಜನೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 5. ಪ್ರಕಟಣೆ

ದಿನಾಂಕ: 09.03.2026 ರಂದು ಸಂಜೆ 4.00 ಗಂಟೆಗೆ ಹೋಟೆಲ್ ಲಲಿತ್ ಅಶೋಕ್ ಇಲ್ಲಿ **"ಆಯವ್ಯಯ ರಾಜಸ್ವಗಳ ಸಂಗ್ರಹಣೆ, ಅನುದಾನಗಳ ವರ್ಗೀಕರಣ ಮತ್ತು ಹಂಚಿಕೆ ಹಾಗೂ ಆಯವ್ಯಯ ಅನುದಾನಗಳ ಬಳಕೆ, ನಿರ್ವಹಣೆ"** ಎಂಬ ವಿಷಯದ ಕುರಿತು ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳಿಗೆ ತರಬೇತಿಯನ್ನು ಆಯೋಜಿಸಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

## 6. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಮುಖ್ಯಮಂತ್ರಿಗಳ ಹಾಗೂ ಸಂಬಂಧಪಟ್ಟ ಮಾನ್ಯ ಸಚಿವರುಗಳ ಪರವಾಗಿ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಒಂದನೇ ಮತ್ತು ಎರಡನೇ ಪಟ್ಟಿಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಮಾನ್ಯ ಶಾಸಕರಾದ ಶ್ರೀ ಸಿ.ಟಿ. ರವಿ ಅವರು ದಿನಾಂಕ:04.02.2026ರಂದು ರಾತ್ರಿ ಸದನದ ಕಲಾಪಗಳಿಗೆ ಹಾಜರಾಗದಂತೆ ಅಮಾನತ್ತುಗೊಳಿಸಿರುವ ವಿಷಯದ ಕುರಿತು ಸ್ಪಷ್ಟನೆ ಕೋರಿ ಪ್ರಸ್ತಾಪಿಸಿದರು.

ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತದನಂತರ ತಿಳಿಸುವುದಾಗಿ ಹೇಳಿದರು.

## 7. ಗಮನ ಸೆಳೆಯುವ ಸೂಚನೆ

1. **ಶ್ರೀ ಬಸನಗೌಡ ಬಾದರ್ಲಿ** ಅವರು ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲಾ ಕೇಂದ್ರದಿಂದ 91 ಕಿ.ಮೀ ದೂರದಲ್ಲಿರುವ ಸಿಂಧನೂರು ತಾಲ್ಲೂಕು ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದು, ವಿದ್ಯಾರ್ಥಿಗಳ ಸಂಖ್ಯೆ ಮತ್ತು ಭೌಗೋಳಿಕ ವ್ಯಾಪ್ತಿಯನ್ನು ಪರಿಗಣಿಸಿ ಸಿಂಧನೂರು ತಾಲ್ಲೂಕನ್ನು ನೂತನ ಶೈಕ್ಷಣಿಕ ಜಿಲ್ಲೆ ಎಂದು ಘೋಷಿಸುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

## 8. ಸಚಿವರ ಹೇಳಿಕೆ

ಮಾನ್ಯ ಶಾಸಕರು ಶೂನ್ಯವೇಳೆಯಲ್ಲಿ ಬೆಳಗಾವಿ ಅಂಗನವಾಡಿ ಮಕ್ಕಳಿಗೆ ಅವಧಿ ಮೀರಿದ ಆಹಾರ ಪದಾರ್ಥ ವಿತರಿಸಿರುವ ಕುರಿತು ಪ್ರಸ್ತಾಪಿಸಿದ ವಿಷಯಕ್ಕೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಹೇಳಿಕೆ ನೀಡಿದರು.

## ಗಮನ ಸೆಳೆಯುವ ಸೂಚನೆ

2. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತತು ಇತರೆ ಜನಾಂಗದ ಕುಟುಂಬಗಳನ್ನು ಬೇರೆ ಕಡೆ ಸ್ಥಳಾಂತರಿಸುತ್ತಿರುವ ಹಾಗೂ ಅವರು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ ನೀಡುವ ವಿಷಯದ ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

ಮಧ್ಯಾಹ್ನ 2.08 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:10.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಮಂಗಳವಾರ, ದಿನಾಂಕ:10.03.2026

**(12)**

ದಿನಾಂಕ:10.03.2026 ರಂದು ಬೆಳಗ್ಗೆ 11.15 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:10.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 76(812)
2. 77(741)
3. 78(731)
4. 79(806)
5. 80(755)
6. 81(778)
7. 82(771)
8. 83(864)
9. 84(813) ಶ್ರೀ ಸುನೀಲ್ ವಲ್ಯಾಪುರ್ ಪರವಾಗಿ ಶ್ರೀ ಶಶೀಲ್ ಜಿ ನಮೋಶಿ
10. 85(842)
11. 86(835)
12. 87(747)
13. 88(992)
14. 89(827)
15. 90(829)

ದಿನಾಂಕ:10.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಒಟ್ಟು 122 ಪ್ರಶ್ನೆಗಳ ಪೈಕಿ 41 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ರಾಮೋಜಿಗೌಡ** ಅವರು ಬೆಂಗಳೂರು ಮತ್ತು ಗ್ರಾಮಾಂತರ ಭಾಗಗಳಲ್ಲಿನ ಕೊಳವೆ ಬಾವಿಗಳ ದುರಸ್ಥಿ ಕಾರ್ಯಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ಅತ್ಯಗತ್ಯ ಔಷಧಗಳ ಕೊರತೆ ಹಾಗೂ ಖಾಲಿಯಿರುವ ವೈದ್ಯಕೀಯ ಹುದ್ದೆಗಳ ಭರ್ತಿ ಸಂಬಂಧ (ಒಪಿಡಿ ಸೇವೆ ಬಂದ್ ಮಾಡಲಿರುವುದರಿಂದ) ತುರ್ತು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಟಿ.ಎನ್. ಜವರಾಯಿಗೌಡ** ಅವರು ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಕೈಗಾರಿಕಾ ಪ್ರದೇಶಗಳಿಂದ ತೆರಿಗೆಯನ್ನು ಸಂಗ್ರಹಿಸಲು ಗ್ರಾಮ ಪಂಚಾಯತಿಗೆ ಅಧಿಕಾರ ನೀಡುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ಧಾರವಾಡ ಜಿಲ್ಲೆಯ ಹಂದಿಗನ ಹಳ್ಳಕ್ಕೆ ಸೇರುತ್ತಿರುವ ಶೌಚಾಲಯದ ನೀರನ್ನು ತಡೆಗಟ್ಟಲು ಮತ್ತು ಕಲುಷಿತ ನೀರನ್ನು ಶುದ್ಧೀಕರಿಸಲು ವೈಜ್ಞಾನಿಕ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಡಿ.ಎಸ್. ಅರುಣ್** ಅವರು ಪೊಲೀಸ್ ಇಲಾಖೆಯಲ್ಲಿ ಅನುದಾನದ ಕೊರತೆಯಿಂದಾಗಿ ಸಿಬ್ಬಂದಿಗಳಿಗೆ ಸಂಬಳ ಪಾವತಿಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಮಡಿಕೇರಿ ತಾಲ್ಲೂಕಿನಲ್ಲಿ ಕಾಡಾನೆ ದಾಳಿಯಿಂದಾಗಿ ಮೃತಪಟ್ಟಿರುವ ಕುಟುಂಬವರ್ಗದವರಿಗೆ ಪರಿಹಾರ ಒದಗಿಸುವ ಹಾಗೂ ಆನೆಗಳನ್ನು ಸೆರೆಹಿಡಿಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

7. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ಜಿಲ್ಲೆಯಲ್ಲಿನ ಕಾರ್ಖಾನೆಗಳಿಂದ ಮಾಲಿನ್ಯ ನಿಯಂತ್ರಿಸುವ ಹಾಗೂ ಮಾಲಿನ್ಯ ಬಾಧಿತ ಗ್ರಾಮಗಳ ಜನರನ್ನು ಭಾರತೀಯ ವೈದ್ಯಕೀಯ ಸಂಸ್ಥೆಯಿಂದಲೇ ಸಂಪೂರ್ಣ ಆರೋಗ್ಯ ತಪಾಸಣೆ ನಡೆಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನಲ್ಲಿ ಕುಡಿಯುವ ನೀರು ಪೂರೈಕೆಗೆ ಪೂರಕ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕೃಷಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕಿನ ಗ್ರಾಮೀಣ ಹಾಗೂ ನಗರ ಪ್ರದೇಶಕ್ಕೆ ಕುಡಿಯುವ ನೀರು ಪೂರೈಸಲು ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಭಾನಾಯಕರು ಉತ್ತರಿಸಿದರು.

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಈ ಕೆಳಕಂಡ ವರದಿಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**i.** ಭಾರತ ಸಂವಿಧಾನದ ಅನುಚ್ಛೇದ 243(i) ಮತ್ತು (y)ರ ಮೇರೆಗೆ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಕುರಿತಾದ ಐದನೇ ರಾಜ್ಯ ಹಣಕಾಸು ಆಯೋಗದ 2026–2030ನೇ ಸಾಲಿನ ವರದಿ.

**ii.** ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪ್ರದೇಶ ವ್ಯಾಪ್ತಿಯ ಬೆಂಗಳೂರು ಪಶ್ಚಿಮ, ದಕ್ಷಿಣ, ಉತ್ತರ, ಪೂರ್ವ ಮತ್ತು ಕೇಂದ್ರ ನಗರ ಪಾಲಿಕೆಗಳ 2026–2030ನೇ ಸಾಲಿನ ವರದಿ.

## 4. ನಿಲುವಳಿ ಸೂಚನೆ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಸಿ.ಟಿ. ರವಿ, ಡಾ: ತಳವಾರ್ ಸಾಬಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ-ಮಂಡಳಿಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ, ರಾಜ್ಯ ಸರ್ಕಾರವು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಕುರಿತು ನಿಯಮ 59ರಡಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರಿದರು.

ಸದರಿ ಸೂಚನೆಯನ್ನು ನಿಯಮ 330ರಡಿ ಪ್ರಸ್ತಾಪಿಸಲು ಅವಕಾಶ ನೀಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ತಿಳಿಸಿದರು.

## 5. ನಿಯಮ 330ರ ಮೇರೆಗೆ

1. **ಶ್ರೀ ಎಂ. ನಾಗರಾಜು** ಅವರು ರಾಜ್ಯ ರಾಜಧಾನಿಯಾದ ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣವನ್ನು ಅಂತರಾಷ್ಟ್ರೀಯ ಬಸ್ ನಿಲ್ದಾಣದ ಮಾದರಿಯಲ್ಲಿ ಮರು ಅಭಿವೃದ್ಧಿ ಪಡಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಾರಿಗೆ ಸಚಿವರು ಉತ್ತರಿಸಿದರು.

## 6. ಗಮನ ಸೆಳೆಯುವ ಸೂಚನೆ

1. **ಶ್ರೀ ಐವನ್ ಡಿ'ಸೋಜಾ** ಅವರು ಕರ್ನಾಟಕ ಗೇರು ಅಭಿವೃದ್ಧಿ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ 7ನೇ ವೇತನ ಆಯೋಗದ ವರದಿ ಜಾರಿಯಾಗದ ಕಾರಣ ವೇತನ ಹಾಗೂ ಇತರೆ ಭತ್ಯೆಗಳು ಸಿಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆದರು.

   ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

ಮಧ್ಯಾಹ್ನ 2.05 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.35 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 7. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಐವನ್ ಡಿ'ಸೋಜಾ

ಮಧ್ಯಾಹ್ನ 3.40 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 4.15 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

2. ಶ್ರೀ ಕೆ.ಎಸ್. ನವೀನ್

ಸಂಜೆ 5.20 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

### ಗಮನ ಸೆಳೆಯುವ ಸೂಚನೆಗಳು

**2.** **ಶ್ರೀ ಶಿವಕುಮಾರ್ ಕೆ** ಅವರು ಆಸಿಡ್ ದಾಳಿಗೊಳಗಾದ ಸಂತ್ರಸ್ಥೆಯರಿಗೆ ವೈದ್ಯಕೀಯ ಚಿಕಿತ್ಸೆ, ಮಾಸಿಕ ಪರಿಹಾರ, ವೇತನ, ವಾಸಸ್ಥಳ ವಸತಿ ಸೌಲಭ್ಯ, ಸರ್ಕಾರಿ ಉದ್ಯೋಗ ಮತ್ತು ಮೀಸಲಾತಿ ಒದಗಿಸುವ ಕುರಿತು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರಿಸಿದರು.

**3.** **ಶ್ರೀ ರಮೇಶ್ ಬಾಬು** ಅವರು ಬೆಂಗಳೂರಿನ ಪ್ರತಿಷ್ಠಿತ ಕೆಂಪೇಗೌಡ ರಸ್ತೆಯ (ಮೈಸೂರು ಬ್ಯಾಂಕ್ ಬಳಿ) ಒಂದನೇ ತಿರುವಿನಲ್ಲಿರುವ ಆಸ್ಪತ್ರೆ ರಸ್ತೆಗೆ ಹೋಗುವ ದಾರಿಯಲ್ಲಿ ರಸ್ತೆಯ ಎರಡು ಬದಿಗಳಲ್ಲಿ ಕಾನೂನು ಬಾಹಿರವಾಗಿ ವಾಹನ ನಿಲುಗಡೆ ಮಾಡುತ್ತಿರುವುದರಿಂದ ಆಗುತ್ತಿರುವ ತೊಂದರೆಗಳ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

## ನಿಯಮ 330ರ ಮೇರೆಗೆ

2. **ಡಾ. ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಹನ ಸಂಚಾರ ದಟ್ಟಣೆ, ಕಾನೂನು ಸುವ್ಯವಸ್ಥೆ ಮತ್ತು ಕ್ರಿಮಿನಲ್ ಪ್ರಕರಣಗಳ ಸಮಸ್ಯೆಗಳ ಪರಿಹಾರಕ್ಕಾಗಿ ಪೊಲೀಸ್ ಆಯುಕ್ತರ ಮತ್ತೊಂದು ಹುದ್ದೆ ಹಾಗೂ ಇನ್ನಿತರ ಪೂರಕ ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಪೊಲೀಸ್ ಇಲಾಖೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

ಸಂಜೆ 6.30 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:11.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಬುಧವಾರ, ದಿನಾಂಕ:11.03.2026

**(13)**

ದಿನಾಂಕ:11.03.2026 ರಂದು ಬೆಳಗ್ಗೆ 11.05 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:11.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 7ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 91(882) | |
| 2. | 92(957) | |
| 3. | 93(888) | |
| 4. | 94(849) | ಕಾಲಾವಕಾಶ |
| 5. | 95(892) | |
| 6. | 96(889) | |
| 7. | 97(955) | |
| 8. | 98(956) | |
| 9. | 99(937+951+972) | |
| 10. | 100(962) | |
| 11. | 101(930) | |
| 12. | 102(860) | |
| 13. | 103(984) | |
| 14. | 104(878) | ಕಾಲಾವಕಾಶ |
| 15. | 105(980) | ವರ್ಗಾವಣೆ |

ದಿನಾಂಕ:11.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 7ನೇ ಪಟ್ಟಿಯ ಒಟ್ಟು 124 ಪ್ರಶ್ನೆಗಳ ಪೈಕಿ 44 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಮಧ್ಯಾಹ್ನ 12.20 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)** ಅವರು ಬೆಂಗಳೂರು ಉತ್ತರ ವಲಯದಲ್ಲಿರುವ 10 ಸರ್ಕಾರಿ ಶಾಲೆಗಳಲ್ಲಿ 9ನೇ ತರಗತಿಯಲ್ಲಿ ಓದಿದ 181 ವಿದ್ಯಾರ್ಥಿಗಳು 10ನೇ ತರಗತಿಗೆ ಹಾಜರಾಗದಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಮಂಜುನಾಥ್ ಭಂಡಾರಿ** ಅವರು ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೋಂದಣಿ ಕಚೇರಿಯಲ್ಲಿ ಇ–ಖಾತಾ ಸರ್ವರ್‌ನ್ನು ಮೇಲ್ದರ್ಜೆಗೇರಿಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ಎಲ್ಲಾ ವಿಭಾಗಗಳಲ್ಲೂ ಸಿಸಿಟಿವಿ ಅಳವಡಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಡಾ: ಧನಂಜಯ ಸರ್ಜಿ** ಅವರು 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಮುಖ್ಯ ಪರೀಕ್ಷೆಯ ಫಲಿತಾಂಶದಲ್ಲಿ ಭ್ರಷ್ಟಾಚಾರ ನಡೆದಿರುವ ಬಗ್ಗೆ ಅನುಮಾನವಿರುವುದರಿಂದ ತನಿಖೆ ನಡೆಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಐವನ್ ಡಿ'ಸೋಜಾ** ಅವರು ಜಲಸಿರಿ ಯೋಜನೆ 2023, ಪೂರ್ಣಗೊಳಿಸಿ ಮಂಗಳೂರು ನಗರದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ರಮೇಶ್ ಬಾಬು** ಅವರು ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಅವರ ಅವಲಂಬಿತರಿಗೆ ನೀಡುತ್ತಿರುವ ಮಾಸಾಶನ ಹೆಚ್ಚಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಗೋವಿಂದ ರಾಜು** ಅವರು ಅಂತರ್ಜಾತಿ ವಿವಾಹ ಯೋಜನೆಯಡಿ ಪ್ರೋತ್ಸಾಹ ಧನ ಪಾವತಿಯಾಗದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಆರ್ಥಿಕ ವಂಚನೆಯ ಪ್ರಕರಣಗಳು ಹೆಚ್ಚುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯ ಕಂಪ್ಲಿ ಪಟ್ಟಣದ ಸರ್ಕಾರಿ ಕಾರ್ಖಾನೆ ಪ್ರದೇಶದ ಆವರಣದಲ್ಲಿ ನಿರ್ಮಿಸಲು ಯೋಜಿಸಿರುವ ಮೌಲಾನ ಆಜಾದ್ ಮಾದರಿ ಹೊಸ ಶಾಲೆಯನ್ನು ಬೇರೆಡೆ ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಶಾಲಾ ಶಿಕ್ಷಕರಿಗೆ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಅವಕಾಶ ನೀಡಿ ಬೋಧಕೇತರ ಕೆಲಸಗಳಿಗೆ ನಿಯೋಜಿಸಿರುವ ಆದೇಶವನ್ನು ಹಿಂಪಡೆಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಶಶೀಲ್ ಜಿ. ನಮೋಶಿ** ಅವರು ದೈಹಿಕ ಶಿಕ್ಷಣ ಮತ್ತು ಮೌಲ್ಯ ಶಿಕ್ಷಣ ಎಂಬ ಹೆಸರಿನಲ್ಲಿ ಪಠ್ಯ ಪುಸ್ತಕವನ್ನು ಮುದ್ರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಜಿಲ್ಲೆಯಲ್ಲಿನ ಮುಧೋಳ ಗ್ರಾಮದ ಜನರಿಗೆ (ದೋಷಪೂರಿತ) ಕಲುಷಿತ ನೀರು ಪೂರೈಕೆಯಾಗುತ್ತಿರುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಜಗದೇವ್ ಗುತ್ತೇದಾರ್** ಅವರು ರಾಜ್ಯ ಹಾಗೂ ರಾಜಧಾನಿಯಲ್ಲಿ ಟೈಫೈಡ್ ಹಾಗೂ ಅತಿಸಾರ ಸೋಂಕಿನ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿರುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ಜಿಲ್ಲೆಯ ಹಿರೇಸಿಂದೋಗಿ ಸರ್ಕಾರಿ ಪಿ.ಯು ಕಾಲೇಜಿನ ವಿದ್ಯಾರ್ಥಿನಿಯನ್ನು ಉರ್ದು ಭಾಷೆ ಪರೀಕ್ಷೆಗೆ ಹಾಜರಾಗದಂತೆ ತಡೆಯುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀಮತಿ ಬಲ್ಕೀಸ್ ಬಾನು** ಅವರು ಕೇರಳದ ಏಕೈಕ ಅಧಿಕೃತ ಭಾಷೆಯೆಂದು ಮಲಯಾಳ ಭಾಷೆಗೆ ಸ್ಥಾನಮಾನ ನೀಡಿ ಮಲಯಾಳ ಭಾಷಾ ಮಸೂದೆ ಮಂಡಿಸಿ ಅಂಗೀಕರಿಸಲಾಗಿದ್ದ ಮಲಯಾಳಂ ಭಾಷೆಯನ್ನು ಕಡ್ಡಾಯವಾಗಿ ಕಲಿಯಬೇಕಾಗಿರುವುದರಿಂದ ಗಡಿನಾಡ ಕನ್ನಡಿಗರಲ್ಲಿ ಆತಂಕ ಮೂಡಿರುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ಧಾರವಾಡ ಜಿಲ್ಲೆಯ ಹಂದಿಗನ ಹಳ್ಳಕ್ಕೆ ಸೇರುತ್ತಿರುವ ಶೌಚಾಲಯದ ನೀರನ್ನು ತಡೆಗಟ್ಟಲು ಮತ್ತು ಕಲುಷಿತ ನೀರನ್ನು ಶುದ್ದೀಕರಿಸಲು ವೈಜ್ಞಾನಿಕ ಕ್ರಮಗಳನ್ನು ಕೈಗೊಳ್ಳುವ ಕುರಿತು ದಿನಾಂಕ:10.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕೃಷಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿಮಾಡುವ ಕುರಿತು ದಿನಾಂಕ:10.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ಡಾ: ತಳವಾರ್ ಸಾಬಣ್ಣ** ಅವರುಗಳು 'ಕೋಲಿ', 'ಕಬ್ಬಲಿಗ', 'ಬೆಸ್ತ', 'ಅಂಬಿಗ' ಮತ್ತು 'ಬಾರ್ಕಿ' ಪದಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಪ್ರಸ್ತಾವನೆಯ ಸ್ಥಿತಿಗತಿಗಳ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದರು.

   ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

2. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕಿನ ಸುತ್ತಮುತ್ತಲ ಕೆರೆಗಳಿಗೆ ನೀರು ತುಂಬಿಸುವ ಕೆ.ಸಿ.ವ್ಯಾಲಿ ಯೋಜನೆಯಡಿ ಕೈಬಿಟ್ಟಿರುವ ಕೆರೆಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೂಡಲೇ ಸೇರಿಸುವ ಕುರಿತು ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆದರು.

   ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರಿಸಿದರು.

3. **ಡಾ. ಧನಂಜಯ ಸರ್ಜಿ** ಅವರು ಮಣ್ಣಿನ ಆರೋಗ್ಯ ಕಾರ್ಡ್ ಯೋಜನೆಯನ್ನು ಪರಿಣಾಮಕಾರಿಯಾಗಿ ಕಡ್ಡಾಯಗೊಳಿಸುವ ಮೂಲಕ ಮಣ್ಣಿನ ಆರೋಗ್ಯ ತಿಳಿಯದೇ ಅವೈಜ್ಞಾನಿಕವಾಗಿ ಮತ್ತು ಯಥೇಚ್ಛವಾಗಿ ರಾಸಾಯನಿಕ ರಸಗೊಬ್ಬರಗಳ ಬಳಕೆಯಿಂದ ನೀರಿನ ಮೂಲಗಳು–ನದಿಗಳು ಕಲುಷಿತಗೊಂಡು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗಳಿಗೆ ಕಾರಣವಾಗುತ್ತಿರುವುದನ್ನು ತಡೆಗಟ್ಟುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

## 5. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

3. ಶ್ರೀ ಎಂ. ನಾಗರಾಜು

ಮಧ್ಯಾಹ್ನ 2.05 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ಮಧ್ಯಾಹ್ನ 3.55 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 6. ನಿಯಮ 330ರ ಮೇರೆಗೆ

1. **ಡಾ: ತಳವಾರ್ ಸಾಬಣ್ಣ** ಅವರು ಹಿಂದುಳಿದ ವರ್ಗಗಳಲ್ಲಿ ಬರುವ ಜಾತಿಗಳ ಕುಲ ಕಸಬುಗಳು ನಶಿಸುತ್ತಿರುವುದರಿಂದ ಅವುಗಳನ್ನು ಉತ್ತೇಜಿಸಿ ಆರ್ಥಿಕ ಭದ್ರತೆ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

2. **ಶ್ರೀಯುತರುಗಳಾದ ಸೂರಜ್ ರೇವಣ್ಣ, ನಿರಾಣಿ ಹಣಮಂತ್ ರುದ್ರಪ್ಪ, ಎಸ್.ಎಲ್. ಭೋಜೇಗೌಡ, ಕೆ.ಎಸ್. ನವೀನ್ ಮತ್ತು ಪ್ರದೀಪ್ ಶೆಟ್ಟರ್** ಅವರುಗಳು ರಾಜ್ಯದ ಬಯಲುನಾಡಿನ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸುವ ವಿಚಾರ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

   ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.
   ಶ್ರೀಯುತರುಗಳಾದ:

   1. ಕೆ.ಎಸ್. ನವೀನ್

2. ಗೋವಿಂದ ರಾಜು
3. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು.

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

**3.** **ಶ್ರೀ ಕೇಶವ ಪ್ರಸಾದ್ ಎಸ್** ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಟೇಕಲ್ ಹೋಬಳಿ, ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯ ಅತಿಕ್ರಮಣ ಹಾಗೂ ದಾಖಲೆಯ ವಂಚನೆ ಕುರಿತು ಪ್ರಸ್ತಾಪಿಸಿದರು.

ಮಧ್ಯಾಹ್ನ 4.42 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

## ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

4. ಶ್ರೀ ಡಿ.ಎಸ್. ಅರುಣ್

ಸಂಜೆ 5.25 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

5. ಡಾ: ಎಂ.ಆರ್. ಸೀತಾರಾಂ

ಸಂಜೆ 6.05 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಸಂಜೆ 6.25 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:12.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ

(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಗುರುವಾರ, ದಿನಾಂಕ:12.03.2026

**(14)**

ದಿನಾಂಕ:12.03.2026 ರಂದು ಬೆಳಗ್ಗೆ 11.00 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:12.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IVರ 8ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 106(1102) | |
| 2. | 107(1079) | |
| 3. | 108(1122) | |
| 4. | 109(1048) | ಕಾಲಾವಕಾಶ |
| 5. | 110(1081) | |
| 6. | 111(1126) | |
| 7. | 112(1103) | ಕಾಲಾವಕಾಶ |
| 8. | 113(1072) | ಕಾಲಾವಕಾಶ |
| 9. | 114(1007) | |
| 10. | 115(1012) | ವರ್ಗಾವಣೆ |
| 11. | 116(1050) | ಗೈರು ಹಾಜರಿ |
| 12. | 117(1054) | |
| 13. | 118(1082) | |
| 14. | 119(1005) | |
| 15. | 120(1117) | |

ದಿನಾಂಕ:12.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 8ನೇ ಪಟ್ಟಿಯ ಒಟ್ಟು 128 ಪ್ರಶ್ನೆಗಳ ಪೈಕಿ 45 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಪ್ರಕಟಣೆ

ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಮಾನ್ಯ ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಮಾನ್ಯ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಮುಂದಿನ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡಲಾಗಿದೆ.

1. ಶ್ರೀ ಪಿ.ಹೆಚ್. ಪೂಜಾರ್
2. ಶ್ರೀ ಮಂಜುನಾಥ್ ಭಂಡಾರಿ
3. ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ
4. ಶ್ರೀ ತಿಪ್ಪಣ್ಣಪ್ಪ ಕಮಕನೂರ

## 3. ಶೂನ್ಯವೇಳೆ ಪ್ರಸ್ತಾವಗಳು

1. **ಡಾ: ಆರತಿ ಕೃಷ್ಣ** ಅವರು ಮಧ್ಯಪ್ರಾಚ್ಯದಲ್ಲಿ ಯುದ್ಧಭೀತಿ ಹೆಚ್ಚಾಗುತ್ತಿರುವುದರಿಂದ ಕೊಲ್ಲಿ ರಾಷ್ಟ್ರಗಳಲ್ಲಿ ಉದ್ಯೋಗನಿರತ ಅನಿವಾಸಿ ಕನ್ನಡಿಗರ ಹಿತಾಸಕ್ತಿ ಕಾಪಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಡಾ: ಬಿ.ಜಿ. ಪಾಟೀಲ್** ಅವರು ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನಲ್ಲಿ ಬರುವ ಸನ್ನತಿ ಬ್ರಿಡ್ಜ್ ಬ್ಯಾರೇಜ್ ನಿರ್ಮಾಣದ ಹಿನ್ನೀರಿನಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ನೀಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರಿಸಿದರು.

3. **ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)** ಅವರು ಕೊಪ್ಪಳ ಜಿಲ್ಲೆಯ ಹಮಾಲರ ಕಾಲೋನಿಯಲ್ಲಿರುವ ಪರಿಶಿಷ್ಟಜಾತಿ 3ನೇ ವಸತಿ ನಿಲಯದಲ್ಲಿ ಊಟ, ವಸತಿ ಮತ್ತು ಇನ್ನಿತರೆ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಮಾಜ ಕಲ್ಯಾಣ ಸಚಿವರು ಉತ್ತರಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಕೇಂದ್ರದ ಯೋಜನೆ ಕಾರ್ಯಗತಗೊಳಿಸಲು ಯೋಜನಾ ಸಂಯೋಜಿತ, ಪರಿಸರ ಹಾಗೂ ಸಾಮಾಜಿಕ ಸುರಕ್ಷತಾ ನೋಡಲ್ ಅಧಿಕಾರಿ ಹಾಗೂ ಯೋಜನಾ ಸಂಪರ್ಕ ಅಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ಪಾರದರ್ಶಕ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಗೋವಿಂದ ರಾಜು** ಅವರು ರಾಜ್ಯದಲ್ಲಿ ವಸತಿ ಯೋಜನೆಗಳಡಿ ಬಡವರಿಗೆ ನಿವೇಶನ ಹಾಗೂ ಮನೆ ಹಂಚಿಕೆಯಾಗದೆ ವಂಚಿತರಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ಶ್ರೀ ಶಶೀಲ್ ಜಿ. ನಮೋಶಿ** ಅವರುಗಳು ರಾಜ್ಯದ 230 ಸಮುದಾಯ ಆರೋಗ್ಯ ಕೇಂದ್ರಗಳನ್ನು ಕೆಳದರ್ಜೆಗೆ ಇಳಿಸುವ ನಿರ್ಧಾರವನ್ನು ಕೈಬಿಡಲು ಹಾಗೂ ಖಾಲಿಯಿರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ರಮೇಶ್ ಬಾಬು** ಅವರು ಕರ್ನಾಟಕದಲ್ಲಿ ರಾಜ್ಯ ಯುವ ಆಯೋಗವನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಬಸನಗೌಡ ಬಾದರ್ಲಿ** ಅವರು ಅತಿಥಿ ಶಿಕ್ಷಕರ 9 ತಿಂಗಳ ಬಾಕಿ ವೇತನ ಪಾವತಿ ಸೇರಿದಂತೆ ಗೌರವಧನ ಪರಿಷ್ಕರಣೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

9. **ಶ್ರೀ ಶರವಣ ಟಿ.ಎ** ಅವರು ತುಂಗಭದ್ರಾ ಜಲಾಶಯದ 33 ಗೇಟ್‌ಗಳನ್ನು ಅಳವಡಿಸುವ ಮೂಲಕ ದುರಸ್ಥಿ ಕಾರ್ಯವನ್ನು ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರಿಸಿದರು.

10. **ಶ್ರೀ ಕೇಶವ ಪ್ರಸಾದ್ ಎಸ್** ಅವರು ವಿಜಯಪುರ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶಾಲೆಗಳ ಮಾನ್ಯತೆ ಕುರಿತಂತೆ ಆನ್‌ಲೈನ್‌ನಲ್ಲಿ ಒಪ್ಪಿಗೆ ನೀಡುವ ಮೂಲಕ ತಂತ್ರಾಂಶ ದುರ್ಬಳಕೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

11. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ವಿದ್ಯುತ್ ಸಂಪರ್ಕ ಪಡೆಯಲು ಒಸಿ ವಿನಾಯಿತಿ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಇಂಧನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿಯಲ್ಲಿ ಐ.ಟಿ. ಮತ್ತು ಬಿ.ಟಿ. ಪಾರ್ಕ್ ಸ್ಥಾಪಿಸಲು ಒತ್ತುನೀಡುವುದರೊಂದಿಗೆ ಇನ್ನಷ್ಟು ಉದ್ಯಮಗಳು ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸುವ ಕುರಿತು ಹಾಗೂ ಉತ್ತರ ಕರ್ನಾಟಕ ಭಾಗದ ಯುವಜನತೆಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆದರು.

    ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

2. **ಶ್ರೀ ಗೋವಿಂದ ರಾಜು** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಹೂವು ಬೆಳೆಯುವ ರೈತರಿಗೆ ಆಗುತ್ತಿರುವ ನಷ್ಟ ತಪ್ಪಿಸಲು ಚಿಕ್ಕಬಳ್ಳಾಪುರದ ನಂದಿ ಕ್ರಾಸ್ ಬಳಿ 46 ಎಕರೆ ಪ್ರದೇಶದಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆ **'ಅಂತರಾಷ್ಟ್ರೀಯ ಮಟ್ಟದ ಶೈತ್ಯಾಗಾರ'** ಸ್ಥಾಪಿಸುವ ಕುರಿತು ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆದರು.

    ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಉತ್ತರಿಸಿದರು.

## 5. ನಿಯಮ 330ರ ಮೇರೆಗೆ

1. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣ ಮೇಲ್ದಂಡೆ ಯೋಜನೆಗೆ ಒಳಪಡುವ ಸಂತ್ರಸ್ಥ ರೈತ ಕುಟುಂಬಗಳಿಗೆ ಪುನರ್ ವಸತಿ ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ಸರ್ಕಾರ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರಿಸಿದರು.

ಮಧ್ಯಾಹ್ನ 1.45 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ನಿಯಮ 330ರ ಮೇರೆಗೆ

2. **ಶ್ರೀಯುತರುಗಳಾದ ರಮೇಶ್ ಬಾಬು, ಐವನ್ ಡಿ'ಸೋಜ಼ಾ, ಶಿವಕುಮಾರ್ ಕೆ., ರಾಮೋಜಿಗೌಡ, ಜಗದೇವ್ ಗುತ್ತೇದಾರ್ ಹಾಗೂ ರಾಜೇಂದ್ರ ರಾಜಣ್ಣ** ಅವರುಗಳು ಇಂಧನ ಮತ್ತು ಅಡಿಗೆ ಅನಿಲಗಳ ಮಾರಾಟದಲ್ಲಿ ಕೇಂದ್ರ ಸರ್ಕಾರದ ನಿಯಂತ್ರಣವಿಲ್ಲದ ಕಾರಣ ಯುದ್ಧದ ಹೆಸರಿನಲ್ಲಿ ಕಪ್ಪು ಮಾರುಕಟ್ಟೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಶಿವಕುಮಾರ್ ಕೆ.
2. ಶ್ರೀಮತಿ ಭಾರತಿ ಶೆಟ್ಟಿ
3. ಶ್ರೀ ಐವನ್ ಡಿ'ಸೋಜಾ
4. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು.

ಮಧ್ಯಾಹ್ನ 4.10 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.25 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

5. ಶ್ರೀ ಎಸ್.ಎಲ್. ಭೋಜೇಗೌಡ
6. ಶ್ರೀಮತಿ ಹೇಮಲತಾ ನಾಯಕ
7. ಶ್ರೀ ಎಂ. ನಾಗರಾಜು
8. ಶ್ರೀ ಸಿ.ಟಿ. ರವಿ
9. ಶ್ರೀ ಕೆ.ಎಸ್. ನವೀನ್

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

3. **ಶ್ರೀಮತಿ ಭಾರತಿ ಶೆಟ್ಟಿ** ಅವರು ರಾಜ್ಯದಲ್ಲಿ ಮಂಗಳಮುಖಿಯರು ಸಮಾಜದ ಮುಖ್ಯವಾಹಿನಿಯಲ್ಲಿ ಶೋಷಣೆಗಳಿಗೆ ಒಳಪಡುತ್ತಿರುವುದರಿಂದ ಅವರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು ಮತ್ತು ಸದರಿಯವರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಪ್ರತ್ಯೇಕ ನಿರ್ದೇಶನಾಲಯವನ್ನು ಹಾಗೂ ಗೃಹ ಇಲಾಖೆಯಲ್ಲಿ ಪ್ರತ್ಯೇಕ ಸೆಲ್‌ನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಸಕರಾದ ಶ್ರೀ ಶಿವಕುಮಾರ್ ಕೆ. ರವರು ಚರ್ಚೆಯಲ್ಲಿ ಭಾಗವಹಿಸಿದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

## ಪ್ರಕಟಣೆ

ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.

ದಿನಾಂಕ:12.03.2026ರಂದು ನಡೆದ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ.

1. ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:06.03.2026ರಂದು ಮಂಡಿಸಿದ 2026–27ನೇ ಸಾಲಿನ ರಾಜ್ಯದ ಆಯವ್ಯಯ ಅಂದಾಜುಗಳ ಮೇಲಿನ ಚರ್ಚೆಗೆ ದಿನಾಂಕ:26.03.2026ರಂದು ಅಪರಾಹ್ನ ಸರ್ಕಾರದಿಂದ ಉತ್ತರ;
2. ವಿಧಾನಸಭೆಯಿಂದ ಅಂಗೀಕೃತಗೊಂಡ ವಿಧೇಯಕಗಳು, ಹಣಕಾಸು/ಧನವಿನಿಯೋಗ ವಿಧೇಯಕಗಳ ಮಂಡನೆ, ಪರ್ಯಾಲೋಚನೆ ಮತ್ತು ಅಂಗೀಕಾರ;
3. ಪ್ರಶ್ನೋತ್ತರ, ಗಮನ ಸೆಳೆಯುವ ಸೂಚನೆಗಳು ಹಾಗೂ ನಿಯಮ 330ರ ಮೇರೆಗೆ ಚರ್ಚೆ, ಶೂನ್ಯವೇಳೆ, ನಿಯಮ 68ರ ಮೇಲಿನ ಪ್ರಸ್ತಾವನೆಗಳನ್ನು ತೆಗೆದುಕೊಳ್ಳುವುದು;

## 6. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

6. ಡಾ: ತಳವಾರ್ ಸಾಬಣ್ಣ

ಸಂಜೆ 5.32 ಗಂಟೆಯಲ್ಲಿ **ಶ್ರೀ ಪಿ.ಹೆಚ್. ಪೂಜಾರ್** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಸಂಜೆ 5.50 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಸಂಜೆ 6.00 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:13.03.2026ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಶುಕ್ರವಾರ, ದಿನಾಂಕ:13.03.2026
**(15)**

ದಿನಾಂಕ:13.03.2026 ರಂದು ಬೆಳಗ್ಗೆ 10.15 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:13.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–Vರ 9ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 121(1208) | ಕಾಲಾವಕಾಶ |
| 2. | 122(1300) | ಡಾ: ಯತೀಂದ್ರ ಎಸ್. ಪರವಾಗಿ ಶ್ರೀ ಐವನ್ ಡಿ'ಸೋಜಾ |
| 3. | 123(1290) | |
| 4. | 124(1302) | ಶ್ರೀ ಪಿ.ಹೆಚ್. ಪೂಜಾರ್ ಪರವಾಗಿ ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು |
| 5. | 125(1145) | |
| 6. | 127(1137) | |
| 7. | 128(1289) | |
| 8. | 129(1210) | ಕಾಲಾವಕಾಶ |
| 9. | 130(1238) | |
| 10. | 131(1286) | |
| 11. | 132(1201) | |
| 12. | 133(1252) | |
| 13. | 134(1194) | ಶ್ರೀ ಬಸನಗೌಡ ಬಾದರ್ಲಿ ಪರವಾಗಿ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) |
| 14. | 135(1220) | |

**ದಿನಾಂಕ:11.03.2026ರ ಸಮೂಹ–IIIರ 7ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 105(980)

ಪ್ರ.ಸಂ. 126(1253)ನ್ನು ಮಾನ್ಯ ಶಾಸಕರು ಪ್ರಶ್ನೆಯನ್ನು ಹಿಂಪಡೆದಿರುತ್ತಾರೆ

ದಿನಾಂಕ:13.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Vರ 9ನೇ ಪಟ್ಟಿಯ ಒಟ್ಟು 151 ಪ್ರಶ್ನೆಗಳ ಪೈಕಿ 64 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೊಮ್ಮಸಂದ್ರ ಪುರಸಭೆ ವ್ಯಾಪ್ತಿಯಲ್ಲಿ ಕೆಐಎಡಿಬಿ ಸಂಸ್ಥೆಗಳಿಗೆ ಮೂಲಭೂತ ಸೌಲಭ್ಯಗಳಿಗೆ ಶೇ.30ರಷ್ಟು ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಜಮಖಂಡಿ ಅಥಣಿ ಮಾರ್ಗ ಮಧ್ಯದಲ್ಲಿ ಬರುವ ಹಿಪ್ಪರಗಿ ಬ್ರಿಡ್ಜ್ ಕಾಮಗಾರಿಯನ್ನು ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀಮತಿ ಬಲ್ಕೀಸ್ ಬಾನು** ಅವರು ಶಿವಮೊಗ್ಗ ಜಿಲ್ಲೆ ಭದ್ರಾವತಿ ತಾಲ್ಲೂಕಿನ ರೈತ ಸಂಪರ್ಕ ಕೇಂದ್ರಗಳಲ್ಲಿನ ಅಕೌಂಟೆಂಟ್ ಹುದ್ದೆಗೆ ನೇಮಕಾತಿ ಹೊಂದಿದ ಅಭ್ಯರ್ಥಿಗಳು ಫಲಾನುಭವಿಗಳಿಗೆ ಸೌಲಭ್ಯ ಒದಗಿಸದೆ ನಕಲಿ ದಾಖಲೆ ಸೃಷ್ಟಿಸಿ ಹಣ ದುರ್ಬಳಕೆ ಮಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

4. **ಶ್ರೀ ಮಂಜುನಾಥ್ ಭಂಡಾರಿ** ಅವರು ಮಂಗಳೂರು ಹಾಗೂ ಬಂಟ್ವಾಳದ ಜನತೆಗೆ ಕುಡಿಯುವ ನೀರು ಪೂರೈಸುತ್ತಿರುವ ನೇತ್ರಾವತಿ ನದಿಗೆ ಕೊಳಚೆ ನೀರು ಸೇರುತ್ತಿರುವುದನ್ನು ತಡೆಯುವುದು ಹಾಗೂ ಕೊಳಚೆ ನೀರು ಸಂಸ್ಕರಣಾ ಘಟಕಗಳನ್ನು ನಿರ್ಮಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀಮತಿ ಭಾರತಿ ಶೆಟ್ಟಿ** ಅವರು ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಅಕ್ಕಿರಾಂಪುರ ಗ್ರಾಮದಲ್ಲಿರುವ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾರ್ಥಿನಿಲಯವು ಪಾಳು ಬಿದ್ದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಐವನ್ ಡಿ'ಸೋಜಾ ಹಾಗೂ ಶ್ರೀ ಎಂ. ನಾಗರಾಜು** ಅವರುಗಳು ರಾಜ್ಯದಲ್ಲಿ ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್ ಪೂರೈಕೆ ಅಭಾವದಿಂದ ಉಂಟಾಗಿರುವ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಉತ್ತರಿಸಿದರು.

7. **ಶ್ರೀ ರಮೇಶ್ ಬಾಬು** ಅವರು ಕನ್ನಡ ಭಾಷೆ, ನೆಲ, ಜಲ ಸಂರಕ್ಷಣೆಗೆ ಹೋರಾಡುತ್ತಿರುವ ಮಹನೀಯರುಗಳಿಗೆ ಹಾಗೂ ಸಂಘ ಸಂಸ್ಥೆಗಳಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವುದರ ಜೊತೆಗೆ ನಿವೇಶನ ಮತ್ತು ಜಮೀನುಗಳನ್ನು ನೀಡಿ ಗೌರವ ಸಲ್ಲಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

8. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ತ್ಯಾಜ್ಯ ಎಸೆಯುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಸಿ.ಟಿ. ರವಿ** ಅವರು ರಾಜ್ಯದ ಹಲವಾರು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಲ್ಬಣಗೊಂಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ಅಂಗನವಾಡಿ ಮಕ್ಕಳಿಗೆ ಅವಧಿ ಮೀರಿದ ಆಹಾರ ಪದಾರ್ಥ ವಿತರಿಸಿರುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕಿನ ಖರೀದಿ ಕೇಂದ್ರಗಳಲ್ಲಿ ಜೋಳ ಬೆಳೆ ನೋಂದಣಿ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿರುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಸ್ಥಗಿತಗೊಳಿಸಲು ಹೊರಡಿಸಿರುವ ಆದೇಶ ಹಿಂಪಡೆದು, ಸಖಿ ಯೋಜನೆಯೊಂದಿಗೆ ವಿಲೀನಗೊಳಿಸದೆ ಪ್ರತ್ಯೇಕವಾಗಿ ಮುಂದುವರೆಸುವ ಕುರಿತು ದಿನಾಂಕ:09.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನಲ್ಲಿ ಕುಡಿಯುವ ನೀರು ಪೂರೈಕೆಗೆ ಪೂರಕ ಕ್ರಮಗಳನ್ನು ಕೈಗೊಳ್ಳುವ ಕುರಿತು ದಿನಾಂಕ:10.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ಅತ್ಯಗತ್ಯ ಔಷಧಗಳ ಕೊರತೆ ಹಾಗೂ ಖಾಲಿಯಿರುವ ವೈದ್ಯಕೀಯ ಹುದ್ದೆಗಳ ಭರ್ತಿ ಸಂಬಂಧ (ಒಪಿಡಿ ಸೇವೆ ಬಂದ್ ಮಾಡಲಿರುವುದರಿಂದ) ತುರ್ತು ಕ್ರಮಕೈಗೊಳ್ಳುವ ಕುರಿತು ದಿನಾಂಕ:10.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಮಂಜುನಾಥ್ ಭಂಡಾರಿ** ಅವರು ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೋಂದಣಿ ಕಚೇರಿಯಲ್ಲಿ ಇ–ಖಾತಾ ಸರ್ವರ್‌ನ್ನು ಮೇಲ್ದರ್ಜೆಗೇರಿಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ಎಲ್ಲಾ ವಿಭಾಗಗಳಲ್ಲೂ ಸಿಸಿಟಿವಿ ಅಳವಡಿಸುವ ಕುರಿತು ದಿನಾಂಕ:11.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಐವನ್ ಡಿ'ಸೋಜಾ** ಅವರು ಜಲಸಿರಿ ಯೋಜನೆ 2023, ಪೂರ್ಣಗೊಳಿಸಿ ಮಂಗಳೂರು ನಗರದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕುರಿತು ದಿನಾಂಕ:11.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 4. ಕಾರ್ಯದರ್ಶಿಯವರ ವರದಿ

ದಿನಾಂಕ:23.01.2026ರ ಉಪವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕದ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| ಕ್ರ ಸ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 1 | **ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂಖ್ಯೆ.33)**<br>**THE KARNATAKA TANK CONSERVATION AND DEVELOPMENT AUTHORITY (AMENDMENT) ACT, 2025 (Bill No.33)** | 16.02.2026 | ರಾಜ್ಯಪಾಲರು |

## 5. ವರದಿಯನ್ನೊಪ್ಪಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ (ಸದಸ್ಯರು,** ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿ) ಅವರು 2025–26ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸಿದರು.

## 6. ಖಾಸಗಿ ಸದಸ್ಯರ ಕಾರ್ಯಕಲಾಪ

**ಶ್ರೀ ರಮೇಶ್ ಬಾಬು** ಅವರು **"**ಕರ್ನಾಟಕ ಚಿನ್ನ ಅಡಮಾನವಿಟ್ಟ ಸಾಲಗಾರರ ರಕ್ಷಣಾ ವಿಧೇಯಕ, 2025**"**ನ್ನು ಮಂಡಿಸಲು ಅನುಮತಿ ಕೋರಿ ಪ್ರಸಾವ ಮಂಡಿಸಿದರು.

ಪ್ರಸಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಾನ್ಯ ಶಾಸಕರು ವಿಧೇಯಕದ ಮೇಲೆ ವಿವರಣೆ ನೀಡಿದರು.

ಮಧ್ಯಾಹ್ನ 12.40 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

## 7. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

7. ಶ್ರೀ ಕೇಶವ ಪ್ರಸಾದ್ ಎಸ್
8. ಶ್ರೀ ರಮೇಶ್ ಬಾಬು

ಮಧ್ಯಾಹ್ನ 1.40 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:16.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಮಂಜುನಾಥ್ ಭಂಡಾರಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಸೋಮವಾರ, ದಿನಾಂಕ:16.03.2026

**(16)**

ದಿನಾಂಕ:16.03.2026 ರಂದು ಬೆಳಗ್ಗೆ 11.05 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **1. ಪ್ರಶ್ನೋತ್ತರ**

ದಿನಾಂಕ:16.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 10ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 136(1379) | |
| 2. | 137(1418) | |
| 3. | 138(1442) | ಶ್ರೀ ಮಂಜುನಾಥ್ ಭಂಡಾರಿ ಪರವಾಗಿ ಶ್ರೀ ಐವನ್ ಡಿ'ಸೋಜಾ |
| 4. | 139(1404) | |
| 5. | 140(1343) | |
| 6. | 141(1447) | |
| 7. | 142(1433) | |
| 8. | 143(1339) | ಸಭೆ ಸೇರಿ ಪ್ರತ್ಯೇಕವಾಗಿ ಚರ್ಚಿಸಲು ತೀರ್ಮಾನಿಸಲಾಯಿತು |
| 9. | 144(1304) | |
| 10. | 145(1422) | |
| 11. | 146(1367) | |

ಮಧ್ಯಾಹ್ನ 12.05 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

12. 147(1316)
13. 148(1321) ಕಾಲಾವಕಾಶ
14. 149(1334)
15. 150(1358)

ದಿನಾಂಕ:16.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 10ನೇ ಪಟ್ಟಿಯ ಒಟ್ಟು 140 ಪ್ರಶ್ನೆಗಳ ಪೈಕಿ 40 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ಭಾಗದ ಕಂಪನಿಗಳಲ್ಲಿ ಸಲ್ಫ್ಯೂರಿಕ್ ಆಸಿಡ್ (Sulphuric Acid) ಬಳಸಿ Single Super Phosphate (SSP) ಗೊಬ್ಬರ ತಯಾರಿಕೆ ವೇಳೆ ಹೊರಬರುವ ರಾಸಾಯನಿಕದಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ಪ್ಯಾರಾಮೆಡಿಕಲ್ ಕೋರ್ಸ್ ಸೇರಬಯಸುವ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ತೇರ್ಗಡೆಯಾಗಿರಬೇಕೆಂದು ಕೇಂದ್ರ ಸರ್ಕಾರವು ನಿಯಮ ಜಾರಿಗೆ ತಂದಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಉತ್ತರಿಸಿದರು.

3. **ಶ್ರೀ ಸಿ.ಟಿ. ರವಿ** ಅವರು ರೈತರಿಗೆ ಕಬ್ಬು ಬೆಳೆಯ ಬಾಕಿ ಬಿಲ್ ಪಾವತಿ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿಯ ನಿಲಜಿ–ಸಾಂಬ್ರಾ ರಸ್ತೆ ಅಗಲೀಕರಣ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಲೋಕೋಪಯೋಗಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದಿರುವ, ನಿರ್ಮಾಣ ಹಂತದಲ್ಲಿರುವ ಹಾಗೂ ಪೂರ್ಣಗೊಂಡಿರುವ ಕಟ್ಟಡಗಳಿಗೆ ಓಸಿ ನೀಡುವ ಹಾಗೂ ವಿದ್ಯುತ್ ಸಂಪರ್ಕ ನೀಡಲು ಒನ್‌ಟೈಮ್ ವಿನಾಯಿತಿ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಇಂಧನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಶಶೀಲ್ ಜಿ. ನಮೋಶಿ** ಅವರು 2022ರಲ್ಲಿ ನಡೆದಿರುವ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಕೆಲವು ವಿವಾಹಿತ ಮಹಿಳಾ ಅಭ್ಯರ್ಥಿಗಳಿಗೆ ಮೀಸಲಾತಿಯಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಿ KAT ನೀಡಿರುವ ಆದೇಶದಂತೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರದ ಟಿಎಂಎಸ್ ಆಡಳಿತಾಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಬಿಪಿಎಲ್ ಪಡಿತರ ಚೀಟಿ ವಿತರಿಸಲು ಮಾನದಂಡಗಳನ್ನು ಪರಾಮರ್ಶಿಸಿ ಆದಾಯ ಮಿತಿಯನ್ನು ಏರಿಸಿ ಬಿಪಿಎಲ್ ಕಾರ್ಡ್‌ಗಾಗಿ ಬಾಕಿಯಿರುವ ಅರ್ಜಿಗಳನ್ನು ವಿಲೇವಾರಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ನೆಟ್ ಸೆಟ್ ಇಲ್ಲದಿರುವುದರಿಂದ ಅತಿಥಿ ಉಪನ್ಯಾಸಕರುಗಳಿಗೆ ತೊಂದರೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

10. **ಶ್ರೀ ಡಿ.ಎಸ್. ಅರುಣ್** ಅವರು ಕುವೆಂಪು ವಿಶ್ವವಿದ್ಯಾಲಯದ ಹಾಲಿ ಕುಲಸಚಿವರ ವಿರುದ್ಧ ಭ್ರಷ್ಟಾಚಾರ ಹಾಗೂ ಕರ್ತವ್ಯ ಲೋಪದಂತಹ ಆರೋಪಗಳಿದ್ದಲ್ಲಿ ಮುನ್ನಚ್ಚರಿಕೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

## 3. ಅಭಿನಂದನೆ

ಟಿ–20 ಭಾರತ ತಂಡ ವಿಜೇತರಾಗಿರುವುದಕ್ಕೆ ಮಾನ್ಯ ಶಾಸಕರಾದ ಶ್ರೀ ಡಿ.ಎಸ್. ಅರುಣ್ ಅವರು ಅಭಿನಂದನಾ ಪ್ರಸ್ತಾವ ಮಂಡಿಸಿದರು.

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

## 4. ನಿಯಮ 330ರ ಮೇರೆಗೆ

1. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಹುಲಿಕೆರೆಯ ಮೂಲ ಪ್ರದೇಶ ಹಾಗೂ ಸುತ್ತುಮುತ್ತಲಿನ ಬಫರ್ ಜೋನ್ ಪ್ರದೇಶದ ಅತಿಕ್ರಮಣ ತಡೆಗಟ್ಟಲು ಮರುಅಳತೆ ಮಾಡಿಸಿ ನಿಖರ ಗಡಿ ಗುರುತಿಸುವುದು ಮತ್ತು ಅತಿಕ್ರಮಣ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಉತ್ತರಿಸಿದರು.

    ಮಧ್ಯಾಹ್ನ 1.10 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

2. **ಡಾ: ತಳವಾರ್ ಸಾಬಣ್ಣ** ಅವರು ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಮೂಲಭೂತ ಸೌಕರ್ಯಗಳು ಹಾಗೂ ಪ್ರಾಧ್ಯಾಪಕರುಗಳ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶದ ಬಡಯುವಕ/ಯುವತಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

3. **ಶ್ರೀ ಶಿವಕುಮಾರ್ ಕೆ.** ಅವರು ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಾಪುರ ಮತ್ತು ಸುತ್ತಮುತ್ತ ಗ್ರಾಮಗಳಲ್ಲಿ ಅಂತರ್ಜಲ ಕುಸಿತ ಹಾಗೂ ನೀರಿನಲ್ಲಿ ಫ್ಲೋರೈಡ್ (Flouride) ಅಂಶವು ಮಿತಿಮೀರಿರುವುದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಉಂಟಾಗುತ್ತಿರುವ ಗಂಭೀರ ಪರಿಣಾಮಗಳ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

## 5. ಗಮನ ಸೆಳೆಯುವ ಸೂಚನೆ

1. **ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಪುಟ್ಟಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)** ಅವರುಗಳು ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ 2006ರ ಪೂರ್ವದಲ್ಲಿ ನೇಮಕಗೊಂಡು ನಂತರ ಅನುದಾನಕ್ಕೆ ಒಳಪಟ್ಟಿರುವ ಹಾಗೂ 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

ಮಧ್ಯಾಹ್ನ 3.15 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 4.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 6. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

9. ಶ್ರೀ ಸಿ.ಟಿ. ರವಿ

ಮಧ್ಯಾಹ್ನ 4.45 ಗಂಟೆಯಲ್ಲಿ ಶ್ರೀ **ತಿಪ್ಪಣ್ಣಪ್ಪ ಕಮಕನೂರ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಸಂಜೆ 5.15 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಶ್ರೀ ರಮೇಶ್ ಬಾಬು

## 7. ಪ್ರಕಟಣೆಗಳು

1. **ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:16.03.2026ರಂದು **"ಕರ್ನಾಟಕ ಮುನ್ಸಿಪಾಲಿಟಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ", 2026** ಹಾಗೂ **"ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ", 2026**ಅನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

2. **ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.**

ನಾಡುಮೆಚ್ಚಿದ ಜನನಾಯಕ, ಹಿರಿಯ ರಾಜಕಾರಣಿ, ಸಹಕಾರಿ ರಂಗದ ಭೀಷ್ಮ ಎಂದು ಖ್ಯಾತರಾದ ಕೆ.ಎಚ್. ಪಾಟೀಲರವರು ಸಹಕಾರಿ ಕ್ಷೇತ್ರದಲ್ಲಿ ಮಾಡಿದ ಸಾಧನೆ ಅಸಾಮಾನ್ಯವಾದದ್ದು, ಸಹಕಾರಿ ಕ್ಷೇತ್ರವಲ್ಲದೇ ರಾಜಕೀಯದಲ್ಲಿಯೂ ವಿವಿಧ ಇಲಾಖೆಗಳ ಸಚಿವರಾಗಿ **"ಜನರ ಸೇವೆಯೇ ಜನಾರ್ಧನ ಸೇವೆ"** ಎಂದು ನಂಬಿದವರು, ಉತ್ತರ ಕರ್ನಾಟಕ ಭಾಗದ ಜನಪ್ರಿಯ ನಾಯಕರಾಗಿ ಗುರುತಿಸಿಕೊಂಡ ನಾಯಕ, ಇವರು ತಮ್ಮ ಜೀವಿತಾವಧಿಯಲ್ಲಿ ಜನ ಸೇವೆಯನ್ನೇ ತಮ್ಮ ಉಸಿರಾಗಿಸಿಕೊಂಡು ಬದುಕುಕಂಡವರು.

ದಿನಾಂಕ:16.03.2026ರಂದು ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಂಜೆ 6.00 ಗಂಟೆಗೆ ಕೆ.ಎಚ್. ಪಾಟೀಲರವರ 101ನೇ ಜನ್ಮ ಶತಮಾನೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿದ್ದು, ಮಾನ್ಯ ಶಾಸಕರುಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕಾಗಿ ಕೋರಲಾಗಿದೆ.

## ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

10. ಡಾ: ಡಿ. ತಿಮ್ಮಯ್ಯ
11. ಶ್ರೀ ಎ. ವಸಂತ ಕುಮಾರ್

ಸಂಜೆ 6.23 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:17.03.2026ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಮಂಗಳವಾರ, ದಿನಾಂಕ:17.03.2026

**(17)**

ದಿನಾಂಕ:17.03.2026 ರಂದು ಬೆಳಗ್ಗೆ 10.35 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:17.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 11ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 151(1539) | |
| 2. | 152(1456) | |
| 3. | 153(1540) | ಗೈರು ಹಾಜರಿ |
| 4. | 154(1487) | |
| 5. | 155(1506) | |
| 6. | 156(1553) | |
| 7. | 157(1549) | |
| 8. | 158(1481) | |
| 9. | 159(1490) | |
| 10. | 160(1495) | ತಡೆಹಿಡಿಯಲಾಯಿತು |
| 11. | 161(1542) | ಕಾಲಾವಕಾಶ |
| 12. | 162(1513) | |
| 13. | 163(1508) | |
| 14. | 164(1485) | |
| 15. | 165(1482) | |

ದಿನಾಂಕ:17.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 11ನೇ ಪಟ್ಟಿಯ ಒಟ್ಟು 101 ಪ್ರಶ್ನೆಗಳ ಪೈಕಿ 30 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರ ಪರವಾಗಿ ಮಾನ್ಯ ಗೃಹ ಸಚಿವರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಪುಟ್ಟಣ್ಣ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಪಿಯು ಕಾಲೇಜಿನ ಆಡಳಿತಾತ್ಮಕ ನಿಯಂತ್ರಣವನ್ನು ಜಿಲ್ಲಾ ಪಂಚಾಯಿತಿಗೆ ವಹಿಸಿರುವುದನ್ನು ವಿರೋಧ ವ್ಯಕ್ತಪಡಿಸುತ್ತಿರುವುದು ಹಾಗೂ ಮೌಲ್ಯಮಾಪನ ಭತ್ಯೆಯನ್ನು ಪರಿಷ್ಕರಣೆ ಮಾಡದಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

2. **ಶ್ರೀ ಕೆ. ಅಬ್ದುಲ್ ಜಬ್ಬರ್** ಅವರು ಸಾರಿಗೆ ಪ್ರಾಧಿಕಾರವು ಶಾಲಾ ಮಕ್ಕಳನ್ನು ಸಾಗಿಸಲು ಬಳಸುವ ಖಾಸಗಿ ವೈಟ್‌ಬೋರ್ಡ್ ವಾಹನಗಳನ್ನು ವಶಪಡಿಸಿಕೊಳ್ಳುತ್ತಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರವನ್ನು ಒದಗಿಸುವುದಾಗಿ ತಿಳಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕೇಂದ್ರ ಸರ್ಕಾರದ 'ಗ್ರಾಮಗಳಿಗೆ ಬ್ರಾಡ್‌ಬ್ಯಾಂಡ್ ಸಂಪರ್ಕ' ಯೋಜನೆಯನ್ನು ಹಳ್ಳಿಗಳಿಗೆ ವಿಸ್ತರಿಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

4. **ಶ್ರೀ ಟಿ.ಎನ್. ಜವರಾಯಿ ಗೌಡ, ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಹಾಗೂ ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರುಗಳು ಕೇಂದ್ರ ಸರ್ಕಾರದ "ವಯೋ ವಂದನಾದಡಿ ವೃದ್ಧರಿಗಿಲ್ಲ ಚಿಕಿತ್ಸೆ' ಎಂಬ ಯೋಜನೆ 'ಆಯುಷ್ಮಾನ್ ವಯೋ ವಂದನಾ' ಯೋಜನೆ ಜಾರಿಗೆ ಬಂದು ಕಾರ್ಡ್ ವಿತರಣೆಯಾಗಿದ್ದರೂ ಅನುಷ್ಠಾನಗೊಳಿಸಲು ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

5. **ಶ್ರೀ ಐವನ್ ಡಿ'ಸೋಜಾ** ಅವರು ವಾಹನದಲ್ಲಿರುವ ಪ್ಯಾನಿಕ್ ಬಟನ್ ರಿಚಾರ್ಜ್ ಮೊತ್ತವನ್ನು ಏರಿಸಿರುವುದರಿಂದ ಹಾಗೂ ರಿಚಾರ್ಜ್ ಮಾಡದಿದ್ದಲ್ಲಿ ಎಫ್.ಸಿ. ನವೀಕರಣ ಮಾಡಲು ನಿರಾಕರಿಸುತ್ತಿರುವುದರಿಂದ ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರು ಸಂಕಷ್ಟದಲ್ಲಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರವನ್ನು ಒದಗಿಸುವುದಾಗಿ ತಿಳಿಸಿದರು.

6. **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಾಮಾಜಿಕ ಜಾಲತಾಣದ ಬಳಕೆಯಿಂದಾಗಿ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ಉತ್ತರವನ್ನು ಒದಗಿಸುವುದಾಗಿ ತಿಳಿಸಿದರು.

7. **ಶ್ರೀ ರಮೇಶ್ ಬಾಬು** ಅವರು ವಿಧಾನ ಮಂಡಲದಲ್ಲಿ ಲೆಕ್ಕಪರಿಶೋಧನಾ ವರದಿ ಮತ್ತು ವಾರ್ಷಿಕ ವರದಿಯನ್ನು ಮಂಡಿಸದಿರುವ ಸಂಸ್ಥೆಗಳ ಮೇಲೆ ಮತ್ತು ಸಂಸ್ಥೆಯ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

8. **ಡಾ: ಧನಂಜಯ ಸರ್ಜಿ** ಅವರು ರಾಜ್ಯದ ಜಾತಿಜನಗಣತಿಗಾಗಿ **"**ಆರ್ಥಿಕ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ**"** ಕಾರ್ಯನಿರ್ವಹಿಸಿದ ವಿವಿಧ ವರ್ಗದ ನೌಕರರಿಗೆ ಇದುವರೆವಿಗೂ ಸಂಭಾವನೆ ಪಾವತಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

9. **ಡಾ: ಉಮಾಶ್ರೀ** ಅವರು ವಾಹನ ಮಾಲೀಕತ್ವ ವರ್ಗಾವಣೆಗೆ ಅರ್ಜಿ ಸಲ್ಲಿಸಿ ತಿಂಗಳುಗಳೇ ಕಳೆದರೂ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ ಕ್ಲಿಯರೆನ್ಸ್ ಸರ್ಟಿಫಿಕೆಟ್ ದೊರೆಯದೆ ಮಾಲೀಕರು ಪರದಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

## 3. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ರಮೇಶ್ ಬಾಬು** ಅವರು ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಅವರ ಅವಲಂಬಿತರಿಗೆ ನೀಡುತ್ತಿರುವ ಮಾಸಾಶನ ಹೆಚ್ಚಿಸುವ ಕುರಿತು ದಿನಾಂಕ:11.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

2. **ಶ್ರೀ ಕೇಶವ ಪ್ರಸಾದ್ ಎಸ್** ಅವರು ವಿಜಯಪುರ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶಾಲೆಗಳ ಮಾನ್ಯತೆ ಕುರಿತಂತೆ ಆನ್‌ಲೈನ್‌ನಲ್ಲಿ ಒಪ್ಪಿಗೆ ನೀಡುವ ಮೂಲಕ ತಂತ್ರಾಂಶ ದುರ್ಬಳಕೆಯಾಗಿರುವ ಕುರಿತು ದಿನಾಂಕ:12.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ ಹಾಗೂ ಶ್ರೀ ಶಶೀಲ್ ಜಿ. ನಮೋಶಿ** ಅವರುಗಳು ರಾಜ್ಯದ 230 ಸಮುದಾಯ ಆರೋಗ್ಯ ಕೇಂದ್ರಗಳನ್ನು ಕೆಳದರ್ಜೆಗೆ ಇಳಿಸುವ ನಿರ್ಧಾರವನ್ನು ಕೈಬಿಡಲು ಹಾಗೂ ಖಾಲಿಯಿರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ದಿನಾಂಕ:12.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಐವನ್ ಡಿ'ಸೋಜಾ ಹಾಗೂ ಶ್ರೀ ಎಂ. ನಾಗರಾಜು** ಅವರುಗಳು ರಾಜ್ಯದಲ್ಲಿ ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್ ಪೂರೈಕೆ ಅಭಾವದಿಂದ ಉಂಟಾಗಿರುವ ಸಮಸ್ಯೆಗಳ ಕುರಿತು ದಿನಾಂಕ:13.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಬಿಡಿಎಲ್ ಪಡಿತರ ಚೀಟಿ ವಿತರಿಸಲು ಮಾನದಂಡಗಳನ್ನು ಪರಾಮರ್ಶಿಸಿ ಆದಾಯ ಮಿತಿಯನ್ನು ಏರಿಸಿ ಬಿಪಿಎಲ್ ಕಾರ್ಡ್‌ಗಾಗಿ ಬಾಕಿಯಿರುವ ಅರ್ಜಿಗಳನ್ನು ವಿಲೇವಾರಿ ಮಾಡುವ ಕುರಿತು ದಿನಾಂಕ:16.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

6. **ಶ್ರೀ ಡಿ.ಎಸ್. ಅರುಣ್** ಅವರು ಕುವೆಂಪು ವಿಶ್ವವಿದ್ಯಾಲಯದ ಹಾಲಿ ಕುಲಸಚಿವರ ವಿರುದ್ಧ ಭ್ರಷ್ಟಾಚಾರ ಹಾಗೂ ಕರ್ತವ್ಯ ಲೋಪದಂತಹ ಆರೋಪಗಳಿದ್ದಲ್ಲಿ ಮುನ್ನೆಚ್ಚರಿಕೆ ಕ್ರಮಕೈಗೊಳ್ಳುವ ಕುರಿತು ದಿನಾಂಕ:16.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಗೃಹ ಸಚಿವರು ಉತ್ತರ ಮಂಡಿಸಿದರು.

## 4. ಗಮನ ಸೆಳೆಯುವ ಸೂಚನೆಗಳು

1. **ಶ್ರೀಮತಿ ಬಲ್ಕೀಸ್ ಬಾನು** ಅವರು ರಾಜ್ಯಾದ್ಯಂತ ಹಲವಾರು ವರ್ಷಗಳಿಂದ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗ್ರೂಪ್ ಸಿ ಮತ್ತು ಡಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂಗೊಳಿಸದೆ ಹೊರಗುತ್ತಿಗೆ ಮೂಲಕ ಭರ್ತಿ ಮಾಡುತ್ತಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

2. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ರಾಜ್ಯಾದ್ಯಂತ ಸಂಚಾರಿ ಆರೋಗ್ಯ ಘಟಕಗಳನ್ನು (MHU) ಜಾರಿಗೆತರಲು ಬಿಡುಗಡೆಯಾದ ಅನುದಾನವು ಸದ್ಬಳಕೆಯಾಗದೆ ದುರುಪಯೋಗವಾಗುತ್ತಿರುವುದರಿಂದ ಬಡರೋಗಿಗಳು ತುರ್ತು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳನ್ನು ಅವಲಂಬಿಸುತ್ತಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

ಮಧ್ಯಾಹ್ನ 1.20 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

3. **ಡಾ: ಯತೀಂದ್ರ** ಅವರು ಗ್ರಾಮಠಾಣಾ ವ್ಯಾಪ್ತಿಯಲ್ಲಿ ಸ್ಥಳಾವಕಾಶದ ಕೊರತೆಯಿಂದಾಗಿ ವಸತಿ ಯೋಜನೆಯಡಿ ತಮ್ಮ ಕೃಷಿ ಭೂಮಿಯಲ್ಲಿ ಕಟ್ಟಡ ನಿರ್ಮಿಸಿಕೊಂಡ ಫಲಾನುಭವಿಗಳಿಗೆ ಪ್ರತ್ಯೇಕ ವರ್ಗೀಕರಣ ಮಾಡಿ, ಇ–ಸ್ವತ್ತು ಸೃಜಿಸಲು ಅವಕಾಶ ಕಲ್ಪಿಸಿಕೊಡುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

## 5. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಡಿ.ಎಸ್. ಅರುಣ್, ಶ್ರೀ ಕೆ.ಎಸ್. ನವೀನ್ ಹಾಗೂ ಶ್ರೀ ಕೇಶವ ಪ್ರಸಾದ್‌ಎಸ್** ಅವರುಗಳು ಕಬ್ಬಿಗೆ ಬೆಲೆ ನಿಗದಿಪಡಿಸಿ ಎಮ್.ಎಸ್.ಪಿ. ದರವನ್ನು ಹೆಚ್ಚಿಸುವುದು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಉತ್ಪಾದಿಸುವ ಇಥೆನಾಲ್ ದ್ರವ ಆಯಿಲ್‌ನ್ನು ಕೇಂದ್ರ ಸರ್ಕಾರ ಸಂಪೂರ್ಣವಾಗಿ ಖರೀದಿಸುವುದನ್ನು ಹೊರತುಪಡಿಸುವುದರ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಉತ್ತರಿಸಿದರು.

2. **ಡಾ: ಎಂ.ಜಿ. ಮುಳೆ** ಅವರು ಬೀದರ್ ಜಿಲ್ಲೆಯ ಕಾರಂಜಾ ಜಲಾಶಯ ಯೋಜನೆಯ ಸಂತ್ರಸ್ತರಿಗೆ ಬಾಕಿಯಿರುವ ವೈಜ್ಞಾನಿಕ ಪರಿಹಾರ ಮತ್ತು ವಿಶೇಷ ಪ್ಯಾಕೇಜ್ ಘೋಷಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

## 6. ಅರ್ಧ ಗಂಟೆ ಕಾಲಾವಧಿ ಚರ್ಚೆ

1. **ಮಾನ್ಯ ಶಾಸಕರುಗಳಾದ ಡಾ: ಧನಂಜಯ ಸರ್ಜಿ ಹಾಗೂ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರುಗಳು ರಾಜ್ಯದ ಔಷಧ ಉಗ್ರಾಣಗಳಲ್ಲಿ ಔಷಧಗಳ ಕೊರತೆಯಿಂದ ಆಗುತ್ತಿರುವ ತೊಂದರೆಗಳ ಕುರಿತು ದಿನಾಂಕ:09.03.2026ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:74(578+629)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು ಅರ್ಧ ಗಂಟೆ ಕಾಲಾವಧಿ ಚರ್ಚೆಯನ್ನು ಪ್ರಾರಂಭಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

## 7. ಸಚಿವರ ಹೇಳಿಕೆ

ದಿನಾಂಕ:18.03.2026ರಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯು ಪ್ರಾರಂಭವಾಗುತ್ತಿರುವ ಹಿನ್ನಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಶುಭ ಕೋರಿದರು.

ಮಧ್ಯಾಹ್ನ 2.18 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.46 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 8. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

12. ಶ್ರೀ ಅಡಗೂರ್ ಹೆಚ್. ವಿಶ್ವನಾಥ್

ಮಧ್ಯಾಹ್ನ 3.47 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.57 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಆಡಳಿತ ಪಕ್ಷದ ಮಾನ್ಯ ಶಾಸಕರು ಹಾಗೂ ಸಚಿವರು ಹಾಜರಿಲ್ಲದಿರುವ ಕುರಿತು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಪ್ರಸ್ತಾಪಿಸಿದರು.

13. ಶ್ರೀ ಎಸ್.ಎಲ್. ಭೋಜೇಗೌಡ
14. ಶ್ರೀಮತಿ ಬಲ್ಕೀಸ್ ಬಾನು

ಸಂಜೆ 5.35 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

15. ಶ್ರೀ ಪಿ.ಹೆಚ್. ಪೂಜಾರ್
16. ಶ್ರೀ ವೈ.ಎಂ. ಸತೀಶ್

ಸಂಜೆ 6.20 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

17. ಶ್ರೀಮತಿ ಹೇಮಲತಾ ನಾಯಕ

ಸಂಜೆ 7.00 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:18.03.2026ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಬುಧವಾರ, ದಿನಾಂಕ:18.03.2026

**(18)**

ದಿನಾಂಕ:18.03.2026 ರಂದು ಬೆಳಗ್ಗೆ 10.05 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:18.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 12ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 166(1672)
2. 167(1602)
3. 168(1575)
4. 169(1595)
5. 170(1701+1601)
6. 171(1691) ಗೈರು ಹಾಜರಿ
7. 172(1626)
8. 173(1645)
9. 174(1623)
10. 175(1649)
11. 176(1699)
12. 177(1677) ವರ್ಗಾವಣೆ
13. 178(1658)
14. 179(1697)
15. 180(1665)

ದಿನಾಂಕ:18.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 12ನೇ ಪಟ್ಟಿಯ ಒಟ್ಟು 123 ಪ್ರಶ್ನೆಗಳ ಪೈಕಿ 98 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಗೃಹ ಸಚಿವರು ಮಂಡಿಸಿದರು.

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.

1. ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2026
2. ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2026

## 3. ಸಚಿವರ ಹೇಳಿಕೆ

ಸಿಲಿಂಡರ್‌ಗಳ ಕೊರತೆ ಸಂಬಂಧ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಹೇಳಿಕೆ ನೀಡಿದರು.

## 4. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

1. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **“ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ”**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಮತಿ/ಶ್ರೀಯುತರುಗಳಾದ:

1. ಸಿ.ಟಿ. ರವಿ
2. ಎಸ್.ಎಲ್. ಭೋಜೇಗೌಡ
3. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು.
4. ಐವನ್ ಡಿ’ಸೋಜಾ
5. ಡಿ.ಎಸ್. ಅರುಣ್
6. ಶಿವಕುಮಾರ್ ಕೆ.
7. ರಮೇಶ್ ಬಾಬು
8. ಎ. ವಸಂತ ಕುಮಾರ್
9. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
10. ಭಾರತಿ ಶೆಟ್ಟಿ

11. ಎಂ. ನಾಗರಾಜು
12. ಡಾ: ಡಿ. ತಿಮ್ಮಯ್ಯ

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**2.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗೃಹ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಮತಿ/ಶ್ರೀಯುತರುಗಳಾದ:

1. ಶರವಣ ಟಿ.ಎ
2. ಹೇಮಲತಾ ನಾಯಕ
3. ಸಿ.ಟಿ. ರವಿ
4. ಐವನ್ ಡಿ'ಸೋಜಾ
5. ಎಂ. ನಾಗರಾಜು
6. ಕೆ.ಎಸ್. ನವೀನ್
7. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)

ಮಾನ್ಯ ಗೃಹ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 5. ವರದಿಯನ್ನೊಪ್ಪಿಸುವುದು

**ಶ್ರೀ ಡಿ. ಸುಧಾಕರ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)** ಅವರು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ (ಸಂಪುಟ-1 ಮತ್ತು ಸಂಪುಟ-2) ವರದಿಯನ್ನೊಪ್ಪಿಸಿದರು.

## 6. ಶೂನ್ಯವೇಳೆ ಪ್ರಸ್ತಾವಗಳು

**1.** **ಡಾ: ಎಂ.ಜಿ. ಮುಳೆ** ಅವರು ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ಕಾಳಿ ನದಿಯಿಂದ ಕೆರೆ ಮತ್ತು ಬಾಂಧಾರ ತುಂಬಿಸುವ ಏತ ನೀರಾವರಿ ಯೋಜನೆ ಪೂರ್ಣಗೊಳಿಸಲು ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

2. **ಶ್ರೀ ಸಿ.ಟಿ. ರವಿ ಮತ್ತು ಶ್ರೀಮತಿ ಹೇಮಲತಾ ನಾಯಕ** ಅವರುಗಳು ಹೆಣ್ಣು ಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚಾಗಿರುವುದರಿಂದ ವಿಶೇಷ ತನಿಖಾ ತಂಡವನ್ನು ರಚಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ಉತ್ತರವನ್ನು ಒದಗಿಸುವುದಾಗಿ ತಿಳಿಸಿದರು.

3. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಪರಿಶಿಷ್ಠ ಪಂಗಡಗಳಲ್ಲಿಯೂ ಒಳಮೀಸಲಾತಿ ಜಾರಿಗೆ ತರಲು ಆಯೋಗವನ್ನು ರಚಿಸಿ ಸೂಕ್ತ ಪರಿಹಾರ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

4. **ಶ್ರೀ ಶರವಣ ಟಿ.ಎ** ಅವರು ಬೆಂಗಳೂರಿನಲ್ಲಿನ ವೃಷಭಾವತಿ ನದಿಯು ಹೆಚ್ಚಿನ ಪ್ರಮಾಣದಲ್ಲಿ ಮಲೀನಗೊಳ್ಳುತ್ತಿದ್ದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

5. **ಶ್ರೀ ಎಂ. ನಾಗರಾಜು** ಅವರು ಬೆನ್ನಿಗಾನಹಳ್ಳಿ–ಚಿಕ್ಕಬಾಣಾವರ ಕಾರಿಡಾರ್ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಲು ಮರು ಟೆಂಡರ್ ಕರೆಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

6. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಅಪಾರ್ಟ್‌ಮೆಂಟ್ಗಳ ನಿರ್ವಹಣೆಗೆ ಮತ್ತು ಆಡಳಿತಕ್ಕೆ ಸಂಬಂಧಿಸಿದಂತೆ ಸ್ಪಷ್ಟವಾದ ಕಾನೂನು ಮತ್ತು ಮಾರ್ಗಸೂಚಿಗಳನ್ನು ರೂಪಿಸಿ ನಿವಾಸಿಗಳ ಗೊಂದಲ ನಿವಾರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

7. **ಶ್ರೀಮತಿ ಬಲ್ಕೀಸ್ ಬಾನು** ಅವರು ಭದ್ರಾ ಜಲಾಶಯದ ಎಡದಂಡೆ ನಾಲೆಯಲ್ಲಿನ ನೀರು ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಬಲ್ಕ್ ಹೆಡ್ ಗೇಟ್ ಅಳವಡಿಕೆ ಸೇರಿದಂತೆ ವಿವಿಧ ಕಾಮಗಾರಿಯ ಅನುಷ್ಠಾನದಲ್ಲಿ ಅವ್ಯವಹಾರ ನಡೆದಿರುವ ಸಂಬಂಧ ತನಿಖೆ ನಡೆಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

8. **ಶ್ರೀ ಎ. ವಸಂತ ಕುಮಾರ್** ಅವರು ರಾಜ್ಯದ ಸಹಕಾರಿ ವಲಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ನಡೆದಿರುವ ಅಕ್ರಮಗಳು ಹಾಗೂ ಆಡಳಿತಾತ್ಮಕ ದೌರ್ಬಲ್ಯಗಳಿಂದ ಠೇವಣಿದಾರರು ಸಂಕಷ್ಟಕ್ಕೆ ಸಿಲುಕಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

9. **ಶ್ರೀ ಶಶೀಲ್ ಜಿ. ನಮೋಶಿ** ಅವರು ದೈಹಿಕ ಶಿಕ್ಷಕ ಮತ್ತು ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

10. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಕೂಲಿ ಕಾರ್ಮಿಕರಿಗೆ ಮುಖಚರ್ಯೆಸಹಿತ ಬಯೋಮೆಟ್ರಿಕ್ ಹಾಜರಾತಿ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

ಮಧ್ಯಾಹ್ನ 2.20 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:23.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಸೋಮವಾರ, ದಿನಾಂಕ:23.03.2026

**(19)**

ದಿನಾಂಕ:23.03.2026 ರಂದು ಬೆಳಗ್ಗೆ 11.15 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**1. ಸಂತಾಪ ಸೂಚನೆ**

ವಿಧಾನ ಪರಿಷತ್ತಿನ ಮಾಜಿ ಶಾಸಕರಾಗಿದ್ದ ಕರಿಯಣ್ಣ ಹೆಚ್. ಸಂಗಟಿ ಅವರು ದಿನಾಂಕ:23.03.2026ರಂದು ನಿಧನರಾದುದಕ್ಕೆ ಸಂತಾಪ ಸೂಚನಾ ನಿರ್ಣಯ ಮಂಡಿಸಲಾಯಿತು.

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀಮತಿ ಹೇಮಲತಾ ನಾಯಕ ಅವರು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಮೃತ ಗಣ್ಯರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

## 2. ಪ್ರಶ್ನೋತ್ತರ

ದಿನಾಂಕ:23.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 13ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 181(1792+1788+1753+1761+1795) | ಕಾಲಾವಕಾಶ |
| 2. | 182(1722) | |
| 3. | 183(1813) | |
| 4. | 184(1794) | |
| 5. | 185(1713) | |
| 6. | 186(1832) | |
| 7. | 187(1770) | |
| 8. | 188(1732) | |
| 9. | 189(1851+1754) | |
| 10. | 190(1809) | |
| 11. | 191(1743) | ಗೈರು ಹಾಜರಿ |
| 12. | 192(1745) | |
| 13. | 193(1859) | |
| 14. | 194(1833) | ಕಾಲಾವಕಾಶ |
| 15. | 195(1765) | |

**ದಿನಾಂಕ:16.03.2026ರ ಸಮೂಹ–Iರ 10ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 148(1321)

ಮಧ್ಯಾಹ್ನ 12.50 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

ದಿನಾಂಕ:23.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 13ನೇ ಪಟ್ಟಿಯ ಒಟ್ಟು 149 ಪ್ರಶ್ನೆಗಳ ಪೈಕಿ 77 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 3. ಸಚಿವರ ಹೇಳಿಕೆ

ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ವಾಣಿಜ್ಯ ಸಿಲಿಂಡರ್‌ಗಳ ಲಭ್ಯತೆ ಕುರಿತು ಹೇಳಿಕೆ ನೀಡಿದರು.

## 4. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಂದಾಯ ಆಡಳಿತ ಅನುಕೂಲಕ್ಕಾಗಿ ಕುಂದಾಪುರ ಉಪವಿಭಾಗ ಕಚೇರಿಯನ್ನು ತೆರೆಯುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ಬೆಂಗಳೂರು ನಗರದಲ್ಲಿ ಕಸ ವಲೇವಾರಿಗೆ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ರಾಷ್ಟ್ರೀಯ ಪಂಚಾಯತ್ ರಾಜ್ ಆಯೋಗ ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಕಲಬುರಗಿ ಜಿಲ್ಲೆಯ ದೇವಲಗಾಣಗಾಪುರದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ರಮೇಶ್ ಬಾಬು** ಅವರು ಕರ್ನಾಟಕ ತೆರೆದ ವಿಶ್ವವಿದ್ಯಾಲಯದಲ್ಲಿ ಅಂತರರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನವನ್ನು ಆಯೋಜಿಸಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

6. **ಶ್ರೀ ಜಗದೇವ್ ಗುತ್ತೇದಾರ್** ಅವರು ರಾಜ್ಯದ ನದಿಗಳನ್ನು ಕೈಗಾರಿಕೆ ಮತ್ತು ಮಾನವ ತ್ಯಾಜ್ಯದಿಂದ ರಕ್ಷಿಸಲು ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಯೋಗದೊಂದಿಗೆ ಯೋಜನೆ ರೂಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

7. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ರಾಜ್ಯದಲ್ಲಿ ಭಿಕ್ಷುಕರ ಪುನರ್ವಸತಿಗಾಗಿ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮಂಜುನಾಥ್ ಭಂಡಾರಿ** ಅವರು ವರಾಹಿ ಪಂಪ್ ಸ್ಟೋರೇಜ್ ಯೋಜನೆಯ ಡಿ.ಪಿ.ಆರ್ ತಯಾರಿಸುವ ಮುನ್ನ ಪರಿಸರವಾದಿಗಳು ತಜ್ಞರು ಹಾಗೂ ಸ್ಥಳೀಯ ಮುಖಂಡರ ಸಭೆ ಕರೆದು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಬಸನಗೌಡ ಬಾದರ್ಲಿ** ಅವರು ಗುಲಬರ್ಗಾ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿದ್ದ ಕಾಲೇಜುಗಳಿಗೆ ಉನ್ನತ ವ್ಯಾಸಂಗಕ್ಕಾಗಿ ವಿದ್ಯಾರ್ಥಿಗಳು ಮೂಲ ಅಂಕಪಟ್ಟಿಗಳನ್ನು ಸಲ್ಲಿಸಿದ್ದು, ಅವುಗಳನ್ನು ಹಿಂಪಡೆಯಲು ವಿದ್ಯಾರ್ಥಿಗಳು ಪರದಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

10. **ಶ್ರೀ ಚಿದಾನಂದ್ ಎಂ. ಗೌಡ** ಅವರು ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನಲ್ಲಿ ಬಿದ್ದ ಆಲಿಕಲ್ಲು ಮಳೆಯಿಂದ ಬೆಳೆಹಾನಿಯಾಗಿದ್ದು ರೈತರಿಗೆ ಬೆಳೆ ನಷ್ಟವನ್ನು ಒದಗಿಸಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 5. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)** ಅವರು ಬೆಂಗಳೂರು ಉತ್ತರ ವಲಯದಲ್ಲಿರುವ 10 ಸರ್ಕಾರಿ ಶಾಲೆಗಳಲ್ಲಿ 9ನೇ ತರಗತಿಯಲ್ಲಿ ಓದಿದ 181 ವಿದ್ಯಾರ್ಥಿಗಳು 10ನೇ ತರಗತಿಗೆ ಹಾಜರಾಗದಿರುವ ಕುರಿತು ದಿನಾಂಕ:11.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಆರ್ಥಿಕ ವಂಚನೆಯ ಪ್ರಕರಣಗಳು ಹೆಚ್ಚುತ್ತಿರುವ ಕುರಿತು ದಿನಾಂಕ:11.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಶರವಣ ಟಿ.ಎ** ಅವರು ತುಂಗಭದ್ರಾ ಜಲಾಶಯದ 33 ಗೇಟ್‌ಗಳನ್ನು ಅಳವಡಿಸುವ ಮೂಲಕ ದುರಸ್ಥಿ ಕಾರ್ಯವನ್ನು ಪೂರ್ಣಗೊಳಿಸುವ ಕುರಿತು ದಿನಾಂಕ:12.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀಮತಿ ಭಾರತಿ ಶೆಟ್ಟಿ** ಅವರು ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಅಕ್ಕಿರಾಂಪುರ ಗ್ರಾಮದಲ್ಲಿರುವ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾರ್ಥಿನಿಲಯವು ಪಾಳು ಬಿದ್ದಿರುವ ಕುರಿತು ದಿನಾಂಕ:13.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಮಂಜುನಾಥ್ ಭಂಡಾರಿ** ಅವರು ಮಂಗಳೂರು ಹಾಗೂ ಬಂಟ್ವಾಳದ ಜನತೆಗೆ ಕುಡಿಯುವ ನೀರು ಪೂರೈಸುತ್ತಿರುವ ನೇತ್ರಾವತಿ ನದಿಗೆ ಕೊಳಚೆ ನೀರು ಸೇರುತ್ತಿರುವುದನ್ನು ತಡೆಯುವುದು ಹಾಗೂ ಕೊಳಚೆ ನೀರು ಸಂಸ್ಕರಣಾ ಘಟಕಗಳನ್ನು ನಿರ್ಮಿಸುವ ಕುರಿತು ದಿನಾಂಕ:13.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಐವನ್ ಡಿ'ಸೋಜಾ** ಅವರು ಪ್ಯಾರಾಮೆಡಿಕಲ್ ಕೋರ್ಸ್ ಸೇರಬಯಸುವ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ತೇರ್ಗಡೆಯಾಗಿರಬೇಕೆಂದು ಕೇಂದ್ರ ಸರ್ಕಾರವು ನಿಯಮ ಜಾರಿಗೆ ತಂದಿರುವ ಕುರಿತು ದಿನಾಂಕ:16.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಸಿ.ಟಿ. ರವಿ** ಅವರು ರೈತರಿಗೆ ಕಬ್ಬು ಬೆಳೆಯ ಬಾಕಿ ಬಿಲ್ ಪಾವತಿ ಮಾಡುವ ಕುರಿತು ದಿನಾಂಕ:16.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀ ಶಶೀಲ್ ಜಿ. ನಮೋಶಿ** ಅವರು 2022ರಲ್ಲಿ ನಡೆದಿರುವ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಕೆಲವು ವಿವಾಹಿತ ಮಹಿಳಾ ಅಭ್ಯರ್ಥಿಗಳಿಗೆ ಮೀಸಲಾತಿಯಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಿ KAT ನೀಡಿರುವ ಆದೇಶದಂತೆ ಕ್ರಮಕೈಗೊಳ್ಳುವ ಕುರಿತು ದಿನಾಂಕ:16.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಡಾ: ಉಮಾಶ್ರೀ** ಅವರು ವಾಹನ ಮಾಲೀಕತ್ವ ವರ್ಗಾವಣೆಗೆ ಅರ್ಜಿ ಸಲ್ಲಿಸಿ ತಿಂಗಳುಗಳೇ ಕಳೆದರೂ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ ಕ್ಲಿಯರೆನ್ಸ್ ಸರ್ಟಿಫಿಕೇಟ್ ದೊರೆಯದೆ ಮಾಲೀಕರು ಪರದಾಡುತ್ತಿರುವ ಕುರಿತು ದಿನಾಂಕ:17.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

10. **ಶ್ರೀ ಟಿ.ಎನ್. ಜವರಾಯಿ ಗೌಡ, ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಹಾಗೂ ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರುಗಳು ಕೇಂದ್ರ ಸರ್ಕಾರದ "ವಯೋ ವಂದನಾದಡಿ ವೃದ್ಧರಿಗಿಲ್ಲ ಚಿಕಿತ್ಸೆ' ಎಂಬ ಯೋಜನೆ 'ಆಯುಷ್ಮಾನ್ ವಯೋ ವಂದನಾ' ಯೋಜನೆ ಜಾರಿಗೆ ಬಂದು ಕಾರ್ಡ್ ವಿತರಣೆಯಾಗಿದ್ದರೂ ಅನುಷ್ಠಾನಗೊಳಿಸಲು ವಿಳಂಬವಾಗಿರುವ ಕುರಿತು ದಿನಾಂಕ:17.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

11. **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಾಮಾಜಿಕ ಜಾಲತಾಣದ ಬಳಕೆಯಿಂದಾಗಿ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗಿರುವ ಕುರಿತು ದಿನಾಂಕ:17.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

12. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕೇಂದ್ರ ಸರ್ಕಾರದ 'ಗ್ರಾಮಗಳಿಗೆ ಬ್ರಾಡ್‌ಬ್ಯಾಂಡ್ ಸಂಪರ್ಕ' ಯೋಜನೆಯನ್ನು ಹಳ್ಳಿಗಳಿಗೆ ವಿಸ್ತರಿಸುವ ಕುರಿತು ದಿನಾಂಕ:17.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

13. **ಶ್ರೀ ಐವನ್ ಡಿ'ಸೋಜಾ** ಅವರು ವಾಹನದಲ್ಲಿರುವ ಪ್ಯಾನಿಕ್ ಬಟನ್ ರಿಚಾರ್ಜ್ ಮೊತ್ತವನ್ನು ಏರಿಸಿರುವುದರಿಂದ ಹಾಗೂ ರಿಚಾರ್ಜ್ ಮಾಡದಿದ್ದಲ್ಲಿ ಎಫ್.ಸಿ. ನವೀಕರಣ ಮಾಡಲು ನಿರಾಕರಿಸುತ್ತಿರುವುದರಿಂದ ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರು ಸಂಕಷ್ಟದಲ್ಲಿರುವ ಕುರಿತು ದಿನಾಂಕ:17.03.2026ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 6. ಪ್ರಕಟಣೆ

**ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.**

2026ನೇ ಸಾಲಿನಲ್ಲಿ ವಿಧಾನ ಪರಿಷತ್ತಿನ ಸದಸ್ಯತ್ವದ ಅವಧಿಯನ್ನು ಪೂರ್ಣಗೊಳಿಸುತ್ತಿರುವ ಮಾನ್ಯ ಶಾಸಕರುಗಳ ಗೌರವಾರ್ಥವಾಗಿ ದಿನಾಂಕ:24.03.2026ರ ಮಂಗಳವಾರದಂದು ಬೆಳಗ್ಗೆ 10.00 ಗಂಟೆಗೆ ವಿಧಾನ ಸೌಧದ ಪೂರ್ವದ್ವಾರದ ಭವ್ಯವಾದ ಮೆಟ್ಟಿಲುಗಳ ಮುಂಭಾಗದಲ್ಲಿ ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳ ಗ್ರೂಪ್ ಫೋಟೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮಾನ್ಯ ಶಾಸಕರುಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಕೋರಲಾಗಿದೆ.

## 7. ಗಮನ ಸೆಳೆಯುವ ಸೂಚನೆಗಳು

1. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ರಾಜ್ಯದ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ತಾಂತ್ರಿಕೇತರ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಉಪನ್ಯಾಸಕರು ಮತ್ತು ಸಿಸ್ಟಮ್ ಅನಾಲಿಸ್ಟ್‌ಗಳಿಗೆ A.I.C.T.E ವೇತನ ನೀಡಿ, ಅದೇ **"ಸಿ"** ವೃಂದದ ಗ್ರಂಥಪಾಲಕರುಗಳಿಗೆ A.I.C.T.E ವೇತನ ನೀಡದೆ ತಾರತಮ್ಯ ಮಾಡುತ್ತಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

2. **ಶ್ರೀ ಗೋವಿಂದರಾಜು** ಅವರು ದೀರ್ಘಾವಧಿ ವಿದ್ಯುತ್ ಖರೀದಿ ಒಪ್ಪಂದದಂತೆ ವೆಚ್ಚ ಹಾಗೂ ರಾಜ್ಯ ಸರ್ಕಾರ ಭರಿಸುತ್ತಿರುವ ಮೊತ್ತಕ್ಕೂ ವ್ಯತ್ಯಾಸವಿರುವುದರಿಂದಾಗಿ ವಿದ್ಯುತ್ ಸರಬರಾಜು ಕಂಪನಿಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಕುರಿತು ಮಾನ್ಯ ಇಂಧನ ಸಚಿವರ ಗಮನ ಸೆಳೆದರು.

   ಮಾನ್ಯ ಇಂಧನ ಸಚಿವರು ಉತ್ತರಿಸಿದರು.

ಮಧ್ಯಾಹ್ನ 2.05 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.20 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 8. ನಿಯಮ 330ರ ಮೇರೆಗೆ

1. **ಶ್ರೀಮತಿ ಹೇಮಲತಾ ನಾಯಕ** ಅವರು ರಾಜ್ಯದಲ್ಲಿ ಮಾಜಿ ದೇವದಾಸಿಯರು ಮತ್ತು ಅವರ ಮಕ್ಕಳ ಸಾಮಾಜಿಕ ಮತ್ತುಆರ್ಥಿಕ ಸ್ಥಿತಿಗತಿಯ ಸುಧಾರಣೆಯ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಉತ್ತರಿಸಿದರು.

   ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಡಾ: ತಳವಾರ್ ಸಾಬಣ್ಣ** ಅವರು ಗಡಿನಾಡು ಮತ್ತು ಹೊರನಾಡು ಕನ್ನಡಿಗರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಮತ್ತು ಉದ್ಯೋಗ ಅವಕಾಶ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಸ್ಪಷ್ಟೀಕರಣ ನೀಡಿದರು.

## 9. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

18. ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)

ಮಧ್ಯಾಹ್ನ 4.05 ಗಂಟೆಯಲ್ಲಿ **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 4.25 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

19. ಡಾ: ಉಮಾಶ್ರೀ
20. ಶ್ರೀ ಕಿಶೋರ್ ಕುಮಾರ್ ಪುತ್ತೂರ್
21. ಶ್ರೀ ಶಿವಕುಮಾರ್ ಕೆ.
22. ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ

ಸಂಜೆ 5.25 ಗಂಟೆಯಲ್ಲಿ **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಸಂಜೆ 5.40 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

23. ಶ್ರೀ ಗೋವಿಂದ ರಾಜು
24. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

## 10. ಪ್ರಕಟಣೆ

**ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:23.03.2026ರಂದು "ಕರ್ನಾಟಕ ವಿವಾಹದಲ್ಲಿ ಆಯ್ಕೆಯ ಸ್ವಾತಂತ್ರ್ಯ ಹಾಗೂ ಮರ್ಯಾದೆ ಮತ್ತು ಸಂಪ್ರದಾಯದ ಹೆಸರಿನಲ್ಲಿ ಅಪರಾಧಗಳ ಪ್ರತಿಬಂಧಕ ಮತ್ತು ನಿಷೇಧ (ಇವ ನಮ್ಮವ ಇವ ನಮ್ಮವ) ವಿಧೇಯಕ, 2026"ನ್ನು ತಿದ್ದುಪಡಿಯೊಂದಿಗೆ** ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ವೃತ್ತಿಗಳ, ಕಸುಬುಗಳ ಆಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 2026
2. ಕರ್ನಾಟಕ ಜ್ಞಾನಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟೀಕರಣ ವಿಧೇಯಕ, 2026
3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2026

ಸಂಜೆ 7.15 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:24.03.2026ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಮಂಗಳವಾರ, ದಿನಾಂಕ:24.03.2026

**(20)**

ದಿನಾಂಕ:24.03.2026 ರಂದು ಬೆಳಗ್ಗೆ 11.35 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:24.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 14ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 196(1968)
2. 197(1948) ಗೈರು ಹಾಜರಿ
3. 198(2214)
4. 199(2001+1974)

ಬೆಳಗ್ಗೆ 11.50 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿ ಪೀಠದಲ್ಲಿ ಆಸೀನರಾದರು.

5. 200(1940)
6. 201(1990) ಡಾ: ಆರತಿ ಕೃಷ್ಣ ಪರವಾಗಿ ಶ್ರೀ ಶಿವಕುಮಾರ್ ಕೆ.
7. 202(1991)
8. 203(1961)
9. 204(1892)
10. 205(1900)
11. 206(1955)

12. 207(1970)
13. 208(1995)
14. 209(1986)
15. 210(1982)

ಮಧ್ಯಾಹ್ನ 1.12 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

**ದಿನಾಂಕ:13.03.2026ರ ಸಮೂಹ–Vರ 9ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 121(1208) ಕಾಲಾವಕಾಶ
2. 129(1210) ಕಾಲಾವಕಾಶ

**ದಿನಾಂಕ:17.03.2026ರ ಸಮೂಹ–IIರ 11ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 160(1495)
2. 161(1542)

ದಿನಾಂಕ:24.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 14ನೇ ಪಟ್ಟಿಯ ಒಟ್ಟು 105 ಪ್ರಶ್ನೆಗಳ ಪೈಕಿ 57 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ. ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಈ ಕೆಳಕಂಡ ವರದಿಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

1. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮೇಲಿನ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–13)
2. ಜಲ ಜೀವನ ಮಿಷನ್ ಅನುಷ್ಠಾನದ ಕಾರ್ಯನಿರ್ವಹಣಾ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–12)

ಆ. ಮಾನ್ಯ ಮುಖ್ಯಮಂತ್ರಿಗಳ ಹಾಗೂ ಸಂಬಂಧಪಟ್ಟ ಮಾನ್ಯ ಸಚಿವರುಗಳ ಪರವಾಗಿ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಮೂರನೇ ಮತ್ತು ನಾಲ್ಕನೇ ಪಟ್ಟಿಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಇ. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ **2026ನೇ ಸಾಲಿನ ಕರ್ನಾಟಕ ವಿವಾಹದಲ್ಲಿ ಆಯ್ಕೆಯ ಸ್ವಾತಂತ್ರ್ಯ ಹಾಗೂ ಮರ್ಯಾದೆ ಮತ್ತು ಸಂಪ್ರದಾಯದ ಹೆಸರಿನಲ್ಲಿನ ಅಪರಾಧಗಳ ಪ್ರತಿಬಂಧಕ ಮತ್ತು ನಿಷೇಧ (ಇವ ನಮ್ಮವ ಇವ ನಮ್ಮವ) ವಿಧೇಯಕ** ಹಾಗೂ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಮಾನ್ಯ ಕಾರ್ಯದರ್ಶಿಯವರು ಮಂಡಿಸಿದರು.

1. ಕರ್ನಾಟಕ ವೃತ್ತಿಗಳ, ಕಸುಬುಗಳ ಆಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 2026
2. ಕರ್ನಾಟಕ ಜ್ಞಾನಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟೀಕರಣ ವಿಧೇಯಕ, 2026
3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2026

## 3. ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಪುಟ್ಟಣ್ಣ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ಖಾಸಗಿ ಅನುದಾನಿತ/ಅನುದಾನ ರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಶಾಲೆಗಳ ಮಾನ್ಯತೆ ನವೀಕರಣದ ನಿಯಮಗಳನ್ನು ಸಡಿಲಿಸಿ ವಿನಾಯಿತಿ ನೀಡುವ ಕುರಿತು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಅವಧಿಯನ್ನು ದಿನಾಂಕ:16.03.2026ರಿಂದ 6 ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸಿದರು.

ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 4. ವಿತ್ತೀಯ ಕಾರ್ಯಕಲಾಪ

ಮಾನ್ಯ ಮುಖ್ಯಮಂತ್ರಿಯವರ ಪರವಾಗಿ 2025–26ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಮತ್ತು ಅಂತಿಮ ಕಂತು)ನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ವೃತ್ತಿಗಳ, ಕಸುಬುಗಳ ಆಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ಮಾನ್ಯ ಶಾಸಕರಾದ ಶ್ರೀ ಐವನ್ ಡಿ'ಸೋಜಾ ಅವರು ಚರ್ಚೆಯಲ್ಲಿ ಭಾಗವಹಿಸಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**2.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ವಿವಾಹದಲ್ಲಿ ಆಯ್ಕೆಯ ಸ್ವಾತಂತ್ರ್ಯ ಹಾಗೂ ಮರ್ಯಾದೆ ಮತ್ತು ಸಂಪ್ರದಾಯದ ಹೆಸರಿನಲ್ಲಿನ ಅಪರಾಧಗಳ ಪ್ರತಿಬಂಧಕ ಮತ್ತು ನಿಷೇಧ (ಇವ ನಮ್ಮವ ಇವ ನಮ್ಮವ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಮತಿ/ಶ್ರೀಯುತರುಗಳಾದ:

1. ಶಿವಕುಮಾರ್ ಕೆ.
2. ಕೆ.ಎಸ್. ನವೀನ್
3. ಐವನ್ ಡಿ'ಸೋಜಾ
4. ಅಡಗೂರ್ ಹೆಚ್. ವಿಶ್ವನಾಥ್
5. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು.
6. ಎಸ್.ಎಲ್. ಭೋಜೇಗೌಡ

ಮಧ್ಯಾಹ್ನ 3.10 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 4.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 4.25 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ಶಾಸನ ರಚನೆ

### ವಿಧೇಯಕದ ಮೇಲಿನ ಚರ್ಚೆ

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಮತಿ/ಶ್ರೀಯುತರುಗಳಾದ:

7. ಶರವಣ ಟಿ.ಎ
8. ಡಿ.ಎಸ್. ಅರುಣ್
9. ಎಂ. ನಾಗರಾಜು
10. ರಮೇಶ್ ಬಾಬು
11. ಸಿ.ಟಿ. ರವಿ

ಸಂಜೆ 5.20 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

12. ಭಾರತಿ ಶೆಟ್ಟಿ
13. ಡಾ: ಉಮಾಶ್ರೀ

ಸಂಜೆ 6.00 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

14. ಪಿ.ಹೆಚ್. ಪೂಜಾರ್
15. ಎಸ್.ವ್ಹಿ. ಸಂಕನೂರ
16. ಪ್ರತಾಪ್ ಸಿಂಹ ನಾಯಕ್ ಕೆ.
17. ಡಾ: ಡಿ. ತಿಮ್ಮಯ್ಯ
18. ಎಫ್.ಹೆಚ್. ಜಕ್ಕಪ್ಪನವರ್
19. ಶಾಂತಾರಾಮ್ ಬುಡ್ನ ಸಿದ್ದಿ
20. ಎ. ವಸಂತ ಕುಮಾರ್
21. ಎಸ್. ರವಿ

ಮಾನ್ಯ ಶಾಸಕರಾದ ಶ್ರೀ ಹೆಚ್.ಪಿ. ಸುಧಾಮ್ ದಾಸ್ ಅವರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 6. ಪ್ರಕಟಣೆಗಳು

**1. ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:24.03.2026ರಂದು "ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ, 2026"** ಹಾಗೂ **"ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2026"ನ್ನು** ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**2. ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.**

ದಿನಾಂಕ:24.03.2026ರಂದು ನಡೆದ ಕಾರ್ಯಕಲಾಪಗಳ ಸಲಹಾ ಸಮಿತಿ ಜಂಟಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ.

1. ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:06.03.2026ರಂದು ಮಂಡಿಸಿದ 2026–27ನೇ ಸಾಲಿನ ರಾಜ್ಯದ ಆಯವ್ಯಯ ಅಂದಾಜುಗಳ ಮೇಲಿನ ಚರ್ಚೆಗೆ ದಿನಾಂಕ:26.03.2026ರಂದು ಬೆಳಗ್ಗೆ ಸರ್ಕಾರದಿಂದ ಉತ್ತರ;
2. ವಿಧಾನಸಭೆಯಿಂದ ಅಂಗೀಕೃತಗೊಂಡ ವಿಧೇಯಕಗಳು, ಹಣಕಾಸು/ಧನವಿನಿಯೋಗ ವಿಧೇಯಕಗಳ ಮಂಡನೆ, ಪರ್ಯಾಲೋಚನೆ ಮತ್ತು ಅಂಗೀಕಾರ;

ರಾತ್ರಿ 8.05 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:25.03.2026ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಬುಧವಾರ, ದಿನಾಂಕ:25.03.2026

**(21)**

ದಿನಾಂಕ:25.03.2026 ರಂದು ಬೆಳಗ್ಗೆ 11.25 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಮಾನ್ಯ ಕಾರ್ಯದರ್ಶಿಯವರು ಮಂಡಿಸಿದರು.

1. ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ, 2026
2. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2026

## 2. ಪ್ರಶ್ನೋತ್ತರ

ದಿನಾಂಕ:25.03.2026ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 15ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 211(2134)
2. 212(2049)
3. 213(2007)
4. 214(2116)
5. 215(2003)

6. 216(2109)
7. 217(2022)
8. 218(2075+2071)
9. 219(2087)
10. 220(2137)
11. 221(2090)
12. 222(2122)
13. 223(2114)
14. 224(2039)
15. 225(2059)

**ದಿನಾಂಕ:11.03.2026ರ ಸಮೂಹ–IIIರ 7ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

| | | |
|---|---|---|
| 1. | 94(849) | ಕಾಲಾವಕಾಶ |
| 2. | 104(878) | ಕಾಲಾವಕಾಶ |

ದಿನಾಂಕ:25.03.2026ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 15ನೇ ಪಟ್ಟಿಯ ಒಟ್ಟು 123 ಪ್ರಶ್ನೆಗಳ ಪೈಕಿ 111 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಶ್ರೀ ಪುಟ್ಟಣ್ಣ ಅವರು ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ ಅವರಿಗೆ ಕಚೇರಿಗೆ ಬೀದರ್ ಜಿಲ್ಲೆಯಲ್ಲಿ ಸ್ಥಳಾವಕಾಶ ನೀಡದಿರುವುದರಿಂದ ಸದರಿ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಸದನಕ್ಕೆ ಕರೆಸಬೇಕೆಂದು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಕ್ರಮ ವಹಿಸಬೇಕೆಂದು ಒತ್ತಾಯಿಸಿದರು.

ಶ್ರೀಯುತರುಗಳಾದ:

1. ಸುನೀಲ್ ವಲ್ಯಾಪುರ್
2. ಸಲೀಂ ಅಹಮದ್, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು.
3. ಐವನ್ ಡಿ'ಸೋಜಾ
4. ಎಂ. ನಾಗರಾಜು
5. ಎಸ್.ಎಲ್. ಭೋಜೇಗೌಡ
6. ತಿಪ್ಪಣ್ಣಪ್ಪ ಕಮಕನೂರ
7. ಭೀಮರಾವ್ ಬಸವರಾಜ್ ಪಾಟೀಲ್

ಶ್ರೀ ರಮೇಶ್ ಬಾಬು ಅವರು ಸಭೆಗಳಿಗೆ ಸಹ ಅಧ್ಯಕ್ಷರಾಗಿರುವ ವಿಧಾನ ಪರಿಷತ್ತಿನ ಶಾಸಕರನ್ನು ಆಹ್ವಾನಿಸುವ ಕುರಿತು ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ಕರೆಯಲು ಸೂಚಿಸಿದರು.

ಮಾನ್ಯ ಸಭಾನಾಯಕರು ಈ ಕುರಿತು ಕ್ರಮವಹಿಸುವುದಾಗಿ ತಿಳಿಸಿದರು.

ದಿನಾಂಕ:26.03.2026ರಂದು ಬೆಳಗ್ಗೆ 11.00 ಗಂಟೆಗೆ ಬೀದರ್ ಜಿಲ್ಲೆಯ ಜಿಲ್ಲಾಧಿಕಾರಿಗಳು ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಕಚೇರಿಗೆ ಹಾಜರಾಗಬೇಕೆಂದು ಪೀಠದಿಂದ ಆದೇಶಿಸಲಾಯಿತು.

## 3. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಯುತರುಗಳಾದ:

1. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)

ಬೆಳಗ್ಗೆ 11.50 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

2. ಎಸ್.ಎಲ್. ಭೋಜೇಗೌಡ
3. ಶಶೀಲ್ ಜಿ. ನಮೋಶಿ
4. ರಾಮೋಜಿಗೌಡ
5. ಪಿ.ಹೆಚ್. ಪೂಜಾರ್
6. ಐವನ್ ಡಿ'ಸೋಜಾ
7. ಸಿ.ಟಿ. ರವಿ
8. ಚಿದಾನಂದ್ ಎಂ. ಗೌಡ
9. ಗೋವಿಂದ ರಾಜು
10. ಕೆ. ವಿವೇಕಾನಂದ
11. ಶರವಣ ಟಿ.ಎ

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಜ್ಞಾನಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟೀಕರಣ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಯುತರುಗಳಾದ:

1. ಸಿ.ಟಿ. ರವಿ
2. ಐವನ್ ಡಿ'ಸೋಜಾ
3. ಪಿ.ಹೆಚ್. ಪೂಜಾರ್
4. ಕೆ.ಎಸ್. ನವೀನ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ವಿವರಣೆ ನೀಡಿದರು.

ಮಧ್ಯಾಹ್ನ 1.15 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ
2. ಪ್ರತಾಪ್ ಸಿಂಹ ನಾಯಕ್ ಕೆ.
3. ಸಿ.ಟಿ. ರವಿ

ಮಧ್ಯಾಹ್ನ 2.05 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 2.20 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಉಪ ಸಭಾಪತಿಯವರ (**ಶ್ರೀ ಎಂ.ಕೆ. ಪ್ರಾಣೇಶ್**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

4. ಎಸ್.ಎಲ್. ಭೋಜೇಗೌಡ
5. ಕಿಶೋರ್ ಕುಮಾರ್ ಪುತ್ತೂರ್

ಮಧ್ಯಾಹ್ನ 4.12 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

6. ಶರವಣ ಟಿ.ಎ.
7. ನಿರಾಣಿ ಹಣಮಂತ್ ರುದ್ರಪ್ಪ
8. ಚಿದಾನಂದ್ ಎಂ. ಗೌಡ
9. ಭಾರತಿ ಶೆಟ್ಟಿ
10. ಪಿ.ಹೆಚ್. ಪೂಜಾರ್
11. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು.
12. ಹೆಚ್.ಪಿ. ಸುಧಾಮ್ ದಾಸ್
13. ಶಶೀಲ್ ಜಿ. ನಮೋಶಿ

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ವಿರೋಧಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**4.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **“ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ”**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

ಶ್ರೀಯುತರುಗಳಾದ:

1. ಶಶೀಲ್ ಜಿ. ನಮೋಶಿ
2. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)
3. ವೈ.ಎಂ. ಸತೀಶ್
4. ಐವನ್ ಡಿ’ಸೋಜಾ
5. ಪುಟ್ಟಣ್ಣ
6. ಎಸ್.ವ್ಹಿ. ಸಂಕನೂರ
7. ಶಾಂತಾರಾಮ್ ಬುಡ್ನ ಸಿದ್ದಿ
8. ಎಸ್.ಎಲ್. ಭೋಜೇಗೌಡ

9. ನಿರಾಣಿ ಹಣಮಂತ್ ರುದ್ರಪ್ಪ

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು

## 4. ಪ್ರಕಟಣೆ

**ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:25.03.2026ರಂದು** ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ಧನವಿನಿಯೋಗ ವಿಧೇಯಕ, 2026 (ವಿಧೇಯಕ ಸಂ.06)
2. ಕರ್ನಾಟಕ ಧನವಿನಿಯೋಗ (ಸಂಖ್ಯೆ-02) ವಿಧೇಯಕ, 2026 (ವಿಧೇಯಕ ಸಂ.11)
3. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2026 (ವಿಧೇಯಕ ಸಂ.12)

ರಾತ್ರಿ 7.40 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:26.03.2026ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ
ಗುರುವಾರ, ದಿನಾಂಕ:26.03.2026

**(22)**

ದಿನಾಂಕ:26.03.2026 ರಂದು ಬೆಳಗ್ಗೆ 10.55 ಗಂಟೆಗೆ ಸದನವು ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ. **ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಮಹಾಲೆಕ್ಕಪರಿಶೋಧಕರ ವರದಿಗಳನ್ನು ಮಂಡಿಸಿದರು.**

1. ಮಾರ್ಚ್ 2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ (ಅನುಸರಣಾ ಲೆಕ್ಕಪರಿಶೋಧನೆ–ಸಿವಿಲ್) (2026ರ ವರದಿ ಸಂಖ್ಯೆ–1).
2. 2024–25 ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ (ರಾಜ್ಯ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ) (2026ರ ವರದಿ ಸಂಖ್ಯೆ–02).
3. ಮಾರ್ಚ್ 2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ರಾಜಸ್ವದ ವರದಿ (ಅನುಸರಣಾ ಲೆಕ್ಕಪರಿಶೋಧನೆ–ಸಿವಿಲ್) (2026ರ ವರದಿ ಸಂಖ್ಯೆ–3).

## 2. ವಿತ್ತೀಯ ಕಾರ್ಯಕಲಾಪ

2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಚರ್ಚೆ.

25. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
26. ಶ್ರೀ ಶಶೀಲ್ ಜಿ. ನಮೋಶಿ

ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯದ ಮೇಲಿನ ಚರ್ಚೆಗೆ ಉತ್ತರಿಸಿದರು.

ಮಧ್ಯಾಹ್ನ 1.35 ಗಂಟೆಯಲ್ಲಿ **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 1.40 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀಮತಿ ಭಾರತಿ ಶೆಟ್ಟಿ
2. ಶ್ರೀ ಎಸ್.ವ್ಹಿ. ಸಂಕನೂರ
3. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ಸರ್ಕಾರದ ಉತ್ತರವನ್ನು ವಿರೋಧಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

## ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಆ. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಮಾನ್ಯ ಕಾರ್ಯದರ್ಶಿಯವರು ಮಂಡಿಸಿದರು.

01. ಕರ್ನಾಟಕ ಧನವಿನಿಯೋಗ ವಿಧೇಯಕ, 2026
02. ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ, 2026
03. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2026

## 3. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**1.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಧನವಿನಿಯೋಗ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ **"ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧಾರಣೆ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಶರವಣ ಟಿ.ಎ
2. ಶ್ರೀ ಕೆ.ಎಸ್. ನವೀನ್

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 5. ವರದಿಯನ್ನೊಪ್ಪಿಸುವುದು

ಅ. **ಶ್ರೀ ಡಿ.ಟಿ. ಶ್ರೀನಿವಾಸ್, ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ ಸದಸ್ಯರು** 2023-2024 ಹಾಗೂ 2024-25ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ ಮೂವತ್ತೊಂದನೇ ವರದಿಯನ್ನೊಪ್ಪಿಸಿದರು.

ಆ. **ಶ್ರೀ ಕೆ. ಅಬ್ದುಲ್ ಜಬ್ಬರ್ ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೂರನೇ ವರದಿಯನ್ನೊಪ್ಪಿಸಿದರು.

## 6. ತೀರ್ಪು/ಪ್ರಕಟಣೆ

ಮಾನ್ಯ ಶಾಸಕರಾದ ಶ್ರೀ ಭೀಮರಾವ್ ಬಸವರಾಜ ಪಾಟೀಲ್ ಅವರಿಗೆ ಬೀದರ್ ಜಿಲ್ಲೆಯ ಔರಾದ್ ಪಟ್ಟಣದಲ್ಲಿ ಶಾಸಕರ ಕಛೇರಿ ಒದಗಿಸದಿರುವ ಕುರಿತು ದಿನಾಂಕ:25.03.2026ರಂದು ನಡೆದ ಉಪವೇಶನದಲ್ಲಿ ಗಂಭೀರವಾದಂತಹ ಆರೋಪ ಬಂದ ಹಿನ್ನಲೆಯಲ್ಲಿ ಇಂದು ದಿನಾಂಕ:26.03.2026ರಂದು ಬೆಳಗ್ಗೆ 10.00 ಗಂಟೆಗೆ ನನ್ನ ಅಧ್ಯಕ್ಷತೆಯಲ್ಲಿ, ಮಾನ್ಯ ಸಭಾನಾಯಕರು, ಮಾನ್ಯ ವಿರೋಧ ಪಕ್ಷದ ನಾಯಕರು, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಭೀಮರಾವ್ ಬಸವರಾಜ ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಪರಿಷತ್ತಿನ ಕಾರ್ಯದರ್ಶಿಗಳ ಉಪಸ್ಥಿತಿಯಲ್ಲಿ ಸಭೆ ನಡೆಸಲಾಯಿತು.

ಸಭೆಗೆ ಆಗಮಿಸಿದ್ದ ಶ್ರೀಮತಿ ಶಿಲ್ಪಾ ಶರ್ಮ, ಬೀದರ್ ಜಿಲ್ಲೆಯ ಜಿಲ್ಲಾಧಿಕಾರಿಗಳು, ಮುಖ್ಯ ಅಧಿಕಾರಿಗಳು, ಪಟ್ಟಣ ಪಂಚಾಯತ್, ಔರಾದ್ ಪಟ್ಟಣ ಇವರು ಮಾನ್ಯ ಶಾಸಕರಾದ ಶ್ರೀ ಭೀಮರಾವ್ ಬಸವರಾಜ ಪಾಟೀಲ್ ಅವರಿಗೆ ನೀಡುವ ಕಛೇರಿಯ ಕಾಮಗಾರಿಯು ದಿನಾಂಕ: 18.09.2025ರಂದು ಪೂರ್ಣಗೊಂಡಿರುವ ಕುರಿತು ಮಾನ್ಯ ಶಾಸಕರ ಆಪ್ತ ಸಹಾಯಕರ ಗಮನಕ್ಕೆ ತಂದಿರುವುದು ತಿಳಿದು ಬಂದಿರುತ್ತದೆ. ಸಂವಹನ ಕೊರತೆಯಿಂದಾಗಿ ಮಾನ್ಯ ಶಾಸಕರಿಗೆ ಸದರಿ ವಿಷಯವು ಸಕಾಲದಲ್ಲಿ ಅವರ ಗಮನಕ್ಕೆ ಬಂದಿರುವುದಿಲ್ಲ. ಇದರಿಂದಾಗಿರುವ ಅಚಾತುರ್ಯಕ್ಕಾಗಿ ಕ್ಷಮೆ ಕೋರಿ ನನ್ನ ಸಮ್ಮುಖದಲ್ಲಿಯೇ ಕಛೇರಿ ಹಂಚಿಕೆ ಆದೇಶವನ್ನು ನೀಡಿರುತ್ತಾರೆ. ಮಾನ್ಯ ಶಾಸಕರಿಗೂ ಕೂಡ ಕಛೇರಿ ಹಂಚಿಕೆ ಆದೇಶವನ್ನು ನೀಡಲಾಗಿರುತ್ತದೆಂಬ ವಿಷಯವನ್ನು ಸದನದ ಗಮನಕ್ಕೆ ಈ ಮೂಲಕ ತರಲಾಗಿದೆ.

## 7. ಉತ್ತರಗಳ ಮಂಡನೆ

ದಿನಾಂಕ:26.03.2026ರ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳಿಗೆ ಹಾಗೂ ತಡೆಹಿಡಿಯಲಾದ 06 ಪ್ರಶ್ನೆಗಳ ಪೈಕಿ 03 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ ಒಟ್ಟು 154 ಪ್ರಶ್ನೆಗಳ ಪೈಕಿ 97 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ನಿಯಮ–72ರಡಿ ಸ್ವೀಕರಿಸಲಾದ ಒಟ್ಟು 67 ಸೂಚನೆಗಳಿಗೆ ಉತ್ತರಗಳನ್ನು ಮತ್ತು 330ರಡಿ ಸ್ವೀಕರಿಸಲಾದ 33 ಸೂಚನೆಗಳಿಗೆ ಮತ್ತು ಶೂನ್ಯವೇಳೆಗೆ ಸಂಬಂಧಿಸಿದ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 8. ನಿರ್ಣಯ

**ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

"ರಾಜ್ಯ ಸರ್ಕಾರವು 1969ರಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಡಿ 524.256 ಮೀಟರ್‌ಗಳ ಪೂರ್ಣ ಜಲಾಶಯ ಮಟ್ಟಕ್ಕೆ (FRL) ಕೃಷ್ಣಾ ನದಿಗೆ ಅಡ್ಡಲಾಗಿ ಆಲಮಟ್ಟಿ ಅಣೆಕಟ್ಟನ್ನು ನಿರ್ಮಿಸಲು ಯೋಜನೆಯನ್ನು ಸಿದ್ದಪಡಿಸಲಾಗಿದ್ದರಿಂದ:

1967ರ ಮೇ 31ರಂದು ಪ್ರಕಟಿಸಲಾದ ತನ್ನ ತೀರ್ಪಿನಲ್ಲಿ, ಭಾರತದ ಸರ್ವೋಚ್ಚ ನ್ಯಾಯಾಲಯದ ನಿವೃತ್ತಿ ನ್ಯಾಯಾಮೂರ್ತಿಗಳಾದ ಶ್ರೀ ಆರ್. ಎಸ್. ಬಚಾವತ್ ನೇತೃತ್ವದ ಕೃಷ್ಣಾ ಜಲವಿವಾದಗಳ ನ್ಯಾಯಮಂಡಳಿ–1 (KWDT-1), ಆಲಮಟ್ಟಿ ಅಣೆಕಟ್ಟನ್ನು 524.256 ಮೀಟರ್‌ಗಳ ಪೂರ್ಣ ಜಲಾಶಯ ಮಟ್ಟದವರೆಗೆ ನಿರ್ಮಿಸಲು ಕರ್ನಾಟಕ ರಾಜ್ಯಕ್ಕೆ ಯಾವುದೇ ತಡೆ ನಿರ್ಬಂಧವನ್ನು ವಿಧಿಸಿಲ್ಲವಾದ್ದರಿಂದ;

1998ರ ಡಿಸೆಂಬರ್ 14ರಂದು ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯವು ತನ್ನ ಆದೇಶದಲ್ಲಿ, 509 ಮೀಟರ್‌ಗಳ ಘನ ಕ್ರೆಸ್ಟ್ ಮಟ್ಟಕ್ಕಿಂತ (Solid Crest Level) ಮೇಲೆ ನೀರಿನ ಮುಕ್ತ ಹರಿವಿಗೆ ಅಡ್ಡಿಯಾಗದಂತೆ, 524.256 ಮೀಟರ್ ಅಣೆಕಟ್ಟಿನ ಮೇಲ್ಮಟ್ಟ ಹೊಂದಿರುವ 26 ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಕೆಲವು ಮೂಲರೂಪದ (skeleton) ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ರಾಜ್ಯಕ್ಕೆ ಅನುಮತಿ ನೀಡಲಾಗಿರುವುದರಿಂದ;

2000ರ ಏಪ್ರಿಲ್ 25ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ನೀಡಿದ ತನ್ನ ತೀರ್ಪಿನಲ್ಲಿ [ಕರ್ನಾಟಕ ರಾಜ್ಯ ವಿರುದ್ಧ ಆಂಧ್ರಪ್ರದೇಶ ರಾಜ್ಯ(2000) 9 SCC 572 @658) ಈಗಾಗಲೇ ಅಳವಡಿಸಲಾದ ಆಲಮಟ್ಟಿ ಅಣೆಕಟ್ಟಿನ 26 ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಮೂಲರೂಪ ಕಾಮಗಾರಿಗಳ ಮೇಲೆ 519.600 ಮೀಟರ್‌ಗಳವರೆಗೆ ಸ್ಕಿನ್ ಪ್ಲೇಟ್‌ಗಳನ್ನು ಅಳವಡಿಸಲು ಮತ್ತು ಆ ಮಟ್ಟದವರೆಗೆ ನೀರನ್ನು ಸಂಗ್ರಹಿಸಲು ಹಾಗೂ ಬಳಸಿಕೊಳ್ಳಲು ಕರ್ನಾಟಕ ರಾಜ್ಯಕ್ಕೆ ಹೆಚ್ಚುವರಿ ಅನುಮತಿ ನೀಡಲಾಗಿರುವುದರಿಂದ;

ಸದರಿ ಸಂವಿಧಾನ ಪೀಠವು, ಈಗಾಗಲೇ ಅಳವಡಿಸಲಾದ ಆಲಮಟ್ಟಿ ಅಣೆಕಟ್ಟಿನ 26 ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಮೇಲೆ 524.256 ಮೀಟರ್‌ಗಳ ಪೂರ್ಣ ಜಲಾಶಯ ಮಟ್ಟದವರೆಗೆ ಸ್ಕಿನ್ ಪ್ಲೇಟ್‌ಗಳನ್ನು ಅಳವಡಿಸುವ ಮತ್ತು ನೀರಿನ ಸಂಗ್ರಹ ಹಾಗೂ ಬಳಕೆಯ ಕುರಿತಾದ ವಿವಾದವನ್ನು ಮುಂದೆ ರಚನೆಯಾಗಲಿರುವ ಅಂತರ–ರಾಜ್ಯ ಜಲ ವಿವಾದಗಳ ನ್ಯಾಯಮಂಡಳಿಯು ನಿರ್ಧರಿಸಬೇಕೆಂದು ಅಭಿಪ್ರಾಯಪಟ್ಟಿರುವುದರಿಂದ;

2010ನೇ ಡಿಸೆಂಬರ್ 30ರ ತನ್ನ ಅಂತಿಮ ಆದೇಶ ಮತ್ತು 2013ನೇ ನವೆಂಬರ್ 29ರ ಮಾರ್ಪಡಿಸಿದ ಅಂತಿಮ ಆದೇಶದ ಮೂಲಕ, ಕೃಷ್ಣಾ ಜಲ ವಿವಾದಗಳ ನ್ಯಾಯಮಂಡಳಿ–2, ನ್ಯಾಯನಿರ್ಣಯದ (adjudication) ತರುವಾಯ ಈಗಾಗಲೇ ಅಳವಡಿಸಲಾದ ಆಲಮಟ್ಟಿ ಅಣೆಕಟ್ಟಿನ 26ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಮೇಲೆ ಯೋಜಿತ 524.256 ಮೀಟರ್‌ಗಳ ಪೂರ್ಣ ಜಲಾಶಯದ

ಪ್ರದೇಶದ ಬರಪೀಡಿತ ಪ್ರದೇಶಗಳಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಯೋಜಿಸಲಾದ ಒಟ್ಟು 303 ಟಿಎಂಸಿ ನೀರಿನ ಬಳಕೆ ಹಾಗೂ ಸಂಗ್ರಹಣೆಯನ್ನು ಸಾಧಿಸುವ ಕರ್ನಾಟಕ ರಾಜ್ಯದ ಹಕ್ಕನ್ನು ಎತ್ತಿಹಿಡಿದಿರುವುದರಿಂದ;

ಆಲಮಟ್ಟಿ ಅಣೆಕಟ್ಟಿನಲ್ಲಿ 524.256 ಮೀಟರ್‌ಗಳ ಪೂರ್ಣ ಜಲಾಶಯದ ಮಟ್ಟದವರೆಗೆ (FRL) ನೀರು ಸಂಗ್ರಹಿಸುವುದನ್ನು ಮತ್ತು ಕೃಷ್ಣಾ ಮೇಲ್ದಂಡೆ ಯೋಜನೆಯಡಿ 303 ಟಿಎಂಸಿ ನೀರಿನ ಒಟ್ಟು ಬಳಕೆಯನ್ನು ಪ್ರಶ್ನಿಸಿ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಿವಿಲ್ ಅಪೀಲುಗಳನ್ನು ಸಲ್ಲಿಸಿರುವುದರಿಂದ;

ಈಗಾಗಲೇ ಅಳವಡಿಸಲಾದ ಆಲಮಟ್ಟಿ ಅಣೆಕಟ್ಟಿನ 26 ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಮೇಲೆ 524.256 ಮೀಟರ್‌ಗಳ ಪೂರ್ಣ ಜಲಾಶಯದ ಮಟ್ಟದವರೆಗೆ (FRL) ಸ್ಕಿನ್ ಪ್ಲೇಟ್‌ಗಳನ್ನು ಅಳವಡಿಸುವುದನ್ನು ಸೇರಿದಂತೆ ಯಾವುದೆ ಸಿವಿಲ್ ಕಾಮಗಾರಿಗಳನ್ನು ನಿರ್ವಹಿಸದಂತೆ ಕರ್ನಾಟಕ ರಾಜ್ಯಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಯಾವುದೇ ತಡೆಯಾಜ್ಞೆಯನ್ನು ನೀಡಿಲ್ಲವಾದ್ದರಿಂದ;

ಅಂತರ–ರಾಜ್ಯ ನದಿ ನೀರು ವಿವಾದಗಳ ಅಧಿನಿಯಮ, 1956ರ ಪ್ರಕರಣ 6(1)ರ ಎರಡನೇ ಭಾಗದ ಅಡಿಯಲ್ಲಿ, ಕೃಷ್ಣಾ ಜಲವಿವಾದಗಳ ನ್ಯಾಯಮಂಡಳಿ–2ರ ಮಾರ್ಪಡಿಸಿದ ಅಂತಿಮ ಆದೇಶಕ್ಕೆ ಎಲ್ಲಾ ರಾಜ್ಯಗಳು ಬದ್ಧವಾಗಬೇಕಾಗಿರುವುದರಿಂದ, ಕರ್ನಾಟಕ ರಾಜ್ಯವು ಪೂರ್ವಸಿದ್ಧತಾ ಕಾಮಗಾರಿಯ ಭಾಗವಾಗಿ ಈಗಾಗಲೇ ಅಳವಡಿಸಲಾದ 26 ರೇಡಿಯಲ್ ಕ್ರಸ್ಟ್ ಗೇಟ್‌ಗಳ ಮೇಲೆ 524.256 ಮೀಟರ್‌ಗಳ ಪೂರ್ಣ ಜಲಾಶಯದ ಮಟ್ಟದವರೆಗೆ (FRL) ಸ್ಕಿನ್ ಪ್ಲೇಟ್‌ಗಳನ್ನು ಅಳವಡಿಸುವುದು ಅವಶ್ಯಕವಾಗಿದೆ;

ಆದ್ದರಿಂದ ಈಗ, ಕೃಷ್ಣಾ ನದಿಗೆ ಅಡ್ಡಲಾಗಿ ಕಟ್ಟಿರುವ ಆಲಮಟ್ಟಿ ಅಣೆಕಟ್ಟಿನಲ್ಲಿ ಈಗಾಗಲೇ ಅಳವಡಿಸಲಾದ 26 ರೇಡಿಯಲ್ ಕ್ರೆಸ್ಟ್ ಗೇಟ್‌ಗಳ ಮೇಲೆ 524.256 ಮೀಟರ್‌ಗಳ ಪೂರ್ಣ ಜಲಾಶಯದ ಮಟ್ಟದವರೆಗೆ (FRL) ಸ್ಕಿನ್ ಪ್ಲೇಟ್‌ಗಳ ಅಳವಡಿಕೆಯು, ಕೃಷ್ಣಾ ಜಲ ವಿವಾದಗಳ ನ್ಯಾಯಮಂಡಲಿ–2ರ 2010ನೇ ಡಿಸೆಂಬರ್ 30ರ ಅಂತಿಮ ಆದೇಶ ಮತ್ತು 2013ನೇ ನವೆಂಬರ್ 29ರ ಮಾರ್ಪಡಿಸಿದ ಅಂತಿಮ ಆದೇಶಗಳ ವಿರುದ್ಧ ಆಂಧ್ಯಪ್ರದೇಶ ಮತ್ತು ತೆಲಂಗಾಣ ರಾಜ್ಯಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿ, ಬಾಕಿಯಿರುವ ಸಿವಿಲ್ ಅಪೀಲುಗಳ ಅಂತಿಮ ತೀರ್ಪು ಮತ್ತು ಆದೇಶಗಳಿಗೆ ಒಳಪಟ್ಟು, ತಕ್ಷಣವೇ ಸದರಿ ಸ್ಕಿನ್ ಪ್ಲೇಟ್‌ಗಳನ್ನು ಅಳವಡಿಸಬೇಕೆಂಬ ಸ್ಪಷ್ಟೀಕರಣದೊಂದಿಗೆ ಕರ್ನಾಟಕ ಸರ್ಕಾರಕ್ಕೆ ಈ ಮೂಲಕ ನಿರ್ದೇಶಿಸುತ್ತದೆ ಹಾಗೂ ನಿರ್ಣಯಿಸುತ್ತದೆ.

ಮುಂದುವರೆದು, ಕರ್ನಾಟಕ ಸರ್ಕಾರವು ಯಾವುದೇ ವಿಳಂಬವಿಲ್ಲದೆ ಈ ಆಜ್ಞಾಪನೆಯನ್ನು (mandate) ಅನುಷ್ಠಾನಗೊಳಿಸಲು ಕಾಮಗಾರಿಗಳ ನಿರ್ವಹಣೆ ಮತ್ತು ಸಂಪನ್ಮೂಲಗಳ ಕ್ರೋಢಿಕರಣವನ್ನು ಒಳಗೊಂಡ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳತಕ್ಕದ್ದು ಮತ್ತು ಅದರ ಪ್ರಗತಿಯನ್ನು ಕಾಲಕಾಲಕ್ಕೆ ಈ ಸದನಕ್ಕೆ ತಿಳಿಸಬೇಕೆಂದು ನಿರ್ಣಯಿಸುತ್ತದೆ.

ನಿರ್ಣಯವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಾನ್ಯ ಸಭಾನಾಯಕರು ವಿಧಾನ ಪರಿಷತ್ತಿನ ಸಚಿವಾಲಯದ ಕಾರ್ಯದರ್ಶಿಯವರುಗಳು ನಿವೃತ್ತರಾಗಲಿದ್ದು, ಅವರುಗಳಿಗೆ ಶುಭ ಹಾರೈಸಿದರು.

## ಸಾರಾಂಶ

ವಿಧಾನ ಪರಿಷತ್ತಿನ 158ನೇ ಅಧಿವೇಶನ ಮುಂದುವರೆದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:06.03.2026 ರಿಂದ 26.03.2026 ರವರೆಗೆ ಒಟ್ಟು 13 ದಿನಗಳು ಅಂದರೆ, 66.30 ಗಂಟೆಗಳು ನಡೆಸಲಾಗಿರುತ್ತದೆ.

ದಿನಾಂಕ: 06.03.2026ರಂದು ಮಾನ್ಯ ಮುಖ್ಯಮಂತ್ರಿಯವರು 2026–27ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಒಪ್ಪಿಸಿದರು. ಆಯವ್ಯಯ ಅಂದಾಜುಗಳ ಮೇಲೆ ಸುಮಾರು 14 ಗಂಟೆ 36 ನಿಮಿಷಗಳ ಕಾಲ ಚರ್ಚೆ ನಡೆಸಿ, ದಿನಾಂಕ:26.03.2026 ರಂದು ಸರ್ಕಾರದಿಂದ ಉತ್ತರಿಸಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 03 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಮಾನ್ಯ ಶಾಸಕರಾದ ಶ್ರೀ ರಮೇಶ್ ಬಾಬು ಅವರ ದೂರವಾಣಿ ಕರೆಯನ್ನು ಸ್ವೀಕರಿಸದೆ ಶಿಷ್ಟಾಚಾರ ಉಲ್ಲಂಘಿಸಿದ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ಸೌಮ್ಯ ಅವರ ವಿರುದ್ಧ ಹಕ್ಕುಚ್ಯುತಿ ಸೂಚನೆ ಮಂಡಿಸಲಾಗಿದ್ದು, ಸದರಿ ಪ್ರಕರಣವನ್ನು ಪರಿಶೀಲಿಸಿ ವರದಿ ಸಲ್ಲಿಸಲು ಹಕ್ಕುಬಾಧ್ಯತಾ ಸಮಿತಿಗೆ ವಹಿಸಲಾಯಿತು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03 ಮತ್ತು 04 ಪಟ್ಟಿಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 151(2)ನೇ ಅನುಚ್ಛೇಧದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ

ಮೇಲಿನ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–13) ಹಾಗೂ ಜಲ ಜೀವನ ಮಿಷನ್ ಅನುಷ್ಠಾನದ ಕಾರ್ಯನಿರ್ವಹಣಾ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–12)ಗಳನ್ನು ಹಾಗೂ ಮಾರ್ಚ್ 2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ (ಅನುಸರಣಾ ಲೆಕ್ಕಪರಿಶೋಧನೆ–ಸಿವಿಲ್) (2026ರ ವರದಿ ಸಂಖ್ಯೆ–1)ಯನ್ನು, 2024–25 ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ (ರಾಜ್ಯ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ) (2026ರ ವರದಿ ಸಂಖ್ಯೆ–02)ಯನ್ನು ಹಾಗೂ ಮಾರ್ಚ್ 2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ರಾಜಸ್ವದ ವರದಿ (ಅನುಸರಣಾ ಲೆಕ್ಕಪರಿಶೋಧನೆ–ಸಿವಿಲ್) (2026ರ ವರದಿ ಸಂಖ್ಯೆ–3)ಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ ಅನುಚ್ಛೇದ 243(i) ಮತ್ತು (y)ರ ಮೇರೆಗೆ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಕುರಿತಾದ ಐದನೇ ರಾಜ್ಯ ಹಣಕಾಸು ಆಯೋಗದ 2026–2030ನೇ ಸಾಲಿನ ವರದಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪ್ರದೇಶ ವ್ಯಾಪ್ತಿಯ ಬೆಂಗಳೂರು ಪಶ್ಚಿಮ, ದಕ್ಷಿಣ, ಉತ್ತರ, ಪೂರ್ವ ಮತ್ತು ಕೇಂದ್ರ ನಗರ ಪಾಲಿಕೆಗಳ 2026–2030ನೇ ಸಾಲಿನ ವರದಿಗಳನ್ನು ಮಂಡಿಸಲಾಯಿತು.

2025–26ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನು, 2023–2024 ಹಾಗೂ 2024–25ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ ಮೂವತ್ತೊಂದನೇ ವರದಿಯನ್ನು ಹಾಗೂ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೂರನೇ ವರದಿಯನ್ನು ಒಪ್ಪಿಸಲಾಯಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಖಾಸಗಿ ಅನುದಾನಿತ/ಅನುದಾನ ರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಶಾಲೆಗಳ ಮಾನ್ಯತೆ ನವೀಕರಣದ ನಿಯಮಗಳನ್ನು ಸಡಿಲಿಸಿ ವಿನಾಯಿತಿ ನೀಡುವ ಕುರಿತು

ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಅವಧಿಯನ್ನು ದಿನಾಂಕ:16.03.2026ರಿಂದ ಆರು ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸಿ ಅಂಗೀಕರಿಸಲಾಯಿತು.

2025–26ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಮತ್ತು ಅಂತಿಮ ಕಂತು)ನ್ನು ಮಂಡಿಸಲಾಯಿತು.

ಕರ್ನಾಟಕ ಚಿನ್ನ ಅಡಮಾನವಿಟ್ಟ ಸಾಲಗಾರರ ರಕ್ಷಣಾ ವಿಧೇಯಕ, 2025 ಖಾಸಗಿ ವಿಧೇಯಕವನ್ನು ಮಂಡಿಸಲಾಯಿತು.

ಟಿ–20 ಭಾರತ ತಂಡ ವಿಜೇತರಾಗಿರುವುದಕ್ಕೆ ಅಭಿನಂದನಾ ಪ್ರಸ್ತಾವ ಮಂಡಿಸಲಾಯಿತು.

ನಿಯಮ 59 ರಡಿಯಲ್ಲಿ 01 ಸೂಚನೆಯನ್ನು ಸ್ವೀಕರಿಸಲಾಗಿದ್ದು, ನಿಯಮ 330ಕ್ಕೆ ಪರಿವರ್ತಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1742 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 180 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 162 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 35 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು 1562 ಪ್ರಶ್ನೆಗಳ ಪೈಕಿ 1418 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 08 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅವುಗಳಲ್ಲಿ ಒಂದು ಸೂಚನೆ ಚರ್ಚಿಸಿ ಉತ್ತರಿಸಲಾಯಿತು.

ನಿಯಮ 72ರಡಿಯಲ್ಲಿ 157 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 17 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 67 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 72 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 14 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 33 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯವೇಳೆ ಪ್ರಸ್ತಾವನೆಯ ಒಟ್ಟು 89 ಸೂಚನೆಗಳ ಪೈಕಿ 54 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತರೂಪದಲ್ಲಿರುವ 01 ವಿಧೇಯಕ ಹಾಗೂ ಅಂಗೀಕೃತ ರೂಪದಲ್ಲಿರುವ 09 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸಲು Skin Plates ಅಳವಡಿಕೆ ಕುರಿತಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತ ನಿರ್ಣಯವನ್ನು ಮಂಡಿಸಿ ಅಂಗೀಕರಿಸಲಾಗಿರುತ್ತದೆ.

ಜೂನ್ ಮತ್ತು ಜುಲೈ 2026ರ ಮಾಹೆಯಲ್ಲಿ ನಿವೃತ್ತಿ ಹೊಂದಲಿರುವ ಮಾನ್ಯ ಶಾಸಕರುಗಳಿಗೆ ಮಾನ್ಯ ಸಭಾಪತಿಯವರು ಶುಭ ಹಾರೈಸಿದರು.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:–**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಮಧ್ಯಾಹ್ನ 4.30 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು.**

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

****